


ಸಂತೋಷ್ ಕುಮಾರ್ ಕೆ.
ಸಾರಥ್ಯದಲ್ಲಿ

POSTAL REG. NO.:KRNA/BGE-1171/2022-2024
PUBLISHED ON 10TH OF EVERY MONTH POSTAL ON 11TH OR 14TH AT BENGALURU PSO, BENGALURU - 560 026.

RNI: NO. KARKAN/2012/44960

SANTHOSHKUMAR K.
CHIEF EDITOR


# ಪ್ರತಿಭಟನೆ

ಇದು ಹೋರಾಟಗಾರರ ಅಸ್ತ್ರ
ಸ್ವಾಭಿಮಾನಿ ಕನ್ನಡ ಮಾಸಿಕ ಪತ್ರಿಕೆ

PRATHIBHATANE KANNADA Monthly


| | | | | |
|---|---|---|---|---|
| Volume : 14 | November 2022 | Rs: 10-00 | Issue : 1 | Pages : 16 |
| ಸಂಪುಟ : 14 | ನವೆಂಬರ್ 2022 | ಬೆಲೆ: 10–00 | ಸಂಚಿಕೆ : 1 | ಪುಟ : 16 |


## ರೇಣುಕಾಚಾರ್ಯ ಸಹೋದರರ ಪುತ್ರ ಚಂದ್ರಶೇಖರ್ ಶವಪತ್ತೆ ಕಾಲುವೆಯಲ್ಲಿ ಬಿದ್ದಿದ್ದ ಕಾರು ಶಾಸಕ ರೇಣುಕಾಚಾರ್ಯ ಕಣ್ಣೀರು








## ರೇಪ್ ಅಂಡ್‌ಮರ್ಡರ್ ಕೇಸ್; ಸದಾ ಒಂಟಿಯಾಗಿಯೇ ಇರುತ್ತಿದ್ದ ಆರೋಪಿ ಬಾಲಕ ಆಳಂದ ಪೊಲೀಸ್ ಠಾಣೆ

## ಟಿಕೆಟ್ ಆಕಾಂಕ್ಷಿಗಳಿಂದ ಡಿಕೆಶಿ ಲಕ್ಷ-ಲಕ್ಷ ಲೂಟಿ; ಬಿಜೆಪಿ





## ಅಪ್ಪುಗೆ ಕರ್ನಾಟಕ ರತ್ನ ಪ್ರಶಸ್ತಿ ಪ್ರಧಾನ ಮಾಡಿದ ರಜನಿಕಾಂತ್ : ಮಳೆಯಲಿ ಅಭಿಮಾನಿಗಳು





## ಪಕ್ಷದಲ್ಲಿ ಕುರ್ಚಿ ಆಸೆಬಿಟ್ಟು ಕೆಲಸ ಮಾಡಿ : ಖರ್ಗೆ ಕರೆ

# ದೇವನಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ ಬಿಜೆಪಿ ಗೆಲುವು ಖಚಿತ: ಸಚಿವ ಸುಧಾಕರ್

***ವರದಿ ಮಧು ದೇವನಹಳ್ಳಿ***

ವಾರ್ತಾ ಜಾಲ ದೇವನಹಳ್ಳಿ: ದೇವನಹಳ್ಳಿ ವಿಧಾನ ಸಭಾ ಕ್ಷೇತ್ರದಲ್ಲಿ ಭಾರತೀಯ ಜನತಾ ಪಾರ್ಟಿಯ ಶಾಸಕರನ್ನು ಗೆಲ್ಲಿಸಿಕೊಳ್ಳುವುದೊಂದೇ ಪ್ರತಿ ಮುಖಂಡರ ಹಾಗೂ ಕಾರ್ಯಕರ್ತರ ಗುರಿಯಾಗಿರಬೇಕು ಎಂದು ಆರೋಗ್ಯ ಮತ್ತು ವೈದ್ಯಕೀಯ ಸಚಿವ ಡಾ॥ ಕೆ. ಸುಧಾಕರ್ ತಿಳಿಸಿದರು. ದೇವನಹಳ್ಳಿ ಪಟ್ಟಣದ ಬಿಬಿ ರಸ್ತೆಯಲ್ಲಿರುವ ಬಿಜೆಪಿ ಕಚೇರಿಯ ಆವರಣದಲ್ಲಿ ಬಿಜೆಪಿ ವತಿಯಿಂದ ಹಮ್ಮಿಕೊಂಡಿದ್ದ ನಾಡಪ್ರಭು ಕೆಂಪೇಗೌಡ ಪ್ರತಿಮೆ ಅನಾವರಣ ಪೂರ್ವಭಾವಿ ಸಭೆ ಹಾಗು ಸರ್ದಾರ್ ವಲ್ಲಭಬಾಯಿ ಪಟೇಲ್ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿ ಸರ್ದಾರ್ ವಲ್ಲಭಬಾಯಿ ಪಟೇಲ್ ಪುತ್ತಳಿಯನ್ನು ಜೀವನದಲ್ಲಿ ಪ್ರತಿಯೊಬ್ಬರೂ ಒಮ್ಮೆ ನೋಡಲೇಬೇಕು, ಬಿಜೆಪಿ ಪಕ್ಷವು ಬಹಳ ದೊಡ್ಡದು, ಇವತ್ತು ಮುಖ್ಯಮಂತ್ರಿಗಳಾದಿಯಾಗಿ ನನಗೂ ಸೇರಿ ಟಿಕೆಟ್ ಕೊಡುವುದು ಪಕ್ಷ, ಹಾಗಾಗಿ, ನಾಳೆ ಆಗುವುದನ್ನು ಊಹೆ ಮಾಡಿಕೊಳ್ಳಲು ಸಾದ್ಯವಿಲ್ಲ, ಅದ್ದರಿಂದ ಪಕ್ಷ ಸಂಘಟನೆ ಮುಂದುವರೆಯಬೇಕು, ಅದನ್ನು ಒಳ್ಳೆಯ ರೀತಿಯಲ್ಲಿ ಸಂಘಟನೆ ಮಾಡಿಕೊಂಡು ಹೋಗಬೇಕು, ಯಾರಿಗಾದರೂ ಟಿಕೆಟ್ ಬಗ್ಗೆ ಹೆಚ್ಚು ತಲೆಕೆಡಿಸಿಕೊಳ್ಳಬೇಡಿ, ಎಲ್ಲರೂ ಸಹ ನಿಷ್ಠೆಯಿಂದ ಪಕ್ಷವನ್ನು ಕಟ್ಟುವಂತಹ ಕೆಲಸ ಮಾಡೋಣ ಎಂದು ಕರೆ ನೀಡಿದರು. ಎಲ್ಲಾ ತಾಲೂಕಿಗಿಂತ ಅತ್ಯಂತ ಹೆಚ್ಚು ಲಾಭವೇನಾದರೂ ಆಗಿದ್ರೆ, ಅದು ದೇವನಹಳ್ಳಿ ತಾಲೂಕಿನವರಿಗೆ ಆಗಿದೆ ಎಂದು ತಿಳಿದುಕೊಂಡಿದ್ದೇನೆ, ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಆಗಿದೆ ಕೆಂಪೇಗೌಡರ ಹೆಸರಿನಲ್ಲಿ ಅದೇ ರೀತಿ ಐಟಿ ಪಾರ್ಕ್, ಡೆಫೆನ್ಸ್ ಪಾರ್ಕ್ ಅನ್ನು ಸಹ ವಿಶೇಷವಾಗಿ ಮಾಡಲಾಗುತ್ತಿದೆ. ಇದು ಬಹಳ ಕೈಗಾರಿಕೆಗಳು ಇಲ್ಲಿ ತಲೆ ಎತ್ತಿ ರೈತರಿಗೆ ಮತ್ತು



ರೈತರ ಮಕ್ಕಳಿಗೆ ಒಳ್ಳೆಯ ಬದುಕನ್ನು ಕಟ್ಟಿಕೊಡುವ ಕೆಲಸವಾಗುತ್ತಿದೆ, ದೇಶ ಒಗ್ಗಟ್ಟಾಗಿ ಅಖಂಡತೆಯಲ್ಲಿರಲು ಅನೇಕ ಸ್ವಾತಂತ್ರ್ಯ ಹೋರಾಟ ಗಾರರ ಬಲಿದಾನ ಸರ್ದಾರ್ ವಲ್ಲಭಭಾಯ್ ಪಟೇಲ್ ರವರ ಆದರ್ಶ ನಾಯಕತ್ವ ಎಲ್ಲರಿಗೂ ಮಾದರಿಯಾಗಿದೆ. ಕೆಂಪೇಗೌಡರು ಕಟ್ಟಿದ ಬೆಂಗಳೂರು ಜಾಗತಿಕ ಮಟ್ಟದಲ್ಲಿ ಗುರುತಿಸಿಕೊಂಡಿದೆ ಹಾಗೂ ಪ್ರಪಂಚದ ಮಹಾ ನಗರಗಳಲ್ಲಿ ಬೆಂಗಳೂರೂ ಒಂದಾಗಿದೆ, ಏಷ್ಯಾದಲ್ಲಿ ವೇಗವಾಗಿ ಬೆಳೆಯುತ್ತಿರುವ ಎರಡನೇ ನಗರವಾಗಿದೆ ಇಂತಹ ನಗರವನ್ನು ಹುಟ್ಟಿಹಾಕಿದ ನಾಡಪ್ರಭು ಕೆಂಪೇಗೌಡರ ಕಂಚಿನ ಪುತ್ಥಳಿ ಅನಾವರಣಕ್ಕೆ ನವೆಂಬರ್11 ರಂದು ಪ್ರಧಾನಿ ಆಗಮಿಸುತ್ತಿದ್ದಾರೆ. ಮಾಜಿ ಶಾಸಕ ಪಿಳ್ಳಮುನಿಶಾಮಪ್ಪ ಅವರು 25 ಸಾವಿರ ಜನರನ್ನು ಕರೆತರಲಿದ್ದಾರೆ ಎಂದು ಹೇಳಿದ್ದಾರೆ. ಇಲ್ಲಿ ನೆರೆದಿರುವ ಪ್ರತಿಯೊಬ್ಬರು ಜನರನ್ನು ಕರೆತರುವ ಕೆಲಸವನ್ನು ಮಾಡಬೇಕು, ಪಕ್ಷದಲ್ಲಿ ಸಕ್ರಿಯವಾಗಿ ತೊಡಗಿಕೊಂಡು ಪಕ್ಷ ಬಲಿಷ್ಠಗೊಳಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ,

ರಾಜ್ಯದ ಅತ್ಯುನ್ನತ ಕರ್ನಾಟಕ ರತ್ನ ಪ್ರಶಸ್ತಿಯನ್ನು ಹೆಮ್ಮೆಯ ನಟ ಪುನೀತ್‌ಗೆ ನೀಡಲಾಗುತ್ತಿದ್ದು, ವಿಧಾನಸೌಧದಮುಂದೆ ಲಕ್ಷಾಂತರ ಜನ ಸೇರಲಿದ್ದಾರೆ ಅವರ ಕುಟುಂಬಸ್ಥರೆಲ್ಲಾ ಭಾಗವಹಿಸಲಿದ್ದಾರೆ ಎಂದು ಹೇಳಿದರು. ಮಾಜಿ ಶಾಸಕ ಪಿಳ್ಳ ಮುನಿಶಾಮಪ್ಪ ಮಾತನಾಡಿ ತಾಲೂಕಿನಲ್ಲಿ ಹೈವೇ ಆಗಿರುವ ಕಾರಣ ಕೆಲವು ಗ್ರಾಮಗಳ ಬಳಿ ಪಾದಚಾರಿಗಳಿಗೆ ಮೇಲ್ಸೇತುವೆ ನಿರ್ಮಾಣ ಮಾಡಬೇಕು ತಾಲೂಕಿನ ಸೀಕಾಯನಹಳ್ಳಿ ಗೇಟ್ ಮುಂಬಾಗ ಸರ್ಕಾರಿ ಶಾಲೆಯಿದ್ದು ಸುತ್ತ ಮುತ್ತಲಿನ ಅನೇಕ ಗ್ರಾಮಗಳ ಮಕ್ಕಳು ಅಲ್ಲಿ ವ್ಯಾಸಂಗ ಮಾಡುತ್ತಿದ್ದು ರಸ್ತೆ ದಾಟಲು ಬಹಳ ಶ್ರಮ ಪಡುತ್ತಿದ್ದಾರೆ, 11ರಂದು ಉದ್ಘಾಟನೆಗೊಳ್ಳಲಿರುವ 108 ಅಡಿ ಪ್ರತಿಮೆ ಅನಾವರಣಗೊಳಿಸಲು ಭಾರತದ ಹೆಮ್ಮೆಯ ಪ್ರಧಾನಿ ನರೇಂದ್ರ ಮೋದಿ ಆಗಮಿಸಲಿದ್ದು ತಾಲೂಕಿನಾದ್ಯಂತ 25ಸಾವಿರಕ್ಕೂ ಹೆಚ್ಚು ಜನರನ್ನು ಕರೆತರುವ ಕೆಲಸವನ್ನು ನಾನು ಮಾಡಲಿದ್ದೇನೆ, ಈ ಕಾರ್ಯಕ್ರಮದಲ್ಲಿ ಪಕ್ಷ, ಜಾತಿ, ಧರ್ಮ ಬೇದ ಮರೆತು ಜನ ಬರಿಲಿದ್ದಾರೆ ಎಂದರು. ಇದೇ ಸಂದರ್ಭದಲ್ಲಿ ಭಾರತದ ಉಕ್ಕಿನ ಮನುಷ್ಯ ಸರ್ದಾರ್ ವಲ್ಲಭಾಯಿ ಪಟೇಲ್ ಅವರನ್ನು ಸ್ಮರಿಸುವುದರ ಮೂಲಕ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು. ಈ ವೇಳೆ ಹಲವಾರು ಯುವಕ ಮುಖಂಡರು ವಿವಿಧ ಪಕ್ಷಗಳನ್ನು ತೊರೆದು ಬಿಜೆಪಿ ಪಕ್ಷಕ್ಕೆ ಸೇರ್ಪಡೆ ಗೊಂಡರು. ಕಾರ್ಯಕ್ರಮದಲ್ಲಿ ಬಿಜೆಪಿ ಜಿಲ್ಲಾ ಅಧ್ಯಕ್ಷ ಎ.ವಿ.ನಾರಾಯಣಸ್ವಾಮಿ, ಪ್ರಧಾನ ಕಾರ್ಯದರ್ಶಿ ಶಿವಪ್ರಸಾದ್, ಮಾಜಿ ಶಾಸಕ ಪಿಳ್ಳಮುನಿಶಾಮಪ್ಪ, ಬಯ್ಯಪ್ಪ ಮಾಜಿ ಅಧ್ಯಕ್ಷ ಅಶ್ವಥ್ ನಾರಾಯಣ್, ರಾಜ್ಯ ಎಸ್.ಸಿ, ಮೋರ್ಚಾ ಕೋಶಾಧ್ಯಕ್ಷ ಎ.ಕೆ.ಪಿ.ನಾಗೇಶ್, ತಾಲೂಕು ಪ್ರಧಾನ ಕಾರ್ಯದರ್ಶಿ ಮಂಜುನಾಥ್, ರವಿಕುಮಾರ್, ಮಾಧ್ಯಮ ಪ್ರಮುಖ್ ಎಸ್. ರಮೇಶ್, ಮುಖಂಡರಾದ ವಿನಯ್‌ಕುಮಾರ್, ಗೋಪಿನಾಥ್, ಕೆ.ಎನ್. ರಮೇಶ್ ಬಾಬು, ಚಿಕ್ಕಬಳ್ಳಾಪುರದ ಎಸ್‌ಆರ್‌ಎಸ್ ದೇವರಾಜ್, ಮಹಿಳೆಯರಾದ ನಾಗವೇಣಿ, ನಯನ, ಲಕ್ಷ್ಮೀ , ದಾಕ್ಷಾಯಿಣಿ, ವಿಜಯಪುರ ಮಂಜುನಾಥ್ ಇದ್ದರು.

# ಮನಸೂರೆಗೊಂಡ ಡಾ.ಲೀಲಾ ಬಸವರಾಜು ಅಭಿನಯಿಸಿದ ಏಕವ್ಯಕ್ತಿ ಪ್ರಯೋಗ 'ಅವ್ವರಸಿ'ಯ ಯಶಸ್ವಿ ಪ್ರದರ್ಶನ

ಪೋರ್ಚಗೀಸರ ವಿರುದ್ದ ಹೋರಾಡಿದ ವೀರ ವನಿತೆ ?ರಾಣಿ ಚೆನ್ನಭೈರಾದೇವಿ ಯ ಜೀವನ ಕಥಾನಕವೇ ಬಲುರೋಚಕ. ದಕ್ಷಿಣ ಕೊಂಕಣ ಹಾಗೂ ಮಲೆನಾಡನ್ನು 54 ವರ್ಷಗಳವರೆಗೂ ಆಳಿದ ಚೆನ್ನಭೈರಾದೇವಿ; ಕರಿಮೆಣಸಿನ ರಾಣಿಯ ಅಕಳಂಕ ಚರಿತೆಯನ್ನು ಡಾ. ಗಜಾನನ ಶರ್ಮ ಅವರು ಕಾದಂಬರಿ ರೂಪದಲ್ಲಿ ಬರೆದ ಈ ಕೃತಿ. ರಾಜನೀತಿ, ಜೀವನ ವಿಧಾನ, ಧೀಮಂತಿಕೆ, ಉತ್ಕಟವಾದ ಪ್ರೇಮ ಮತ್ತು ಹೆಣ್ಣಿನ ಅಂತಃಸತ್ವವನ್ನು ತೆರೆದಿಡುವ ಮೂಲಕ ಕನ್ನಡ ಚಾರಿತ್ರಿಕ ಕಥನಗಳ ಪಟ್ಟಿಗೆ ಅಮೂಲ್ಯ ಸೇರ್ಪಡೆ. 450 ಪುಟಗಳ ಬೃಹತ್ ಐತಿಹಾಸಿಕ ಕಾದಂಬರಿಯ ಆಯ್ದ ಭಾಗಗಳನ್ನು ರಂಗರೂಪಾಂತರಗೊಳಿಸುವುದು ಸಾಮಾನ್ಯ ವಿಷಯವಲ್ಲ . ಹಿರಿಯ ರಂಗಭೂಮಿ ಕಲಾವಿದೆ ಡಾ.ಲೀಲಾ ಬಸವರಾಜು ಅಭಿನಯಿಸಿದ ಏಕವ್ಯಕ್ತಿ ಪ್ರಯೋಗ 'ಅವ್ವರಸಿ' ಯಶಸ್ವಿ ಪ್ರದರ್ಶನ ಕಂಡಿತು. ಕಲಾ ಸೇವೆಯಲ್ಲಿ ತಮ್ಮನ್ನು ಅರ್ಧ ಶತಮಾನದಿಂದಲೂ ತೊಡಗಿಸಿಕೊಂಡಿರುವ ಕಲಾವಿದೆ ಡಾ.ಲೀಲಾ ಬಸವರಾಜು 75ರ ವಯೋಮಾನದಲ್ಲೂ ಲವಲವಿಕೆಯಿಂದ ಒಂದು ಗಂಟೆ ಇಪ್ಪತ್ತು ನಿಮಿಷ ಅಸ್ಖಲಿತ ನಿರೂಪಣೆಯಿಂದ ಅಭಿನಯಿಸಿದ್ದು ಈ ಪ್ರಯೋಗದ ವಿಶೇಷತೆ. ಅವರ ಸಂಭಾಷಣೆಯಲ್ಲಿನ ದೃಡತೆ, ಸನ್ನಿವೇಶಕ್ಕೆ ತಕ್ಕಂತೆ ರಸಭಾವ , ಬಾಡಿ ಲ್ಯಾಂಗ್ವೇಜ್ ಎಲ್ಲವೂ ಪ್ರೇಕ್ಷಕರನನ್ನು ಮಂತ್ರಮುಗ್ಧರನ್ನಾಗಿ ಮಾಡಿತು. ತಮ್ಮ ಏಕವ್ಯಕ್ತಿ ಪ್ರಯೋಗಗಳಿಂದ ನಾಡಿನ ಮನೆಮತಾಗಿರುವ ನಟ– ನಿರ್ದೇಶಕ ಕೃಷ್ಣಮೂರ್ತಿ ಕವತ್ತಾರು 'ಅವ್ವರಸಿ' ಪ್ರಯೋಗದ ರಂಗ ರೂಪ, ವಿನ್ಯಾಸ , ಸಂಗೀತ ಮತ್ತು ನಿರ್ದೇಶನದ ಹೊಣೆಹೊತ್ತಿದ್ದರು. ಹಿತಮಿತವಾದ ರಂಗಸಜ್ಜಿಕೆ , ಹಿನ್ನೆಲೆ ಸಂಗೀತ ಇದಕ್ಕೆ ಪೂರಕವಾಗಿತ್ತು.



ಎನ್ ಆರ್ ಕಾಲೋನಿಯ ಪ್ರಭಾತ್ ಕಲಾಪೂರ್ಣಿಮಾದಲ್ಲಿ ಸೆಂಟರ್ ಫಾರ್ ಡಿವೈನ್ ಆರ್ಟ್ಸ್ ರವರು ಸ್ವಾತಂತ್ರ್ಯ ಅಮೃತಮಹೋತ್ಸವದ ಸಂದರ್ಭದಲ್ಲಿ ಆಯೋಜಿಸಿದ್ದ ಈ ಪ್ರದರ್ಶನಕ್ಕೆ ಅದಮ್ಯ ಚೇತನ ಅಧ್ಯಕ್ಷೆ ಡಾ.ತೇಜಸ್ವಿನಿ ಅನಂತಕುಮಾರ್ ಚಾಲನೆ ನೀಡಿದರು, ನಿವೃತ್ತ ಐಎಎಸ್ ಅಧಿಕಾರಿ , ಕರ್ನಾಟಕ ಗಡಿ ಅಭಿವೃದ್ದಿ ಪ್ರಾಧಿಕಾರದ ಅಧ್ಯಕ್ಷ ಡಾ.ಸಿ.ಸೋಮಶೇಖರ್ ಅಧ್ಯಕ್ಷತೆ ವಹಿಸಿದ್ದ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಸಾಹಿತಿ ಡಾ. ಗಜಾನನ ಶರ್ಮ, ಹಿರಿಯ ರಂಗಕರ್ಮಿ ಕಲಾಗಂಗೋತ್ರಿ ಸಂಸ್ಥೆಯ ಡಾ.ಬಿ.ವಿ.ರಾಜಾರಾಂ ಉಪಸ್ಥಿತರಿದ್ದರು.ನಾಟ್ಯ ದರ್ಪಣ ಸಂಸ್ಥೆಯ ಅಧ್ಯಕ್ಷ ಅಬ್ಬೂರು ಜಯತೀರ್ಥ , ಕೆ.ವಿ.ಸುಬ್ಬಣ್ಣ ಆಪ್ತ ರಂಗಮಂದಿರ ಸಂಸ್ಥಾಪಕ ಗೋಪಿನಾಥ್ ಬಿ.ಆರ್, ನಟ– ನಿರ್ದೇಶಕ ಶ್ರೀಪತಿ ಮಂಜನ ಬೈಲು ಅವರನ್ನು ಅಭಿನಂದಿಸಲಾಯಿತು.

ಸಂಪಾದಕೀಯ...



ಪ್ರಧಾನ ಸಂಪಾದಕರು
**ಸಂತೋಷ ಕುಮಾರ್ ಕೆ.**



ಉಪ ಸಂಪಾದಕರು
**ಡಾ. ವಿನಯ್‌ಕುಮಾರ್ ವಿ. ನಾಯಕ್**

ಕಛೇರಿ ವಿಳಾಸ :
**ನಂ.233/32, 10ನೇ ಕ್ರಾಸ್,**
**ನೀಲ್ ರೆಸ್ಟೋರೆಂಟ್, ಗೆದ್ದಲಹಳ್ಳಿ,**
**ಆರ್‌ಎಂವಿ ಎಕ್ಸಟೆಕ್ಷನ್ 2ನೇ ಹಂತ,**
**ಬೆಂಗಳೂರು-560094**
**ಮೊ: 9845222299**
**9448200759**

**ಪತ್ರಿಕೆಗೆ ಚಂದಾದಾರರಾಗುವ ಮೂಲಕ ಪತ್ರಿಕೆ ಯಶಸ್ವಿಯಾಗಲು ಸಹಕರಿಸಿ**

ಚಂದಾ ವಿವರ

| | |
|---|---|
| ಮಹಾ ಪೋಷಕರು: | ರೂ. 25,000-00 |
| ಪೋಷಕರು : | ರೂ. 10,000-00 |
| ಆಜೀವ ಸದಸ್ಯರು : | ರೂ. 5,000-00 |

**ಜಾಹೀರಾತು ವಿವರ ಬಹುವರ್ಣ**

| | |
|---|---|
| ಪೂರ್ಣ ಪುಟ : | ರೂ. 35,000-00 |
| ಅರ್ಧ ಪುಟ : | ರೂ. 20,000-00 |
| ಕಾಲು ಪುಟ : | ರೂ. 8,000-00 |
| ಸಾಮಾನ್ಯ : | ರೂ. 2,500-00 |

**ಕಪ್ಪು ಬಿಳುಪು**

| | |
|---|---|
| ಪೂರ್ಣ ಪುಟ : | ರೂ. 20,000-00 |
| ಅರ್ಧ ಪುಟ : | ರೂ. 10,000-00 |
| ಕಾಲುಪುಟ : | ರೂ. 5,000-00 |
| ಶುಭ ಸಂದೇಶ : | ರೂ. 2,000-00 |


# ಬೆಂಗಳೂರು ಗ್ರಾಮಾಂತರ ದೇವನಹಳ್ಳಿಯಲ್ಲಿ ಸಡಗರದ ಕನ್ನಡ ರಾಜ್ಯೋತ್ಸವ



ಹೊರ ರಾಜ್ಯದ ವೈದ್ಯಕೀಯ ವಿದ್ಯಾರ್ಥಿಗಳಿಗೆ ಕನ್ನಡ ಕಲಿಕೆ ಪ್ರಸಕ್ತ ಸಾಲಿನಿಂದ ಜಾರಿ: ಸಚಿವ ಡಾ.ಕೆ.ಸುಧಾಕರ್

***ವರದಿ ಮಧು ದೇವನಹಳ್ಳಿ...***

ವಾರ್ತಾ ಜಾಲ ದೇವನಹಳ್ಳಿ: ಹೊರ ರಾಜ್ಯಗಳಿಂದ ಬಂದು ರಾಜ್ಯದ ವೈದ್ಯಕೀಯ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಎಲ್ಲಾ ವಿದ್ಯಾರ್ಥಿಗಳಿಗೆ ಪ್ರಸಕ್ತ ಸಾಲಿನಿಂದಲೇ ಕನ್ನಡ ಭಾಷೆ ಕಲಿಸುವ ಕಾರ್ಯ ಜಾರಿಗೊಳಿಸಲಾಗುವುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ವೈದ್ಯಕೀಯ ಶಿಕ್ಷಣ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಕೆ.ಸುಧಾಕರ್ ಅವರು ಹೇಳಿದರು. ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಸಹಯೋಗದಲ್ಲಿ ದೇವನಹಳ್ಳಿ ಕ್ರೀಡಾಂಗಣದಲ್ಲಿ ಇಂದು ಆಯೋಜಿಸಿದ್ದ "67 ನೇ ಕನ್ನಡ ರಾಜ್ಯೋತ್ಸವ" ಸಮಾರಂಭದಲ್ಲಿ ರಾಷ್ಟ್ರ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು. ಕನ್ನಡ ಭಾಷೆ ಸಮಗ್ರ ಅಭಿವೃದ್ಧಿ ವಿಧೇಯಕವನ್ನು ಮಂಡಿಸಿ, ಕನ್ನಡದ ಮಹತ್ವವನ್ನು ಹೆಚ್ಚಿಸುವ ಕಾರ್ಯಕ್ಕೆ ಸರ್ಕಾರ ಮುಂದಾಗಿದೆ. ಮುಂಬರುವ ದಿನಗಳಲ್ಲಿ ಕನ್ನಡದ ಬೆಳವಣಿಗೆಗೆ ಈ ವಿಧೇಯಕ ವರದಾನವಾಗಲಿದೆ. ರಾಜ್ಯದ ವೈದ್ಯಕೀಯ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಹೊರ ರಾಜ್ಯದ ವಿದ್ಯಾರ್ಥಿಗಳಿಗೆ ಕಡ್ಡಾಯವಾಗಿ ಕನ್ನಡ ಭಾಷೆ ಕಲಿಸುವ ಕಾರ್ಯಕ್ರಮವನ್ನು ಪ್ರಸಕ್ತ ವರ್ಷದಿಂದ ಜಾರಿಗೊಳಿಸ ಲಾಗುವುದು ಎಂದರು.

ಬೆಂಗಳೂರು ಮಹಾನಗರಕ್ಕೆ ಹೊಂದಿಕೊಂಡಿರುವ ಗ್ರಾಮಾಂತರ ಜಿಲ್ಲೆಯು ಕೈಗಾರಿಕೆ, ಕೃಷಿ, ತೋಟಗಾರಿಕೆ ಮತ್ತಿತರ ರಂಗಗಳಲ್ಲಿ ಅಭಿವೃದ್ಧಿ ಸಾಧಿಸುತ್ತಿದೆ. ರಾಜ್ಯದಲ್ಲಿ 100 ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೆ ಏರಿದಲಾಗುತ್ತಿದೆ. 400 ಕ್ಕೂ ಹೆಚ್ಚು ನಮ್ಮ ಕ್ಲಿನಿಕ್‌ಗಳು ಇದೇ ನವೆಂಬರ್‌ನಿಂದ ಪ್ರಾರಂಭವಾಗಲಿವೆ ಎಂದು ಘೋಷಿಸಿದರು.

ಅಚ್ಚ ಹಸಿರಿನ ಬೆಟ್ಟ, ಗುಡ್ಡಗಳು, ಶರಣರು, ದಾಸರು, ಶೂರ ಪುರುಷರು, ವೀರ ನಾರಿಯರು, ಸಾಹಿತಿಗಳ, ವಿಜ್ಞಾನಿಗಳ ನೆಲ ನಮ್ಮ ಕನ್ನಡ ನಾಡು. ನೆಲ-ಜಲಕ್ಕೆ ಶ್ರಮಿಸಿದ ಮಹನೀಯರನ್ನು ನಾವೆಲ್ಲ ಸದಾ ಕಾಲ ನೆನೆಯಬೇಕು. ವಿಶ್ವದ ಭಾಷೆಗಳಲ್ಲಿಯೇ ಕನ್ನಡ ನುಡಿ ಹಾಗೂ ಲಿಪಿ ಸುಂದರವಾದ ಸ್ಥಾನ ಗಳಿಸಿದೆ. ಸುಮಾರು 250 ವರ್ಷಗಳ ಕಾಲ ನಮ್ಮ ದೇಶವನ್ನಾಳಿದ ಬ್ರಿಟನ್ನಿನ ಪ್ರಧಾನಿಯಾಗಿ ಭಾರತೀಯ ಮೂಲದ ಸಂಜಾತ, ಕನ್ನಡ ನಾಡಿನ ಅಳಿಯ ರಿಷಿ ಸುನಾಕ್ ಆಯ್ಕೆಯಾಗಿರುವುದು, ಕೆನಡಾದ ಸಂಸದರಾಗಿರುವ ಚಂದ್ರ ಆರ್ಯ ಕನ್ನಡದಲ್ಲಿ ಪ್ರಮಾಣ ವಚನ ಸ್ವೀಕರಿಸಿರುವುದು ಹೆಮ್ಮೆಯ ಸಂಗತಿಯಾಗಿದೆ. ತೆಲುಗು, ತಮಿಳು, ಮರಾಠಿ, ಕನ್ನಡ ಹೀಗೆ ಹಲವು ಭಾಷಿಕರ ಸಂಸ್ಥಾನಗಳಲ್ಲಿ ಹರಿದು ಹಂಚಿ ಹೋಗಿದ್ದ ಕನ್ನಡಿಗರೆಲ್ಲ ಏಕೀಕೃತ ಕನ್ನಡ ನಾಡಿನಲ್ಲಿ ಒಂದಾಗಿರುವುದರ ಹಿಂದೆ ಚಳುವಳಿಯ ದೊಡ್ಡ ಇತಿಹಾಸವಿದೆ. ಕನ್ನಡವು ಉತ್ತರ ಕರ್ನಾಟಕ, ಕರಾವಳಿ, ಹಳೆ ಮೈಸೂರು, ಮಲೆನಾಡು ಪ್ರದೇಶಗಳಲ್ಲಿ ವಿಭಿನ್ನ ಹಾಗೂ ವೈವಿಧ್ಯಮಯ ಶೈಲಿಯ ಸುಂದರ ನುಡಿಗಳಲ್ಲಿ ಅನುರಣಿಸುತ್ತಿದೆ. ಡೆಪ್ಯೂಟಿ ಚೆನ್ನಬಸಪ್ಪ, ರೊದ್ದಂ ಶ್ರೀನಿವಾಸರಾಯರು ಮೊದಲಾದ ಮಹನೀಯರು ಕನ್ನಡ ನಾಡಿನ ಏಕೀಕರಣಕ್ಕೆ ಹೋರಾಡಿದ ಪ್ರಮುಖ ನಾಯಕರಾಗಿದ್ದಾರೆ. ಕನ್ನಡ ಚಿತ್ರರಂಗವೂ ಕೂಡ ನಾಡು, ನುಡಿ, ಸಂಸ್ಕೃತಿಗೆ ಮಹತ್ವದ ಕೊಡುಗೆಗಳನ್ನು ನೀಡಿದೆ. ದಿವಂಗತ ಪುನೀತ್ ರಾಜ್‌ಕುಮಾರ್ ಅವರಿಗೆ ಇದೇ ದಿನ ಕರ್ನಾಟಕ ರತ್ನ ಪ್ರಶಸ್ತಿಯು ಮರಣೋತ್ತರವಾಗಿ ಪ್ರದಾನವಾಗುತ್ತಿರುವುದು ಅಭಿಮಾನದ ಸಂಗತಿಯಾಗಿದೆ ಎಂದು ಹೆಮ್ಮೆಯ ನುಡಿಗಳನ್ನಾಡಿದರು. ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ದೇವನಹಳ್ಳಿ ವಿಧಾನ ಸಭಾ ಕ್ಷೇತ್ರದ ಶಾಸಕ ನಿಸರ್ಗ ನಾರಾಯಣಸ್ವಾಮಿ ಅವರು ಮಾತನಾಡಿ, ಕರ್ನಾಟಕ ರಾಜ್ಯ ಉದಯವಾಗಿ 67 ವರ್ಷಗಳಾಗಿವೆ. ಭಾಷಾವಾರು ಪ್ರಾಂತ್ಯಗಳನ್ನು ವಿಂಗಡಣೆ ಮಾಡುವ ಸಂದರ್ಭದಲ್ಲಿ ಕನ್ನಡಿಗರನ್ನೆಲ್ಲ ಒಂದೇ ಆಡಳಿತದ ವ್ಯಾಪ್ತಿಗೆ ಒಳಪಡಿಸಲು ಅನೇಕ ಮಹನೀಯರು ಶ್ರಮಿಸಿದ್ದಾರೆ. ಕನ್ನಡ ನಾಡಿನ ಕೈಗಾರಿಕೆಗಳು,ಉದ್ಯಮಗಳಲ್ಲಿ ಸ್ಥಳೀಯರಿಗೆ ಉದ್ಯೋಗವಕಾಶಗಳ ಮೀಸಲಾತಿ ಸೌಲಭ್ಯ ಸಿಗಬೇಕು. ಸರ್ಕಾರ ಈ ನಿಟ್ಟಿನಲ್ಲಿ ಕ್ರಮವಹಿಸಿ, ಕನ್ನಡಿಗರ ಹಿತ ಕಾಯಬೇಕು ಎಂದರು.

* ಆಕರ್ಷಕ ಪಥ ಸಂಚಲನ: * ಜಿಲ್ಲಾ ಸಶಸ್ತ್ರ ಮೀಸಲು ಪಡೆ, ಪೊಲೀಸ್, ಮಹಿಳಾ ಪೊಲೀಸ್, ವಿವಿಧ ಶಾಲೆ-ಕಾಲೇಜುಗಳ ತಂಡಗಳು ಸೇರಿ ವಿವಿಧ 18 ತಂಡಗಳಿಂದ ಶಿಸ್ತುಬದ್ಧ ಹಾಗೂ ಆಕರ್ಷಕ ಪಥಸಂಚಲನ ಜರುಗಿತು. ಸಾಧಕರಿಗೆ ಸನ್ಮಾನ ವಿವಿಧ ರಂಗಗಳಲ್ಲಿ ಸಾಧನೆಗೈದಿರುವ ದೇವನಹಳ್ಳಿ ಬಿ.ಕೆ.ಗೋಪಾಲ (ಸಂಗೀತ), ಕಂಟನಕುಂಟೆಯ ಕೆ.ಎಂ. ಕೃಷ್ಣಮೂರ್ತಿ (ಪೌರಾಣಿಕ ನಾಟಕ), ಶ್ಯಾಕಲದೇವನಪುರದ ವಿ.ರಾಮಚಂದ್ರ(ಜನಪದ), ದೇವನಹಳ್ಳಿ ವಿ.ಎಂ. ವೇಣು ಗೋಪಾಲ (ಕ್ರೀಡೆ), ಯಲಿಯೂರು ದೇವರಾಜ ವೈ.ಎ. (ಕೃಷಿ), ದೇವನಹಳ್ಳಿಯ ಸುರೇಶಬಾಬು (ಸಾಹಿತ್ಯ), ಹೊಸಕೋಟೆಯ ಬೆಟ್ಟಹಳ್ಳಿ ಗೋಪಿನಾಥ (ಸಮಾಜಸೇವೆ), ದೊಡ್ಡಬಳ್ಳಾಪುರದ ಯುಕ್ತಿ ರಾಜೇಂದ್ರ (ಕ್ರೀಡೆ-ಏರ್ ರೈಫಲ್ ಶೂಟಿಂಗ್), ನೆಲಮಂಗಲದ ಬಿ.ರಾಮಯ್ಯ (ಸಾಮಾಜಿಕ ನಾಟಕ) ಹಾಗೂ ದೊಡ್ಡಬಳ್ಳಾಪುರದ ಬಿ.ಎಸ್. ಶ್ರೀಕಂಠಮೂರ್ತಿ (ಕ್ರೀಡೆ) ಅವರನ್ನು ಸಚಿವರು ಹಾಗೂ ಗಣ್ಯರು 67 ನೇ ಕನ್ನಡ ರಾಜ್ಯೋತ್ಸವದ ಜಿಲ್ಲಾ ಮಟ್ಟದ ಪ್ರಶಸ್ತಿ ನೀಡಿ ಸನ್ಮಾನಿಸಿ, ಗೌರವಿಸಿದರು. ಸೌಲಭ್ಯಗಳ ವಿತರಣೆ ಎಸ್.ಎಸ್.ಎಲ್.ಸಿ. ಹಾಗೂ ಉನ್ನತ ವ್ಯಾಸಂಗ ಮಾಡುತ್ತಿರುವ ಅಂಧ ವಿದ್ಯಾರ್ಥಿಗಳಿಗೆ ಉಚಿತ ಟಾಕಿಂಗ್ ಲ್ಯಾಪ್‌ಟಾಪ್ ಹಾಗೂ ಬ್ರೈಲ್‌ಕಿಟ್‌ಗಳನ್ನು ವಿತರಿಸಲಾಯಿತು.

* ಮನಸೆಳೆದ ಸಾಂಸ್ಕೃತಿಕ ಕಾರ್ಯಕ್ರಮಗಳು * ವೀರಗಾಸೆ, ಕರಗ, ನಂದಿಕೋಲು, ಕೋಲಾಟ, ಡೊಳ್ಳು ಕುಣಿತ, ಪಟ ಕುಣಿತ ಮತ್ತಿತರ ಜನಪದ ಕಲೆಗಳೊಂದಿಗೆ ನಾಡಧ್ವಜದ ಅರಿಷಿಣ, ಕುಂಕುಮ ವರ್ಣಗಳ ವಸ್ತ್ರಧಾರಿಗಳಾಗಿ ಶಾಲಾ ವಿದ್ಯಾರ್ಥಿ-ವಿದ್ಯಾರ್ಥಿನಿಯರು ನಿರ್ವಹಿಸಿದ ವೈವಿಧ್ಯಮಯ ಸಾಂಸ್ಕೃತಿಕ ಕಾರ್ಯಕ್ರಮಗಳು ಜನ ಮನಸೆಳೆದವು. ಸಿಡಿ ಉತ್ಸವ ಮಾದರಿಯಲ್ಲಿ ಕಂಬವನ್ನೇರಿ ಬಟ್ಟೆಯ ನೆರವಿನಿಂದ ಸಾಹಸ ಪ್ರದರ್ಶಿಸಿ, ಪುನೀತ್ ರಾಜ್‌ಕುಮಾರ್ ಅವರ ಭಾವಚಿತ್ರವಿರುವ ಧ್ವಜ ಎತ್ತಿ ಹಿಡಿದ ಬಾಲಕಿಯೊಬ್ಬಳ ಪ್ರದರ್ಶನ ನೆರೆದ ಜನಸಮೂಹದಲ್ಲಿ ಸಂಚಲನ ಉಂಟು ಮಾಡಿತು. ಈ ವೇಳೆ ದೇವನಹಳ್ಳಿ ಪುರಸಭೆ ಅಧ್ಯಕ್ಷೆ ಗೋಪಮ್ಮ, ಉಪಾಧ್ಯಕ್ಷೆ ಗೀತಾ, ಕನ್ನಡ ಸಾಹಿತ್ಯ ಪರಿಷತ್‌ನ ಬೆಂಗಳೂರು ಗ್ರಾಮಾಂತರ ಜಿಲ್ಲಾಧ್ಯಕ್ಷ ಬಿ.ಎನ್.ಕೃಷ್ಣಪ್ಪ, ಜಿಲ್ಲಾಧಿಕಾರಿ ಆರ್.ಲತಾ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರೇವಣಪ್ಪ.ಕೆ, ಜಿಲ್ಲಾ ಪೊಲೀಸ್ ಅಧೀಕ್ಷಕ ಮಲ್ಲಿಕಾರ್ಜುನ ಬಾಲದಂಡಿ, ಅಪರ ಜಿಲ್ಲಾಧಿಕಾರಿ ವಿಜಯ.ಈ.ರವಿಕುಮಾರ ಸೇರಿದಂತೆ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು, ಸಿಬ್ಬಂದಿಗಳು, ವಿದ್ಯಾರ್ಥಿಗಳು, ಸಾರ್ವಜನಿಕರು ಭಾಗವಹಿಸಿದ್ದರು.

# ಗುಜರಾತ್ ಚುನಾವಣೆ: ಈ ಚುನಾವಣೆ ಬಿಜೆಪಿ ಮತ್ತು ಎಎಪಿ ನಡುವಿನ ಸ್ಪರ್ಧೆಯೇ?

ಚುನಾವಣಾ ದಿನಾಂಕ ಘೋಷಣೆಯಾದಾಗಿನಿಂದ ಎಲ್ಲರ ಚಿತ್ತ ಗುಜರಾತ್ ಚುನಾವಣೆಯತ್ತ ಇದೆ. ಹೇಗಾದರೂ ಈ ಬಾರಿ ಗುಜರಾತ್‌ನಲ್ಲಿ ಆಡಳಿತ ಹಿಡಿಯಬೇಕು ಎಂದು ಹರಸಾಹಸ ಮಾಡುತ್ತಿರುವ ಆಪ್ ಭಾರಿ ಉತ್ಸಾಹದಲ್ಲಿ ಪ್ರಚಾರ ಮಾಡುತ್ತಿದೆ.

ಬಿಜೆಪಿ ಕೂಡ ಗುಜರಾತ್ ತನ್ನ ಕೈಯಿಂದ ಬಿಡಿಸಿಕೊಳ್ಳಬಾರದೆಂದು ಪ್ರಯತ್ನಿಸುತ್ತಿದೆ. ಆದರೆ, ಮೌನವಾಗಿರುವುದು ಮಾತ್ರ ಕಾಂಗ್ರೆಸ್. ಅಭ್ಯರ್ಥಿಗಳ ಪಟ್ಟಿಯನ್ನೇನೋ ಬಿಡುಗಡೆ ಮಾಡಿದೆ. ಆದರೆ, ಚುನಾವಣೆಯಲ್ಲಿ ಪಾಲ್ಗೊಳ್ಳುವ ಉತ್ಸಾಹವಂತೂ ಕಾಣಿಸುತ್ತಿಲ್ಲ. ಆಮ್ ಆದ್ಮಿ ಪಕ್ಷದ ಮುಖ್ಯಸ್ಥ ಅರವಿಂದ್ ಕೇಜ್ರಿವಾಲ್, 40 ವರ್ಷದ ಇಸುದನ್ ಗಧ್ವಿಯನ್ನು ಎಎಪಿ ಮುಖ್ಯಮಂತ್ರಿ ಅಭ್ಯರ್ಥಿ ಎಂದು ಘೋಷಿಸುವುದರೊಂದಿಗೆ, ಗುಜರಾತ್ ವಿಧಾನಸಭಾ ಚುನಾವಣಾ ಕಣ ಇದೀಗ ರೋಚಕ ಸ್ಪರ್ಧೆಯಾಗಿದೆ. 2017 ರ ಚುನಾವಣೆಯಲ್ಲಿ 182 ಅಸೆಂಬ್ಲಿ ಸ್ಥಾನಗಳಲ್ಲಿ ಕೇವಲ 29 ರಲ್ಲಿ ಸ್ಪರ್ಧಿಸಿ ಎಲ್ಲಾ ಠೇವಣಿಗಳನ್ನು ಕಳೆದುಕೊಂಡಿದ್ದ ಎಎಪಿ ಗುಜರಾತ್ ಸ್ಪರ್ಧೆಗೆ ಭಾರೀ ವಿಶ್ವಾಸದಲ್ಲೇ ಧುಮುಕಿದೆ. ಚುನಾವಣಾ ದಿನಾಂಕಗಳು ಹೊರಬೀಳುವ ಮೊದಲೇ 100 ಕ್ಕೂ ಹೆಚ್ಚು ಸ್ಥಾನಗಳಿಗೆ ಅಭ್ಯರ್ಥಿಗಳನ್ನು ಘೋಷಿಸಿದೆ. ಆಕರ್ಷಕ ಚುನಾವಣಾ ಭರವಸೆಗಳನ್ನು ಪ್ರಕಟಿಸಿದೆ. ಅವುಗಳ ಅನುಷ್ಠಾನಕ್ಕೆ ಒಂದು ಯೋಜನೆ ರೂಪಿಸಿದೆ. ಅದರ ಪ್ರಚಾರದ ತಂತ್ರವು ಕಾಂಗ್ರೆಸ್ ಮತ್ತು ಬಿಜೆಪಿ ಎರಡನ್ನು ಆತಂಕಕ್ಕೆ ನೂಕಿದೆ. ಗುಜರಾತ್ ಚುನಾವಣೆಯಲ್ಲಿ ಕಾಂಗ್ರೆಸ್‌ಗಿಲ್ಲವೇ ಆಸಕ್ತಿ? ಗುಜರಾತ್‌ನಲ್ಲಿ ತೃತೀಯ ಶಕ್ತಿಗೆ ಜಾಗವಿಲ್ಲ ಎಂದು ಗುಜರಾತ್‌ನ ಬಹುತೇಕ ರಾಜಕೀಯ ಅನುಭವಿಗಳು ಮತ್ತು ವಿಶ್ಲೇಷಕರು ಸ್ಪಷ್ಟಪಡಿಸುತ್ತಾರೆ. ಆದರೆ ಪ್ರಮುಖ ಸ್ಪರ್ಧಿಯಾಗಿದ್ದ ಬಿಜೆಪಿ ಮತ್ತು ಕಾಂಗ್ರೆಸ್‌ನಲ್ಲಿ ಕಾಂಗ್ರೆಸ್ ಆಸಕ್ತಿ ಕಳೆದುಕೊಂಡ ಹಾಗೆ ಕಾಣಿಸುತ್ತಿದೆ. ಅಂತಿಮವಾಗಿ ಎಎಪಿ ಮತ್ತು ಬಿಜೆಪಿ ನಡುವಿನ ಸ್ಪರ್ಧೆ ಎಂಬಂತಾಗಿದೆ. ತನಿಖಾ ಸಂಸ್ಥೆಗಳ ಆರೋಪಗಳು, ತನ್ನ ಪಕ್ಷದ ನಾಯಕರ ಬಂಧನ, ದಾಳಿಗಳ ಹೊರತಾಗಿಯೂ ಆಪ್ ಗುಜರಾತ್‌ನಲ್ಲಿ ಅವಿರತ ಪ್ರಚಾರವನ್ನು ನಡೆಸುತ್ತಿದೆ. ಎಎಪಿ ಗುಜರಾತ್‌ನಲ್ಲಿ ಮೂರನೇ ಪಕ್ಷವಲ್ಲ, ಆದರೆ ವಿರೋಧ ಪಕ್ಷವಾಗಿದೆ ಎಂದು ಮುಖ್ಯಮಂತ್ರಿ ಅಭ್ಯರ್ಥಿ ಗಧ್ವಿ ಹೇಳಿದ್ದಾರೆ. 2024 ರ ವೇಳೆಗೆ ಆಪ್ ದೊಡ್ಡ ಶಕ್ತಿಯಾಗುವ ಮುನ್ಸೂಚನೆ ಆಮ್ ಆದ್ಮಿ ಪಾರ್ಟಿಯನ್ನು ಬಿಜೆಪಿ ಗಂಭೀರವಾಗಿ ಪರಿಗಣಿಸಲು ಪ್ರಾರಂಭಿಸಿದೆ. 2022 ರಲ್ಲಿ ಈ ಪಕ್ಷ ದೊಡ್ಡ ಶಕ್ತಿಯಾಗದಿದ್ದರೂ ಲೋಕಸಭೆಗೆ ಸಾರ್ವತ್ರಿಕ ಚುನಾವಣೆಗಳು ನಿಗದಿ ಮತ್ತು ಬಿಜೆಪಿ ಮೂರನೇ ಅವಧಿಗೆ ಆಡಳಿತ ಹಿಡಿಯಲು ಪ್ರಯತ್ನಿಸುವ 2024 ರ ವೇಳೆಗೆ ದೊಡ್ಡ ಶಕ್ತಿಯಾಗಬಹುದು ಎನ್ನಲಾಗಿದೆ. ಒಂದರ್ಥದಲ್ಲಿ, 2022 ರ ವಿಧಾನಸಭಾ ಚುನಾವಣೆಯು ಗುಜರಾತ್‌ನ ಚುನಾವಣಾ ಇತಿಹಾಸದಲ್ಲಿ ಒಂದು ಪ್ರಮುಖ ಘಟವಾಗಬಹುದು. 15 ವರ್ಷಗಳಲ್ಲಿ ಬಿಜೆಪಿ ಮೂರನೇ ಸ್ಥಾನದಿಂದ ಮೊದಲ ಸ್ಥಾನಕ್ಕೆ ಏರಲು ಸಾಧ್ಯವಾಗಿದೆ. ಇತ್ತ ಆಪ್ ಅನ್ನು ತಡೆಯಲು ಸಾಧ್ಯವೇ ಇಲ್ಲದಂತಾಗಿದೆ. "ನಾವು ಎಎಪಿಯನ್ನು ಕಡಿಮೆ ಅಂದಾಜು ಮಾಡಬಾರದು" ಎಂದು ಬಿಜೆಪಿ ಮತ್ತು ಕಾಂಗ್ರೆಸ್ ಎರಡರಲ್ಲೂ ಹಿರಿಯ ಅನುಭವಿಗಳು ಹೇಳುತ್ತಾರೆ. ಎರಡು ಪಕ್ಷಗಳ ಹೊರತಾಗಿಯೂ, ಜನರು ಎಎಪಿಯನ್ನು ಹೆಚ್ಚು ಗಂಭೀರವಾಗಿ ಪರಿಗಣಿಸುತ್ತಿದ್ದು, ಅದನ್ನು ಕಾಂಗ್ರೆಸ್‌ಗಿಂತ ಹೆಚ್ಚು ಆಕ್ರಮಣಕಾರಿ ಎಂದು ಭಾವಿಸುತ್ತಿದ್ದಾರೆ ಎನ್ನಲಾಗಿದೆ. 10 ವರ್ಷಗಳಲ್ಲಿ ಆಡಳಿತದ ಚುಕ್ಕಾಣಿ ಹಿಡಿದ ಬಿಜೆಪಿ 1980 ರಲ್ಲಿ ನಡೆದ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿಯ ಸಂಸ್ಥಾಪನಾ ವರ್ಷದಲ್ಲಿ ಪಕ್ಷವು 182 ರಲ್ಲಿ 127 ಸ್ಥಾನಗಳಲ್ಲಿ ಸ್ಪರ್ಧಿಸಿತ್ತು, ಆದರೆ, ಕೇವಲ ಒಂಬತ್ತು ಸ್ಥಾನಗಳನ್ನು ಮಾತ್ರ ಗೆದ್ದಿತು. ಆದರೆ, ಮಾಧವಸಿನ್ಹಾ ಸೋಲಂಕಿ ನೇತೃತ್ವದಲ್ಲಿ ಕಾಂಗ್ರೆಸ್ 141 ಸ್ಥಾನಗಳನ್ನು ಗೆದ್ದಿತು. ಜನತಾ ಪಕ್ಷ (ಜೆಎನ್‌ಪಿ) 21 ಸ್ಥಾನಗಳನ್ನು ಗೆದ್ದಿತ್ತು. 10 ಸ್ವತಂತ್ರ ಅಭ್ಯರ್ಥಿಗಳು ಗೆಲುವು ಸಾಧಿಸಿದ್ದರು. ಆದರೆ ಅಂದಿನಿಂದ ಬಿಜೆಪಿಗೆ ಹಿಂತಿರುಗಿ ನೋಡಲೇ ಇಲ್ಲ. ಆ ಚುನಾವಣೆಯ ನಂತರ ಗುಜರಾತ್‌ನಲ್ಲಿ ಹತ್ತು ವರ್ಷಗಳ ನಂತರ ಆಡಳಿತದ ಚುಕ್ಕಾಣಿ ಹಿಡಿದಿದೆ. ಕ್ಷತ್ರಿಯ–ಹರಿಜನ–ಆದಿವಾಸಿ–ಮುಸ್ಲಿಂ ಮತಗಳ ಕ್ರೋಡೀಕರಣದ ಏಊಂಒ ಸೂತ್ರಕ್ಕೆ ತನ್ನ ಗೆಲುವಿನ ಸರಮಾಲೆಯನ್ನು ನೀಡಿದ್ದ ಕಾಂಗ್ರೆಸ್, 1985 ರಲ್ಲಿ 149 ಸ್ಥಾನಗಳನ್ನು ಗೆದ್ದುಕೊಂಡಿತ್ತು. 1990 ರ ಸಾರ್ವತ್ರಿಕ ಚುನಾವಣೆಗಳು ಹಿಂದುತ್ವದ ಮೇಲೆ ಸವಾರಿ ಮಾಡಿದ ಬಿಜೆಪಿಗೆ ಮೂರನೇ ಸ್ಥಾನದಿಂದ ಎರಡನೇ ಸ್ಥಾನಕ್ಕೆ ಏರುವಂತೆ ಮಾಡಿತು. ಜೆಎನ್‌ಪಿ ಶೂನ್ಯ ಸ್ಥಾನಗಳನ್ನು ಪಡೆದುಕೊಂಡಿತು



ಮತ್ತು ಜನತಾ ದಳ 70 ಗೆದ್ದು, ಬಿಜೆಪಿಯ 67 ಶಾಸಕರ ಬೆಂಬಲದೊಂದಿಗೆ ಚಿಮನ್‌ಭಾಯ್ ಪಟೇಲ್ ನೇತೃತ್ವದಲ್ಲಿ ಸರ್ಕಾರವನ್ನು ರಚಿಸಿತು. ಗುಜರಾತ್‌ನಲ್ಲಿ ಬಿಜೆಪಿ ವಿರುದ್ಧ ಹೆಚ್ಚುತ್ತಿದ್ದೆ ಸಿಟ್ಟು! ಪ್ರತಿ ಚುನಾವಣೆಯಲ್ಲೂ ಕಾಂಗ್ರೆಸ್ ಕ್ಷೀಣಿಸುತ್ತಿದೆ. 2014 ರಿಂದ ಕಾಂಗ್ರೆಸ್ ಗುಜರಾತ್‌ನಲ್ಲಿ ಯಾವುದೇ ಲೋಕಸಭಾ ಸ್ಥಾನಗಳನ್ನು ಹೊಂದಿಲ್ಲ. ಬಿಜೆಪಿಯ ಸ್ಥಾನಗಳು ಕೂಡ 2002 ರಿಂದ ಸ್ಥಿರವಾಗಿ ಕುಸಿಯುತ್ತಿವೆ. ಬಿಜೆಪಿ 127 ಸ್ಥಾನಗಳನ್ನು ಗೆದ್ದಿರುವುದೇ ಇದುವರೆಗಿನ ಅತ್ಯಧಿಕವಾಗಿದೆ. 2007ರಲ್ಲಿ ಪಕ್ಷ 117 ಸ್ಥಾನಗಳನ್ನು ಗೆದ್ದಿತ್ತು, 2012ರಲ್ಲಿ 115 ಸ್ಥಾನಗಳನ್ನು ಗೆದ್ದುಕೊಂಡಿತ್ತು. 2017ರ ಚುನಾವಣೆಯಲ್ಲಿ ಮೋದಿ ಪ್ರಧಾನಿಯಾದ ನಂತರ ಮೊದಲ ಬಾರಿಗೆ ಬಿಜೆಪಿ 150 ಪ್ಲಸ್ ಸೀಟುಗಳನ್ನು ಗುರಿಯಾಗಿಟ್ಟುಕೊಂಡಿತ್ತು, ಆದರೆ, ಕೇವಲ 99 ಸ್ಥಾನಗಳನ್ನು ಪಡೆದು ಕಾಂಗ್ರೆಸ್ 77 ಸ್ಥಾನಗಳನ್ನು ಪಡೆಯಿತು. ಇದು ಬಿಜೆಪಿ ಮೇಲಿನ ಬಿಜೆಪಿಯ ಮೇಲಿನ ಸಿಟ್ಟನ್ನು ಸೂಚಿಸುತ್ತದೆ. ಕನಿಷ್ಠ 35 ಸ್ಥಾನಗಳಲ್ಲಿ ಬಿಜೆಪಿ 5,000 ಅಥವಾ ಅದಕ್ಕಿಂತ ಕಡಿಮೆ ಮತಗಳಿಂದ ಗೆದ್ದಿದೆ. ಇದು ಈ ಬಾರಿಯ ಚುನಾವಣೆಯಲ್ಲಿ ಹೇಗೆ ಬೇಕಾದರೂ ತೀರ್ಪನ್ನು ಬದಲಿಸಬಹುದು. ಪಾಟಿದಾರರನ್ನು ಮೆಚ್ಚಿಸುವ ಪ್ರಯತ್ನದಲ್ಲಿ ಬಿಜೆಪಿ ವಿಜಯ್ ರೂಪಾನಿ ಸರ್ಕಾರವನ್ನು ಭೂಪೇಂದ್ರ ಪಟೇಲ್ ಸರ್ಕಾರವನ್ನಾಗಿಸಿದ ಬಿಜೆಪಿ ನಡೆ ವಿರುದ್ಧ ಪಾಟೀದಾರ ಸಮುದಾಯ ಭಾರೀ ಆಕ್ರೋಶವ ಹೊರಹಾಕಿದೆ. ಹೀಗಾಗಿ ಪಾಟಿದಾರರನ್ನು ಮೆಚ್ಚಿಸುವ ಪ್ರಯತ್ನದಲ್ಲಿ 144 ಕ್ಷೇತ್ರಗಳಲ್ಲಿ ಯಾತ್ರೆಯನ್ನು ಮಾಡಿ, ಗುಂಪುಗಾರಿಕೆಯನ್ನು ತಡೆಯಲು ಬಿಜೆಪಿ ಯತ್ನಿಸುತ್ತಿದೆ. ಇದಕ್ಕಾಗಿ 11 ದಿನಗಳ ಪ್ರಚಾರವನ್ನು ಘೋಷಿಸಿದ್ದಾರೆ. ಪ್ರಧಾನಮಂತ್ರಿ ಮೋದಿಯವರ ರಾಜ್ಯಕ್ಕೆ ಎರಡು ಬಾರಿ – ಮೂರು ದಿನಗಳವರೆಗೆ ಪ್ರವಾಸ ಕೈಗೊಂಡಿದ್ದಾರೆ. ಬೃಹತ್ ಮೂಲಸೌಕರ್ಯ ಯೋಜನೆಗಳನ್ನು ಉದ್ಘಾಟಿಸಿದ್ದಾರೆ. ಭೂಪೇಂದ್ರ ಪಟೇಲ್ ಸರ್ಕಾರ ಯೋಜನೆಯ ಘೋಷಣೆಗಳ ಸರಮಾಲೆಯನ್ನೇ ಮಾಡಿದೆ. ಇವುಗಳ ಜೊತೆಗೆಯೇ ಬಿಜೆಪಿಗೆ ಭಾರೀ ಪೆಟ್ಟು ನೀಡಿದ್ದು, ಮೋದಿ ಗುಜರಾತಿನಲ್ಲಿದ್ದಾಗ ಸಂಭವಿಸಿದ ಮೋರ್ಬಿ ತೂಗು ಸೇತುವೆ ದುರಂತ. ಜನರ ಕೋಪವನ್ನು ತಣಿಸಲು ರಾಜ್ಯ ಸರ್ಕಾರವು 48 ಗಂಟೆಗಳ ಒಳಗೆ ಸಾವನ್ನಪ್ಪಿದವರ ಕುಟುಂಬಸ್ಥರಿಗೆ ಪರಿಹಾರವನ್ನು ನೀಡಿತು. ಆಗಸ್ಟ್‌ನಿಂದ ಅಕ್ಟೋಬರ್‌ವರೆಗೆ, ಮುಖ್ಯಮಂತ್ರಿ ಭೂಪೇಂದ್ರ ಪಟೇಲ್ 22 ಒಬಿಸಿ ಉಪಗುಂಪುಗಳ ಕಾರ್ಯಕ್ರಮಕ್ಕೆ ಹಾಜರಾಗಿದ್ದರು. ಒಬಿಸಿಗಳು ಗುಜರಾತ್‌ನ ಅರ್ಧದಷ್ಟು ಜನಸಂಖ್ಯೆಯನ್ನು ಹೊಂದಿದ್ದಾರೆ. ಇನ್ನು, ಎಎಪಿಯ ಮುಖ್ಯಮಂತ್ರಿ ಅಭ್ಯರ್ಥಿ ಇಸುದನ್ ಗಧ್ವಿ ಅವರು ಒಬಿಸಿಗಳ ಒಂದು ಉಪಗುಂಪಿನಿಂದ ಬಂದಿದ್ದಾರೆ. ಆದರೂ, ಗುಂಪುಗಾರಿಕೆ ಮತ್ತು ಅಸಮಾಧಾನವು ಬಿಜೆಪಿಯಂತಹ ಪ್ರಬಲ ಪಕ್ಷವೂ ಸಹ ಎದುರಿಸಬೇಕಾದ ಸಮಸ್ಯೆಯಾಗಿದೆ. ಭಾನುವಾರ, ಬಿಜೆಪಿಯ ಹಳೆಯ ಸದಸ್ಯರಲ್ಲಿ ಒಬ್ಬರು ಮತ್ತು ಎರಡು ಬಾರಿ ಸಚಿವರಾಗಿದ್ದ ಜಯನಾರಾಯಣ ವ್ಯಾಸ್ ಅವರು ಟಿಕೆಟ್ ಸಿಗದ ಕಾರಣ ರಾಜೀನಾಮೆ ನೀಡಿ, ಬಿಜೆಪಿಗೆ ದೊಡ್ಡ ಪೆಟ್ಟು ನೀಡಿದ್ದಾರೆ.

# ಶಿಡ್ಲಘಟ್ಟದಲ್ಲಿ ಮೊದಲ ಬಾರಿಗೆ ಡಾ.ಪುನೀತ್ ರಾಜ್ ಕುಮಾರ್ ಪುತ್ಥಳಿ ಅನಾವರಣ

ವಾರ್ತಾಜಾಲ,ಶಿಡ್ಲಘಟ್ಟ : ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಶಿಡ್ಲಘಟ್ಟದಲ್ಲೇ ಮೊದಲ ಬಾರಿಗೆ, ಸ್ನೇಹ ಯುವಕರ ಸಂಘದ ವತಿಯಿಂದ ನಗುವಿನ



ಒಡೆಯ ಪುನೀತ್ ರಾಜ್ ಕುಮಾರ್ ಅವರ 3 ಅಡಿ ಎತ್ತರದ ಪುತ್ಥಳಿಯನ್ನು ನಗರದ ಅಶೋಕ ರಸ್ತೆಯಲ್ಲಿ ಪುನೀತ್ ರಾಜ್ ರಾಜ್ ಕುಮಾರ್ ವೃತ್ತದಲ್ಲಿ ಅಧಿಕೃತವಾಗಿ ಅನಾವರಣಗೊಳಿಸಲಾಯಿತು. ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣದ ಮುಂಭಾಗ ಸಲ್ಲಾಪುರಮ್ಮ ದೇವಾಲಯದ ಮುಂದೆ 67 ನೇ ಕನ್ನಡ ರಾಜ್ಯೋತ್ಸವದ ಧ್ವಜಾರೋಹಣವನ್ನು ಶಾಸಕ ವಿ.ಮುನಿಯಪ್ಪ ರವರು ನೆರವೇರಿಸಿದರು. ಪವರ್ ಸ್ಟಾರ್ ಡಾ.ಪುನೀತ್ ರಾಜ್ ಕುಮಾರ್ ಅವರ ಹೆಸರು ಕೇಳಿದರೇನೇ ಅದೇಷ್ಟೋ ಜನ ಭಾವುಕರಾಗ್ತಾರೆ. ಕಣ್ಣೀರು ಸುರಿಸ್ತಾರೆ. ಕನ್ನಡ ಚಿತ್ರರಂಗದ ಮೇರು ನಟನಲ್ಲದೇ, ತಮ್ಮ ಸಮಾಜಮುಖಿ ಕಾರ್ಯಗಳಿಂದ ಇಡೀ ಜಗತ್ತಿಗೆ ಪರಿಚಿತರಾಗಿರುವ ಅಪ್ಪುವಿಗೆ ಸ್ನೇಹ ಯುವಕರ ಸಂಘ ಹಾಗೂ ಕನ್ನಡ ಪರ ಸಂಘಟನೆಗಳು ವಿಶೇಷ ಗೌರವ ಸಲ್ಲಿಸಿದರು.

ನಗರ ಸಭೆಯಲ್ಲಿ ಕನ್ನಡದ ತಾಯಿ ಭುವನೇಶ್ವರಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ನಂತರ ಬೆಳ್ಳಿರಥದಲ್ಲಿ ಭುವನೇಶ್ವರಿ ಭಾವಚಿತ್ರವನ್ನು ಪ್ರಮುಖ ರಸ್ತೆಗಳಲ್ಲಿ ಅದ್ದೂರಿ ಮೆರವಣಿಗೆ ಮಾಡಲಾಯಿತು. ಪ್ರತಿಬಾರಿಯಂತೆ ಈ ಬಾರಿಯೂ ಅಂಬಾರಿ ಮಂಜುನಾಥ್ ತನ್ನ ದ್ವಿಚಕ್ರ ವಾಹನವನ್ನು ಕನ್ನಡ ಬಾವುಟಗಳ ಮೂಲಕ ಶೃಂಗಾರಗೊಳಿಸಿದರು. ನಂತರ ತಾಲ್ಲೂಕು ಆಡಳಿತ ವತಿಯಿಂದ ಆಯೋಜಿಸಿದ್ದ ವೇದಿಕೆ ಕಾರ್ಯಕ್ರಮದಲ್ಲಿ ಸಾಧನೆಗೈದ ಸ್ವಾತಂತ್ರ್ಯ ಹೋರಾಟಗಾರರಾದ ಮಳ್ಳೂರು ಶ್ರೀರಾಮಪ್ಪ ರವರಿಗೆ ,ರೈತ ಮುಖಂಡರಾದ ಗೋಪಾಲಗೌಡ, ಮುನೇಗೌಡ ಮತ್ತು ಹತ್ತನೇ ತರಗತಿಯಲ್ಲಿ 625/625 ಅಂಕಗಳಿಸಿದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಸ್ವಾತಂತ್ರ್ಯ ಹೋರಾಟಗಾರರಾದ ಶ್ರೀರಾಮಪ್ಪ (103)ರವರು ಇಲ್ಲಿಯವರೆಗೂ ಪಿಂಚಣಿಯನ್ನು ಪಡೆಯುತ್ತಿಲ್ಲ. ಕಾರಣ ನಾನು ಒಬ್ಬ ಸ್ವಾತಂತ್ರ್ಯ ಹೋರಾಟಗಾರ, ನಾನು ಪಿಂಚಣಿಗಾಗಿ ಹೋರಾಟ ಮಾಡಿದವನಲ್ಲ, ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಟ ಮಾಡಿದವನು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಮಾಜಿ ಶಾಸಕ ಎಂ ರಾಜಣ್ಣ,ತಹಶೀಲ್ದಾರ್.ಬಿಎಸ್ ರಾಜೀವ್,ಇಒ ಮುನಿರಾಜ,ಬಿಸಿ ನಂದೀಶ್,ನಗರಸಭೆ ಅಧ್ಯಕ್ಷೆ ಸುಮಿತ್ರ ರಮೇಶ್,ಪೌರಾಯುಕ್ತ ಆರ್ ಶ್ರೀಕಾಂತ್,ಕೆ.ಎನ್ ಸುಬ್ಬಾರೆಡ್ಡಿ, ಕನ್ನಡ ಸಾಹಿತ್ಯ ಪರಿಷತ್ ತಾಲ್ಲೂಕು ಅಧ್ಯಕ್ಷ ಬಿ.ಆರ್ ಅನಂತಕೃಷ್ಣ ಸುರೇಂದ್ರಗೌಡ, ನಗರದ ಭರತ್ (ಗ್ಯಾಸ್),ಮಂಜುನಾಥ್,ಅನೀಲ್ ಕುಮಾರ್ ,ಶ್ರೀನಿವಾಸ್, ಸುನೀಲ್, ನವೀನ್, ಗಿರಿಧರ್, ರೈತಪರ, ಎಲ್ಲಾ ಕನ್ನಡ ಪರ ಸಂಘಟನೆಗಳು ಹಾಗೂ ಅಧಿಕಾರಿಗಳು ಭಾಗವಹಿಸಿದ್ದರು.

# ಇಂದಿನಿಂದ ಜಿಕೆವಿಕೆಯಲ್ಲಿ ನಾಲ್ಕು ದಿನಗಳ ಕಾಲ ಕೃಷಿ ಮೇಳ

**ಬೆಂಗಳೂರು:** ನವೆಂಬರ್ 3 ರಿಂದ ನಾಲ್ಕು ದಿನಗಳ ಕಾಲ ಕೃಷಿ ವಿಜ್ಞಾನ ವಿಶ್ವವಿದ್ಯಾನಿಲಯ ಆವರಣದಲ್ಲಿ ಕೃಷಿ ಮೇಳ 2022 ಮತ್ತು ಕೃಷಿ ವಸ್ತು ಪ್ರದರ್ಶನ ನಡೆಯಲಿದೆ. ಈ ಬಾರಿಯ ಕೃಷಿ ಮೇಳವು ಸ್ಟಾರ್ಟಅಪ್‌ಗಳಿಗೆ ಒತ್ತು ನೀಡಲಾಗಿದೆ. ಕೃಷಿ ವಿಜ್ಞಾನ ವಿಶ್ವ ವಿದ್ಯಾನಿಲಯವು ಆಯೋಜಿಸಿರುವ ಈ ನಾಲ್ಕು ದಿನಗಳ ಮೇಳವು ಹಲವಾರು ಬೆಳೆ ಪ್ರಭೇದಗಳು, ಹೊಸ ಉಪಕರಣಗಳು, ಬೆಳೆಗಳ ಪ್ರಾತ್ಯಕ್ಷಿಕೆ, ಸಾಕು ಪ್ರಾಣಿಗಳು ಮತ್ತು ಪ್ರಶಸ್ತಿ ವಿತರಣೆಯನ್ನು ಒಳಗೊಂಡಿರುತ್ತದೆ. ಈ ಬಾರಿಯ ಕೃಷಿ ಮೇಳವು 'ಕೃಷಿಯಲ್ಲಿ ನವೋದ್ಯಮ' ಘೋಷಣೆ ಅಡಿಯಲ್ಲಿ ನಡೆಯುತ್ತಿದೆ. ಈ ವರ್ಷದ ಕೃಷಿ ಮೇಳವನ್ನು ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯ, ರಾಜ್ಯ ಸರ್ಕಾರದ ಕೃಷಿ ಇಲಾಖೆ, ಜಲಾನಯನ ಅಭಿವೃದ್ಧಿ, ತೋಟಗಾರಿಕೆ, ರೇಷ್ಮೆ, ಅರಣ್ಯ, ಪಶುಸಂಗೋಪನೆ, ಮೀನುಗಾರಿಕೆ, ಕೃಷಿ ಮಾರುಕಟ್ಟೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮತ್ತು ಕರ್ನಾಟಕ ಹಾಲು ಮಹಾಮಂಡಳಿಗಳ ಸಂಯುಕ್ತ ಆಶ್ರಯದಲ್ಲಿ ಕೃಷಿ ವಿವಿ ಬೆಂಗಳೂರಿನ ಗಾಂಧಿ ಕೃಷಿ ವಿಜ್ಞಾನ ಕೇಂದ್ರದ (ಜಿಕೆವಿಕೆ) ಆವರಣದಲ್ಲಿ ಆಯೋಜಿಸಲಾಗಿದೆ.




**ಈ ಬಾರಿಯ ಕೃಷಿ ಮೇಳದಲ್ಲಿ ಸ್ಟಾರ್ಟಅಪ್‌ಗಳಿಗೆ ಒತ್ತು**

ಕೃಷಿ ಮೇಳ– 2022–23ರ ನಾಲ್ಕು ದಿನಗಳಲ್ಲಿ ಸುಮಾರು ಹದಿನೈದು ಲಕ್ಷ ಜನರು ಸೇರುವ ಸಾಧ್ಯತೆಯಿದೆ ಎನ್ನಲಾಗಿದೆ. ಕೃಷಿ ಮೇಳವು ಕೃಷಿಯಲ್ಲಿ ನವೋದ್ಯಮ ಎಂಬ ಘೋಷಣೆ ಅಡಿಯಲ್ಲಿ ನಡೆಯುತ್ತಿದ್ದು, ಸ್ಟಾರ್ಟಅಪ್‌ಗಳಿಗೆ ಒತ್ತು ನೀಡಲಾಗಿದೆ. ಸ್ಟಾರ್ಟಅಪ್‌ಗಳ ಪ್ರಾಮುಖ್ಯತೆ ಯನ್ನು ಎತ್ತಿ ಹಿಡಿಯಲು, ಕೃಷಿ ವಲಯದಲ್ಲಿ ಕೈಗೊಂಡಿರುವ ಉಪಕ್ರಮಗಳ ಬಗ್ಗೆ ಅರಿವು ಮೂಡಿಸಲು ಕೃಷಿ ಉದ್ಯಮಗಳ ಸಮುದಾಯದ ಮುಖಂಡರು ಭಾಗವಹಿಸುವ ಸಂವಾದಗಳನ್ನು ಮೇಳದಲ್ಲಿ ಆಯೋಜಿಸಲಾಗುತ್ತದೆ.

**ಸುಗ್ಗಿಯ ನಂತರದ ತಂತ್ರಜ್ಞಾನ, ಸ್ಟಾರ್ಟಅಪ್‌ಗಳ ಸಂವಾದ** 'ರೈತರಿಂದ ರೈತರಿಗೆ ವೇದಿಕೆ' ಅಂಗವಾಗಿ ಮೂರು ಸಂವಾದಗಳು ನಡೆಯಲಿವೆ. ಈ ಸಂವಾದಗಳಲ್ಲಿ ಸುಗ್ಗಿಯ ನಂತರದ ತಂತ್ರಜ್ಞಾನ, ಕೃಷಿ ಮತ್ತು ಸಾವಯವ/ ನೈಸರ್ಗಿಕ ಕೃಷಿಯಲ್ಲಿನ ಸ್ಟಾರ್ಟಅಪ್‌ಗಳ ಮೇಲೆ ಕೇಂದ್ರೀಕರಿಸುತ್ತವೆ. ಈ ಸಂವಾದಗಳಲ್ಲಿ ರಾಜ್ಯಾದ್ಯಂತ ಇರುವ ಕೃಷಿ ಸ್ಟಾರ್ಟಅಪ್‌ಗಳ ಮುಖಂಡರು ಭಾಗವಹಿಸಲಿದ್ದಾರೆ. ಇದರಲ್ಲಿ ಶಿವಮೊಗ್ಗದ ಸ್ಟಾರ್ಟಅಪ್ ಆಗಿರುವ ರೂಟ್ಸ್‌ಗುಡ್ಸ್ ಭಾಗವಹಿಸಲಿದೆ. ಈ ತಂಡವು ರೈತರು ಮತ್ತು ಗ್ರಾಹಕರು ತಮ್ಮ ಬೆಳೆಗಳಿಗೆ ಬೆಲೆಗಳನ್ನು ಮಾತುಕತೆ ಮಾಡಲು ಮತ್ತು ಗುಣಮಟ್ಟದ ಭರವಸೆ ಪರಿಶೀಲನೆಗಳನ್ನು ನಡೆಸಲು ಸಹಾಯ ಮಾಡುವ ವೇದಿಕೆಯನ್ನು ರಚಿಸಿದ್ದಾರೆ. ಇನ್ನು ಡ್ರೋನ್ ಡೇಟಾದ ಮೂಲಕ ವಿಶ್ಲೇಷಣೆಯನ್ನು ಒದಗಿಸುವ ವಿಶೇಷ ಕೃಷಿ ಸ್ಟಾರ್ಟಅಪ್ ಬೀಗಲ್ ಅಗ್ರಿಟೆಕ್ ಕೂಡ ಸಂವಾದದಲ್ಲಿ ಭಾಗವಹಿಸಲಿದೆ.

**ಪ್ರಗತಿಪರ ರೈತರಿಗೆ ಪ್ರಶಸ್ತಿಗಳ ವಿತರಣೆ**

ಮೇಳದಲ್ಲಿ ಸಾಮಾನ್ಯ ವೇದಿಕೆಗಳನ್ನು ನಿರ್ಮಿಸುವ ಜೊತೆಗೆ, ಈ ವರ್ಷವೂ ಬೃಹತ್ ವೇದಿಕೆಯನ್ನು ಮಾಡಲಾಗಿದೆ. ಇದನ್ನು ನಿರ್ದಿಷ್ಟವಾಗಿ ರಾಜ್ಯದ ಸ್ಟಾರ್ಟ್ ಅಪ್‌ಗಳಿಗೆ ಮೀಸಲಿ ಡಲಾಗಿದೆ. ಮೇಳದಲ್ಲಿ ಕೃಷಿಯಲ್ಲಿ ಉತ್ತಮ ಸಾಧನೆ ಮಾಡಿದ ರೈತರಿಗೆ ಪ್ರಶಸ್ತಿಗಳನ್ನು ನೀಡಿ ಸನ್ಮಾನಿಸಲಾಗುತ್ತಿದೆ. ಅವುಗಳೆಂದರೆ, ಮಾಜಿ ಪ್ರಧಾನಮಂತ್ರಿ ಎಚ್.ಡಿ. ದೇವೇಗೌಡ ರಾಜ್ಯ ಮಟ್ಟದ ಅತ್ಯುತ್ತಮ ರೈತ/ ರೈತ ಮಹಿಳೆ ಪ್ರಶಸ್ತಿ, ಡಾ. ಎಂ.ಹೆಚ್. ಮರಿಗೌಡ ರಾಜ್ಯ ಮಟ್ಟದ ಅತ್ಯುತ್ತಮ ತೋಟಗಾರಿಕಾ ರೈತ/ ರೈತ ಮಹಿಳೆ ಪ್ರಶಸ್ತಿ, ಕೆನರಾ ಬ್ಯಾಂಕ್ ಪ್ರಯೋಜಿತ ಕ್ಯಾನ್ ಬ್ಯಾಂಕ್ ಅತ್ಯುತ್ತಮ ರೈತ ಮತ್ತು ರೈತ ಮಹಿಳೆ ಪ್ರಶಸ್ತಿ, ಡಾ. ಆರ್. ದ್ವಾರಕೀನಾಥ್ ಅತ್ಯುತ್ತಮ ವಿಸ್ತರಣಾ ಕಾರ್ಯಕರ್ತ ಪ್ರಶಸ್ತಿ, ಡಾ. ಆರ್. ದ್ವಾರಕೀನಾಥ್ ಅತ್ಯುತ್ತಮ ರೈತ/ ರೈತ ಮಹಿಳೆ ಪ್ರಶಸ್ತಿ ನೀಡಲಾಗುತ್ತದೆ.

**ಮೇಳದಲ್ಲಿ ಇರಲಿವೆ ಸುಮಾರು 700 ಮಳಿಗೆಗಳು**

ಹಾಸನ ಜಿಲ್ಲೆಯ ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ಹಾಗೂ ಹಿರಿಯ ವಿಜ್ಞಾನಿ ಡಾ.ರಾಜೇಗೌಡ ಅವರಿಗೆ ಡಾ. ಆರ್. ದ್ವಾರಕೀನಾಥ್ ಅತ್ಯುತ್ತಮ ವಿಸ್ತರಣಾ ಕಾರ್ಯಕರ್ತ ಪ್ರಶಸ್ತಿ ನೀಡಲಾಗುತ್ತಿದೆ. ಚಿಕ್ಕಬಳ್ಳಾಪುರ ಜಿಲ್ಲೆ ಶಿಡ್ಲಘಟ್ಟ ತಾಲೂಕಿನ ಹಿತ್ತಲಹಳ್ಳಿಯ ಗ್ರಾಮ ಪ್ರಗತಿ ಪರ ಕೃಷಿಕ ಎಚ್. ಜಿ. ಗೋಪಾಲಗೌಡ ಅವರಿಗೆ ಎಚ್. ಡಿ. ದೇವೇಗೌಡ ರಾಜ್ಯಮಟ್ಟದ ಅತ್ಯುತ್ತಮ ರೈತ ಪ್ರಶಸ್ತಿ ನೀಡಲಾಗುತ್ತದೆ. ಇದರ ಜೊತೆಗೆ ರಾಜ್ಯ ಮಟ್ಟ, ಜಿಲ್ಲಾ ಮಟ್ಟ ಮತ್ತು ತಾಲೂಕು ಮಟ್ಟದಲ್ಲಿಯೂ ಪ್ರಶಸ್ತಿಗಳನ್ನು ವಿತರಿಸಲಾಗುವುದು. ಒಟ್ಟಾರೆಯಾಗಿ, ಮೇಳದಲ್ಲಿ ಸುಮಾರು 700 ಮಳಿಗೆಗಳನ್ನು ಸ್ಥಾಪಿಸಲಾಗುತ್ತದೆ. ಮೇಳವು ಪ್ರತಿ ದಿನ ಬೆಳಗ್ಗೆ 9 ರಿಂದ ಸಂಜೆ 6 ಗಂಟೆಯವರೆಗೆ ನಡೆಯಲಿದೆ.

## ಡಿಕೆ ಶಿವಕುಮಾರ್ ಅಕ್ರಮ ಹಣ ವರ್ಗಾವಣೆ ಪ್ರಕರಣ: ದೆಹಲಿ ಹೈಕೋರ್ಟ್‌ನಿಂದ ಇಡಿಗೆ ನೋಟಿಸ್

ನವದೆಹಲಿ: ಮಾಜಿ ಸಚಿವ, ಹಿರಿಯ ಕಾಂಗ್ರೆಸ ಮುಖಂಡ ಡಿಕೆ ಶಿವಕುಮಾರ್ ವಿರುದ್ಧದ ಅಕ್ರಮ ಹಣ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ದೆಹಲಿ ಹೈಕೋರ್ಟ್‌ನಿಂದ ಜಾರಿ ನಿರ್ದೇಶನಾಲಯ(ಇಡಿ)ಗೆ ನೋಟಿಸ್ ಜಾರಿ ಮಾಡಲಾಗಿದೆ. ಕೆಲ ದಿನಗಳ ಹಿಂದೆ ಕರ್ನಾಟಕ ಕಾಂಗ್ರೆಸ್ ಅಧ್ಯಕ್ಷ ಡಿಕೆ ಶಿವಕುಮಾರ್ ತಮ್ಮ ವಿರುದ್ಧದ ಅಕ್ರಮ ಹಣ ವರ್ಗಾವಣೆ ಪ್ರಕರಣದ ತನಿಖೆಯನ್ನು ರದ್ದುಗೊಳಿಸುವಂತೆ ದೆಹಲಿ ಹೈಕೋರ್ಟ್‌ಗೆ ಮನವಿ ಸಲ್ಲಿಸಿದ್ದರು. ಈ ಮನವಿ ಮೇರೆಗೆ ಸದ್ಯ ದೆಹಲಿ ಹೈಕೋರ್ಟ್‌ನಿಂದ ಇಡಿಗೆ ನೋಟಿಸ್ ಜಾರಿ ಮಾಡಿದೆ ಎಂದು ವರದಿಯಾಗಿದೆ. ಅಕ್ಟೋಬರ್ 7ರಂದು ದೆಹಲಿಯಲ್ಲಿ ತನಿಖಾ ಸಂಸ್ಥೆಯ ಮುಂದೆ ವಿಚಾರಣೆಗೆ ಹಾಜರಾಗು ವುದರಿಂದ ವಿನಾಯಿತಿ ನೀಡುವಂತೆ ಡಿಕೆ ಶಿವಕುಮಾರ್ ಮಾಡಿದ್ದ ಮನವಿಯನ್ನು ಜಾರಿ ನಿರ್ದೇಶನಾಲಯ ತಿರಸ್ಕರಿಸಿತ್ತು. ಈ ಹಿನ್ನೆಲೆಯಲ್ಲಿ ಕಳೆದ ತಿಂಗಳು ನ್ಯಾಷನಲ್ ಹೆರಾಲ್ಡ್ ಅಕ್ರಮ ಹಣ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಅವರು ಇಡಿ ವಿಚಾರಣೆಗೆ ಹಾಜರಾಗಿದ್ದರು. ಕಾಂಗ್ರೆಸ್ ಪಕ್ಷದ ಒಡೆತನದ ನ್ಯಾಷನಲ್ ಹೆರಾಲ್ಡ್ ಪತ್ರಿಕೆಯ ಕಾರ್ಯಾಚರಣೆಗಳ ಬಗ್ಗೆ ನಡೆಯುತ್ತಿರುವ ಹಣ ವರ್ಗಾವಣೆ ಪ್ರಕರಣದ ತನಿಖೆಯ ಭಾಗವಾಗಿ ಡಿಕೆ ಶಿವಕುಮಾರ್ ಮಾತ್ರವಲ್ಲದೆ ಅವರ ಸಹೋದರ ಹಾಗೂ ಸಂಸದ ಡಿಕೆ ಸುರೇಶ್ ಅವರಿಗೂ ಇಡಿ ಸಮನ್ಸ್ ನೀಡಿತ್ತು. ನವದೆಹಲಿಯ ಜಾರಿ ನಿರ್ದೇಶನಾಲಯದ ಮುಂದೆ ಡಿಕೆಶಿ ಹಾಜರ್ ಸೆಪ್ಟೆಂಬರ್‌ನಲ್ಲಿ ಕರ್ನಾಟಕ ಪ್ರದೇಶ ಕಾಂಗ್ರೆಸ್‌ನ ಅಧ್ಯಕ್ಷ ಡಿಕೆ ಶಿವಕುಮಾರ್ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ವಿಚಾರಣೆಗಾಗಿ ನವದೆಹಲಿಯ ಜಾರಿ ನಿರ್ದೇಶನಾಲಯದ ಮುಂದೆ ಹಾಜರಾಗಿದ್ದರು. ಡಿಕೆ ಶಿವಕುಮಾರ್ ಕಾಂಗ್ರೆಸ್ ಪಕ್ಷವು ಆಯೋಜಿಸುತ್ತಿರುವ ಭಾರತ್ ಜೋಡೋ ಯಾತ್ರೆಯಲ್ಲಿ ನಿರತರಾಗಿದ್ದರು. ಈ ವೇಳೆಯಲ್ಲಿಯೇ ಇಡಿ ಸಮನ್ಸ್ ಅನ್ನು ನೀಡಿ ವಿಚಾರಣೆಗೆ ಹಾಜರಾಗುವಂತೆ ನೋಟೀಸ್ ನೀಡಿತ್ತು. ಆದರೆ ಪದೇ ಪದೇ ಇಡಿ ವಿಚಾರಣೆಗಾಗಿ ಹಾಜರಾಗುವುದು ಕಿರುಕುಳುವೆನಿಸುತ್ತಿದೆ. ಇದು ನನ್ನ ಕಾರ್ಯಗಳನ್ನು ಅಡ್ಡಿಪಡಿಸುತ್ತಿದೆ ಎಂದು ಸ್ವತ: ಡಿಕೆಶಿ ಅವರೇ ಟ್ವೀಟ್ ಮಾಡಿದ್ದರು.



## ಬೆಂಗಳೂರು: 'ಸರ್ಕಾರಿ ಶಾಲೆಗಳ ದತ್ತು ಸ್ವೀಕಾರ ಅಭಿಯಾನ ವಿಫಲ'– ತಜ್ಞರ ಅಭಿಪ್ರಾಯ

**ಬೆಂಗಳೂರು:** ಮೂಲ ಸೌಕರ್ಯ, ನಿರ್ವಹಣೆ ಮತ್ತು ಶಿಕ್ಷಣದ ಗುಣಮಟ್ಟ ಸುಧಾರಣೆ ಗಾಗಿ ಕರ್ನಾಟಕ ಸರ್ಕಾರದ ಪರಿಕಲ್ಪನೆಯಾದ 'ಸರ್ಕಾರಿ ಶಾಲೆಗಳ ದತ್ತು ಸ್ವೀಕಾರ ಅಭಿಯಾನ ಶಿಕ್ಷಣ ತಜ್ಞರಿಂದ ಟೀಕೆಗೆ ಗುರಿಯಾಗಿದೆ. ಶಿಕ್ಷಣ ವ್ಯವಸ್ಥೆಯನ್ನು ಸುಧಾರಿಸುವಲ್ಲಿ ವಿಫಲತೆ ಮತ್ತು ಜವಾಬ್ದಾರಿಯಿಂದ ನುಣುಚಿಕೊಳ್ಳುವುದಕ್ಕಾಗಿ ಈ ಕ್ರಮ ಎಂದು ಕರೆಯಲಾಗಿದೆ. 2020ರಲ್ಲಿ 1,500 ಶಾಲೆಗಳನ್ನು ವಿವಿಧ ವಿಶ್ವವಿದ್ಯಾಲಯಗಳು, ಶಾಸಕರು ಮತ್ತು ಖಾಸಗಿ ಕಂಪನಿಗಳು ತಮ್ಮ ಸಿಎಸ್‌ಆರ್ ಚಟುವಟಿಕೆಯ ಭಾಗವಾಗಿ ದತ್ತು ಪಡೆದಿವೆ. ಶಿಕ್ಷಣ ತಜ್ಞ, ರಾಜ್ಯ ಸರ್ಕಾರದ ಔಪಚಾರಿಕ ಸಲಹೆಗಾರ ಪ್ರೊಫೆಸರ್ ಎಂಆರ್ ದೊರೆ ಸ್ವಾಮಿ ಅವರು ಜುಲೈನಲ್ಲಿ 2022 ರಲ್ಲಿ ತಮ್ಮ ಹುದ್ದೆಗೆ ಮರಳು ವುದರೊಂದಿಗೆ, ಅಕ್ಟೋಬರ್‌ವರೆಗೆ ದತ್ತು ಪಡೆದ ಶಾಲೆಗಳ ಸಂಖ್ಯೆ 2,400 ಕ್ಕೆ ಏರಿತು. ಪ್ರೊ. ದೊರೆಸ್ವಾಮಿ ಅವರ ಉದ್ದೇಶ ಉತ್ತಮವಾಗಿದೆ. ಆದರೆ, ಆ ಉದ್ದೇಶ ಸರಿಯಾಗಿ ಕಾರ್ಯಗತವಾಗಿಲ್ಲ. ಈಗ 20 ವರ್ಷಗಳಿಂದ ವಿವಿಧ ಯೋಜನೆ'ಗಳ ಮೂಲಕ ದತ್ತು ಸ್ವೀಕಾರ ನಡೆಯುತ್ತಿದೆ. ಆದರೆ, ಮೂಲಭೂತ ಸೌಕರ್ಯದ ವಿಷಯದಲ್ಲಿ ಶಿಕ್ಷಣ ವ್ಯವಸ್ಥೆಯು ಗುಣಮಟ್ಟವನ್ನು ಸುಧಾರಿಸಿ ಕೊಂಡಿದೆ. ಆದರೆ, ಯಾವುದೇ ಕಲಿಕೆಯ ಫಲಿತಾಂಶವಿಲ್ಲ ಎಂದು ಶಿಕ್ಷಣತಜ್ಞರಾದ ಡಿ. ಶಶಿಕುಮಾರ್ ತಿಳಿಸಿದ್ದಾರೆ. 'ಇಷ್ಟು ಸಮಯ ಕಳೆದರೂ ಯಾವುದೇ ಗುಣಮಟ್ಟದ ಸುಧಾರಣೆಯಾಗಿಲ್ಲ ಮತ್ತು ವಿಶ್ವವಿದ್ಯಾನಿಲಯಗಳು, ಕಂಪನಿಗಳು ಮತ್ತು ಶಾಸಕರಿಗೆ ಶಾಲೆಗಳನ್ನು ದತ್ತು ನೀಡಿರುವ ಸರ್ಕಾರವು ತನ್ನ ಜವಾಬ್ದಾರಿ ಯಿಂದ ನುಣುಚಿಕೊಂಡಿದೆ ಎಂದು ಕುಮಾರ್ ಹೇಳಿದರು. ಅವರು ಸುಮಾರು 90 ಪ್ರತಿಶತ ಹಣವನ್ನು ಸಂಬಳ ಕ್ಕಾಗಿ ಖರ್ಚು ಮಾಡು ತ್ತಾರೆ, ಆದರೆ ವ್ಯವಸ್ಥೆಯ ಇತರ ಅಂಶಗಳನ್ನು ನೋಡುವುದಿಲ್ಲ ಎಂದು ಅವರು ಹೇಳಿದರು. ದತ್ತು ಸ್ವೀಕಾರ ಅಭಿಯಾನವು ಇನ್ನೂ ಹೊಸದಾಗಿದೆ ಮತ್ತು ಸುಧಾರಣೆ ಗಳನ್ನು ತೋರಿಸಲು ಸಮಯ ತೆಗೆದುಕೊಳ್ಳುತ್ತದೆ. ಕಾರ್ಯ ತಂತ್ರದಲ್ಲಿನ ಯಾವುದೇ ಬದಲಾವಣೆಯು ಸಮಯ ತೆಗೆದುಕೊಳ್ಳುತ್ತದೆ. ಸುಧಾರಣಾ ಕ್ರಮಗಳಿಗೆ ಸರ್ಕಾರವು ಬೆಂಬಲ ನೀಡುತ್ತಿದೆ ಎಂದು ಪ್ರೊ. ದೊರೆಸ್ವಾಮಿ ಹೇಳಿದರು. 2022ರ ಜುಲೈನಲ್ಲಿ ಪ್ರಾರಂಭವಾದ ಶೈಕ್ಷಣಿಕ ಸುಧಾರಣೆಗಳ IIನೇ ಹಂತವು ವಿದ್ಯಾರ್ಥಿಗಳಿಗೆ ಆರೋಗ್ಯ ಸೇವೆ ಗಳನ್ನು ವಿಸ್ತರಿಸಲು ವೈದ್ಯಕೀಯ ವಿಶ್ವ ವಿದ್ಯಾಲಯಗಳು/ಕಾಲೇಜುಗಳು ತಮ್ಮ ಸುತ್ತಮುತ್ತಲಿನ ಸುಮಾರು 300 ಶಾಲೆಗಳನ್ನು ಅಳವಡಿಸಿಕೊಳ್ಳುವಂತೆ ಸೂಚಿಸಿದೆ. ಪಿಇಎಸ್ ವಿಶ್ವವಿದ್ಯಾನಿಲಯದ ಉಪಕುಲಪತಿ ಡಾ. ಸೂರ್ಯಪ್ರಸಾದ್ ಜೆ ಮಾತನಾಡಿ, ಉತ್ತರ ಕರ್ನಾಟಕ ಭಾಗದಲ್ಲಿ ಈ ವರ್ಷದ ಆರಂಭದಲ್ಲಿ ವಿಶ್ವವಿದ್ಯಾನಿಲಯವು ಒಂಬತ್ತು ಪ್ರವಾಹ ಪೀಡಿತ ಶಾಲೆಗಳನ್ನು ದತ್ತು ತೆಗೆದುಕೊಂಡಿದೆ. ಶಾಲೆಗಳಿಗೆ ಮೂಲ ಸೌಕರ್ಯಗಳನ್ನು ನಿರ್ಮಿಸುವುದು ನಮ್ಮ ಪ್ರಾಥಮಿಕ ಗುರಿಯಾಗಿದೆ ಮತ್ತು ಕೊರತೆಯನ್ನು ತುಂಬಲು ನಾವು ಇಲ್ಲಿಯವರೆಗೆ ಯಾವುದೇ ಶಿಕ್ಷಕರನ್ನು ನೇಮಿಸಿಕೊಂಡಿಲ್ಲ ಎಂದು ತಿಳಿಸಿದ್ದಾರೆ.

# ರೇಣುಕಾಚಾರ್ಯ ಸಹೋದರನ ಪುತ್ರ ಚಂದ್ರಶೇಖರ್ ಶವಪತ್ತೆ ಕಾಲುವೆಯಲ್ಲಿ ಬಿದ್ದಿದ್ದ ಕಾರು ಶಾಸಕ ರೇಣುಕಾಚಾರ್ಯ ಕಣ್ಣೀರು

ಹೊನ್ನಾಳಿ (Honnali) ಎಚ್ ಕಡದಕಟ್ಟೆ ಮಧ್ಯದ ಕಾಲುವೆಗೆ ಕಾರು ಬಿದ್ದಿದೆ. ವಿಯ ತಿಳಿದು ಓಡೋಡಿ ಬಂದ ರೇಣುಕಾಚಾರ್ಯ ಸ್ಥಳದಲ್ಲೇ ಬಿಕ್ಕಿಬಿಕ್ಕಿ ಅಳುತ್ತಿದ್ದಾರೆ. ದಾವಣಗೆರೆ: ಬಿಜೆಪಿ ಶಾಸಕ (BJP MLA) ಹಾಗೂ ಮುಖ್ಯಮಂತ್ರಿಗಳ (Chief Minister) ರಾಜಕೀಯ ಕಾರ್ಯದರ್ಶಿ ಎಂ. ರೇಣುಕಾಚಾರ್ಯಸಹೋದರನ ಮಗ ಚಂದ್ರಶೇಖರ್‌ಶವ ಕಾರಿನಲ್ಲಿಪತ್ತೆಯಾಗಿದೆ. ರೇಣುಕಾಚಾರ್ಯ (Renukacharya) ಸಹೋದರ ಎಂ.ಪಿ. ರಮೇಶ್ (MP Ramesh) ಅವರಹಿರಿಯಪುತ್ರ ಎಂ.ಆರ್. ಚಂದ್ರಶೇಖರ್ ಕಾಣೆಯಾಗಿದ್ರು, ಅವರ ಕಾರು ಕಾಲುವೆ ಬಳಿ ಪತ್ತೆಯಾಗಿತ್ತು. ಹೊನ್ನಾಳಿ (Honnali) ಎಚ್ ಕಡದಕಟ್ಟೆ ಮಧ್ಯದ ಕಾಲುವೆಗೆ ಕಾರು ಬಿದ್ದಿದೆ. ವಿಯ ತಿಳಿದು ಓಡೋಡಿ ಬಂದ ರೇಣುಕಾಚಾರ್ಯ ಶವ ಕಂಡು ಸ್ಥಳದಲ್ಲೇ ಬಿಕ್ಕಿ ಬಿಕ್ಕಿ ಅಳುತ್ತಿದ್ದಾರೆ. ಗೌರಿಗದ್ದೆಗೆ ತೆರಳಿದ್ದ ಚಂದ್ರಶೇಖರ್ ಕಳೆದ ಭಾನುವಾರ ಶಿವಮೊಗ್ಗದ ಗೌರಿಗದ್ದೆಗೆ ಕಾರಿನಲ್ಲಿ ತೆರಳಿದ್ದ ಚಂದ್ರಶೇಖರ್ ವಿನಯ್ ಗುರೂಜಿ ಆಶೀರ್ವಾದ ಪಡೆದಿದ್ದರು. ನಂತರ ಚಂದ್ರು, ಶಿವಮೊಗ್ಗದಲ್ಲಿ ಸ್ನೇಹಿತರನ್ನು ಮಾತನಾಡಿಸಿ ಸ್ವಲ್ಪ ಕಾಲ ಅವರ ಜೊತೆ ಕಾಲ ಕಳೆದು ಹೊನ್ನಾಳಿಗೆ ಹಿಂದಿರುಗಿದ್ದರು. ಮುಗಿಲು ಮುಟ್ಟಿದೆ ಕುಟುಂಬಸ್ಥರ ಆಕ್ರಂದನ ತಮ್ಮ ಸ್ನೇಹಿತ ಕಿರಣ್ ಎಂಬುವರ ಜೊತೆ ತೆರಳಿದ್ದ ಚಂದ್ರು ಶಿವಮೊಗ್ಗದಿಂದ ವಾಪಸ್ ಆಗಿ ನ್ಯಾಮತಿ ವರೆಗೂ ಬಂದಿದ್ದಾರೆ.ಆನಂತರ ನಾಪತ್ತೆಯಾಗಿದ್ದಾರೆ. ಚಂದ್ರು ಪ್ರಯಾಣಿಸುತ್ತಿದ್ದ ಕಾರು ಶಿವಮೊಗ್ಗದ ಮೂಲಕ ಹಾದು ಹೋಗುವ ದೃಶ್ಯಗಳು ಪತ್ತೆಯಾಗಿ, ಭಾನುವಾರ ರಾತ್ರಿ 11.56 ರ ಸುಮಾರಿಗೆ ಚಂದ್ರಶೇಖರ್ ಮೊಬೈಲ್ ಆನ್ ನಲ್ಲಿತ್ತು, ಆದರೆ ಬೆಳದ್ದೆ 6.48 ಕ್ಕೆ ಸ್ವಿಚ್ ಆಫ್ ಆಗಿದೆ, ಚಂದ್ರಶೇಖರ್ ಪ್ರಯಾಣಿಸುತ್ತಿದ್ದ ಕಾರು ಕೂಡ ನಾಪತ್ತೆಯಾಗಿದ್ದು, ಕಿಡ್ನಾಪ್ ಆಗಿರುವ ಅನುಮಾನ ಮೂಡಿತ್ತು. ಇದೀಗ ಕಾರಿನಲ್ಲಿ ಚಂದ್ರಶೇಖರ್‌ಶವಪತ್ತೆಯಾಗಿದ್ದು, ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿದೆ. ಚಂದ್ರಶೇಖರ್ ಕಾರು ಕಾಲುವೆಗೆ ಹೇಗೆ ಬಿತ್ತು ಇನ್ನು ಘಟನಾ ಸ್ಥಳಕ್ಕೆ ದಾವಣಗೆರೆ ಎಸ್‌ಪಿ ಸಿ.ಬಿ.ರಿಷ್ಯಂತ್ ಭೇಟಿ ನೀಡಿದ್ದು, ಚಂದ್ರಶೇಖರ್ ಮೃತದೇಹವನ್ನು ಪೊಲೀಸರು ಹೊನ್ನಾಳಿ ತಾಲೂಕು ಆಸ್ಪತ್ರೆಗೆ ಸ್ಥಳಾಂತರಿಸುತ್ತಿದ್ದಾರೆ. ಆದ್ರೆ, ಚಂದ್ರಶೇಖರ್ ಕಾರು ಕಾಲುವೆಗೆ ಹೇಗೆ ಬಿತ್ತು ಎನ್ನುವುದೇ ದೊಡ್ಡ ಪ್ರಶ್ನೆಯಾಗಿದ್ದು, ಈ ಬಗ್ಗೆ ಪೊಲೀಸರು ತನಿಖೆ ಕೈಗೊಂಡಿದ್ದಾರೆ.





# ಪರಿಹಾರ ನೀಡದ ಬಿಡಿಎ; ಲೇಔಟ್ ಮುಖ್ಯರಸ್ತೆಗೆ ಬೇಲಿ ಹಾಕಿದ ವೃದ್ಧ ದಂಪತಿ

ವೃದ್ಧ ದಂಪತಿ (Old Couple) ನಾಡಪ್ರಭು ಕೆಂಪೇಗೌಡ ಲೇಔಟ್ ಮೂಲಕ 'ಹಾದು ಹೋಗುವ ಮೇಜರ್ ಆರ್ಟೀರಿಯಲ್ ರಸ್ತೆ (MAR- Major Arterial road)ಗೆ ಬೇಲಿ ಹಾಕಿದ್ದಾರೆ. ಭೂ ಸ್ವಾಧೀನ ಪಡಿಸಿಕೊಂಡು ಪರಿಹಾರ ನೀಡದ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ (Bangalore




Development Authority) ವಿರುದ್ಧ ಆಕ್ರೋಶಗೊಂಡ ವೃದ್ಧ ದಂಪತಿ (ಔಟಜ ಅಂಣಠಿಟಜ) ನಾಡಪ್ರಭು ಕೆಂಪೇಗೌಡ ಲೇಔಟ್ ಮೂಲಕ ಹಾದು ಹೋಗುವ ಮೇಜರ್ ಆರ್ಟೀರಿಯಲ್ ರಸ್ತೆ (MAR- Major Arterial road)ಗೆ ಬೇಲಿ ಹಾಕಿದ್ದಾರೆ. ಬಿಡಿಎ ವಶಪಡಿಸಿಕೊಂಡಿರುವ 100 ಮೀಟರ್‌ಗಳ್ಟು ರಸ್ತೆಗೆ ತಂತಿ ಬೇಲಿ (Fence) ಹಾಕಿ ಆಕ್ರೋಶ ಹೊರಹಾಕಿದ್ದಾರೆ. ಕೆಂಪೇಗೌಡ ಲೇಔಟ್‌ನನಾಲ್ಕನೇ ಬ್ಲಾಕ್‌ನ ಕೋಮಘಟ್ಟ ಗ್ರಾಮದ ನಿವಾಸಿಗಳಾದ ಚಿಕ್ಕಬೆಟ್ಟಯ್ಯ (75) ಮತ್ತುಲಕ್ಷ್ಮಮ್ಮ (70) ಬೇಲಿ ಹಾಕಿದ ವೃದ್ಧ. ಪಾರ್ಶ್ವವಾಯುನಿಂದ ಚಿಕ್ಕ ಬೆಟ್ಟಯ್ಯ ಅವರ ಎಡಗಾಲು ಮತ್ತು ಎಡಗೈ ನಿಷ್ಕ್ರಿಯಗೊಂಡಿದೆ.ಚಿಕ್ಕ ಬೆಟ್ಟಯ್ಯ ಅವರು ಕೆಎಸ್‌ಆರ್‌ಟಿಸಿಯ ನಿವೃತ್ತ ಉದ್ಯೋಗಿ.

ಕಳೆದ ಎರಡು ವರ್ಗಗಳಿಂದ ಪರಿಹಾರ ನೀಡದಿದ್ದಾಗ ಬೇಲಿ ಹಾಕಿದ್ದಾರೆ.ಲೇಔಟ್‌ನ ಒಂಬತ್ತು ಬ್ಲಾಕ್‌ಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆ ಇದಾಗಿದೆ.

ಮೈಸೂರು ರಸ್ತೆಯನ್ನು ಮಾಗಡಿ ರಸ್ತೆಯಿಂದ ಮತ್ತು ಲೇಔಟ್‌ನ ಎಲ್ಲಾ ಒಂಬತ್ತು ಬ್ಲಾಕ್‌ಗಳಲ್ಲಿ 26 ಸಾವಿರ ಸೈಟ್‌ಗಳೊಂದಿಗೆ ಸಂಪರ್ಕಿಸುವ 10.76 ಕಿಮೀ ರಸ್ತೆಯಲ್ಲಿ 5.7 ಕಿಮೀ ಕಾಮಗಾರಿಯನ್ನು ಬಿಡಿಎ ಪೂರ್ಣಗೊಳಿಸಿದೆ. ಭೂಮಿ ನಮ್ಮ ಹೆಸರಿಗೆ ನೋಂದಣಿ ಆಗಿಲ್ಲ ಈ ಕುರಿತು ಮಾತನಾಡಿರುವ ಇಂಡಿಯನ್ ಎಕ್ಸ್‌ಪ್ರೆಸ್ ಜೊತೆ ಮಾತನಾಡಿದ ಬೆಟ್ಟಯ್ಯ, ಈ ಲೇಔಟ್ ನಿರ್ಮಾಣಕ್ಕಾಗಿ ನಾವು 14 ಗುಂಟೆ ಭೂಮಿಯನ್ನು ಕಳೆದುಕೊಂಡಿದ್ದೇವೆ. ನಮ್ಮ ಪೂರ್ವಜರು ರೈತರಾಗಿದ್ದು, 60 ವರ್ಗಳಿಂದ ಈ ಜಮೀನು ನಮ್ಮ ಹೆಸರಿನಲ್ಲಿದೆ. 14 ಗುಂಟೆ ಭೂಮಿ ಬದಲಾಗಿ ನಮಗೆ ಅಭಿವೃದ್ಧಿಪಡಿಸಿದ 4,150 ಚದರ ಅಡಿಯ ಭೂಮಿ ಮತ್ತು ಪರಿಹಾರ ಮೊತ್ತವನ್ನು ನೀಡಲಾಗಿದೆ.ಆದ್ರೆ ನೀಡಲಾಗಿರುವ ಭೂಮಿ ನಮ್ಮ ಹೆಸರಿಗೆ ನೋಂದಣಿ ಆಗಿಲ್ಲ ಎಂದು ಬೆಟ್ಟಯ್ಯ ಹೇಳುತ್ತಾರೆ. ಚಿಕ್ಕ ಬೆಟ್ಟಯ್ಯ ಮತ್ತು ಲಕ್ಷ್ಮಮ್ಮ ಕಳೆದ ಎರಡು ವರ್ಗಗಳಿಂದ ಪರಿಹಾರಕ್ಕಾಗಿ ಹಲವು ಬಾರಿ ಬಿಡಿಎ ಕಚೇರಿಗೆ ಅಲೆದಾಟ ನಡೆಸಿದ್ದೇವೆ. ಅಧಿಕಾರಿಗಳು ಸಹ ನಮ್ಮ ಸಮಸ್ಯೆಗೆ ಸ್ಪಂದಿಸಿಲ್ಲ. ಪ್ರತಿ ಬಾರಿ ಇಲ್ಲಿಂದ ಬಿಡಿಎ ಕಚೇರಿಗೆ (ಃಆಂ ಔಜಿಜಿಛಿಜ) ಹೋಗಬೇಕಾದ್ರೆ ಓಲಾ/ಊಬರ್‌ಗೆ (ಔಟಚಿ ಂಟಜ ಗಭಜಡಿ ಚಿಡಿಜ) 800 ರೂಪಾಯಿನೀಡಬೇಕಿದೆ. ಆದ್ರೆನಮ್ಮಫೈಲ್‌ಮಾತ್ರ ಒಂದು ಟೇಬಲ್‌ನಿಂದಮತ್ತೊಂದು ಟೇಬಲ್‌ಗೆ ಹೋಗುತ್ತಿಲ್ಲ ಎಂದು ಬೇಸರ ಹೊರಹಾಕಿದ್ದಾರೆ.

1.5 ಲಕ್ಷಹಣ ಲಂಚ ನೀಡಿದ ದಂಪತಿ ನಾವು 14 ಗುಂಟೆ ಜಮೀನು ನೀಡುವಾಗ ಅಲ್ಲಿ ವಿದ್ಯುತ್ ಸಂಪರ್ಕ ಹೊಂದಿರುವ ಸುಸಜ್ಜಿತ ಮನೆ ಇತ್ತು.ಸಾರ್ವಜನಿಕರ ಒಳ್ಳೆಯದ್ದಕ್ಕಾಗಿ ನಾವು ಎಲ್ಲವನ್ನು ತ್ಯಜಿಸಿ ಈಗ ತೊಂದರೆಯಲ್ಲಿ ಸಿಲುಕಿದ್ದೇವೆ. ಜಮೀನು ನಮ್ಮ ಹೆಸರಿಗೆ ಮಾಡಿಸಿಕೊಳ್ಳಲು ಸುಮಾರು ಒಂದೂವರೆ ಲಕ್ಷದ್ದು ಹಣವನ್ನು ಲಂಚ ನೀಡಲಾಗಿದೆ ಎಂದು ಲಕ್ಷ್ಮಮ್ಮ ಆಕ್ರೋಶ ಹೊರ ಹಾಕಿದ್ದಾರೆ. ಈಗ ನಮ್ಮಿಂದ ಮತ್ತೆ ಹಣ ನೀಡಲು ಸಾಧ್ಯವಿಲ್ಲ. ಇದನ್ನು ಬಿಡಿಎ ಅಧಿಕಾರಿಗಳ ಗಮನಕ್ಕೂ ತಂದರೂ ಸ್ಪಂದಿಸುತ್ತಿಲ್ಲ ಎಂದು ಬೆಟ್ಟಯ್ಯ ಆರೋಪಿಸಿದ್ದಾರೆ. ಅಧಿಕಾರಿಗಳಿಂದ ಮನವೊಲಿಸುವ ಯತ್ನ ಇನ್ನು ಬೇಲಿ ಹಾಕಿರುವ ವಿಯ ತಿಳಿಯುತ್ತಲೇ ಲೇಔಟ್‌ಗೆ ದೌಡಾಯಿಸಿದ'ಬಿಡಿಎ ಇಂಜಿನಿಯರ್‌ಗಳು (BDA Engineers) ವೃದ್ಧ ದಂಪತಿ ಮನವೊಲಿಸಲು ಮುಂದಾಗಿದ್ದಾರೆ. ಆದ್ಷು ಬೇಗ ಪರಿಹಾರ ನೀಡುವ ಭರವಸೆಯನ್ನು ಸಹ ನೀಡಿದ್ದಾರೆ.

'ಸಿದ್ದು ಮುಂದಿನ ಸಿಎಂ' ಜೈಕಾರ ಚಿಕ್ಕಮಗಳೂರಿನಲ್ಲಿ ಮುಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಎಂದು ಅಭಿಮಾನಿಗಳು ಘೋಣೆ ಕೂಗಿದ್ರು.ಚಿಕ್ಕಮಗಳೂರಿನ ಸಿರಿ ರೆಸಾರ್ಟ್‌ನಲ್ಲಿ ಸಿದ್ದರಾಮಯ್ಯ ಸುದ್ದಿಗೋಷ್ಠಿ ನಡೆಸಿದ್ರು.ಈ ವೇಳೆ ಕಾಂಗ್ರೆಸ್ ಕಾರ್ಯಕರ್ತರು ಸಿದ್ದು ಮುಂದಿನ ಸಿಎಂ ಎಂದು ಜೈಕಾರ ಹಾಕಿದ್ರು.

## ನ್ಯಾ. ಚಂದ್ರಚೂಡ್ ಸಿಜೆಐ ಆಗುವುದನ್ನು ವಿರೋಧಿಸಿದ್ದ ಅರ್ಜಿ ವಜಾಗೊಳಿಸಿದ ಸುಪ್ರೀಂ ಕೋರ್ಟ್



**ನವದೆಹಲಿ:** ನ್ಯಾಯಮೂರ್ತಿ ಡಿವೈ ಚಂದ್ರಚೂಡ್ ಅವರು ನವೆಂಬರ್ 9, 2022 ರಂದು ದೇಶದ 50ನೇ ಮುಖ್ಯ ನ್ಯಾಯಮೂರ್ತಿಯಾಗಿ ಪ್ರಮಾಣ ವಚನ ಸ್ವೀಕರಿಸುವುದನ್ನು ತಡೆಯ ಬೇಕು ಎಂದು ಕೋರಿ ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂ ಕೋರ್ಟ್ ಬುಧವಾರ ತಿರಸ್ಕರಿಸಿದೆ. ಸಿಜೆಐ ಯುಯು ಲಲಿತ್, ನ್ಯಾಯ ಮೂರ್ತಿಗಳಾದ ಎಸ್‌ಆರ್ ಭಟ್ ಮತ್ತು ಬೇಲಾ ಎಂ ತ್ರಿವೇದಿ ಅವರ ಪೀಠ ಈ ಮನವಿಯನ್ನು "ತಪ್ಪಾಗಿ ಗ್ರಹಿಸಲಾಗಿದೆ" ಎಂದು ಪರಿಗಣಿಸಿ ಅರ್ಜಿ ವಜಾಗೊಳಿಸಲಾಗಿದೆ. ಆದೇಶದಲ್ಲಿ "ಮನವಿಯನ್ನು ಪರಿಗಣಿಸಲು ಯಾವುದೇ ಸಕಾರಣ ಇಲ್ಲ. ಮನವಿಯನ್ನು ತಪ್ಪಾಗಿ ಗ್ರಹಿಸಲಾಗಿದೆ. ಆದ್ದರಿಂದ ಅದನ್ನು ವಜಾಗೊಳಿಸಲಾಗಿದೆ ತಿಳಿಸಲಾಗಿದೆ. ಸುಪ್ರೀಂ ಕೋರ್ಟ್ ನ್ಯಾಯಮೂರ್ತಿ ಡಿ ವೈ ಚಂದ್ರಚೂಡ್ ಅವರು "ಅಧಿಕಾರ ದುರುಪಯೋಗ" ಮಾಡಿಕೊಂಡಿದ್ದಾರೆ. ಹೀಗಾಗಿ ಅವರು ಸಿಜೆಐ ಆಗಿ ಪ್ರಮಾಣವಚನ ಸ್ವೀಕರಿಸುವುದನ್ನು ತಡೆಯಬೇಕು ಎಂದು ರಶೀದ್ ಖಾನ್ ಪಠಾಣ್ ಅವರು ಅರ್ಜಿ ಸಲ್ಲಿಸಿದ್ದರು. ಅಲ್ಲದೆ ವಕೀಲರು ತುರ್ತು ಪಟ್ಟಿಗಾಗಿ ಉಲ್ಲೇಖಿಸಿದ್ದರು. ನಂತರ ಸಿಜೆಐ ಯು ಯು ಲಲಿತ್ ಅವರು ಅರ್ಜಿಯ ವಿಚಾರಣೆಯನ್ನು ಇಂದು ಮಧ್ಯಾಹ್ನ 12:45 ಕ್ಕೆ ನಡೆಸಲಾಗುವುದು ಎಂದು ತಿಳಿಸಿದ್ದರು.

# ರೇಪ್ ಆಂಡ್‌ಮರ್ಡರ್ ಕೇಸ್; ಸದಾ ಒಂಟಿಯಾಗಿಯೇ ಇರುತ್ತಿದ್ದ ಆರೋಪಿ ಬಾಲಕ ಆಳಂದ ಪೊಲೀಸ್ ಠಾಣೆ

ಆಳಂದ ಪೊಲೀಸರಿಗೆ 1 ಲಕ್ಷ ಬಹುಮಾನ ಘೋಷಿಸಲಾಗಿದೆ. ಈ ಪ್ರಕರಣದಲ್ಲಿ ಹತ್ತು ದಿನಗಳ ಒಳಗೆ ಚಾರ್ಜ್‌ಶೀಟ್ ಸಲ್ಲಿಸುತ್ತೇವೆ ಎಂದರು. ಕಲಬುರಗಿ ಜಿಲ್ಲೆಯ ಆಳಂದ



(Alanda, Kalaburagi) ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದ ಅಪ್ರಾಪ್ತ ಬಾಲಕಿ ಅತ್ಯಾಚಾರ ಮತ್ತು ಕೊಲೆ ಪ್ರಕರಣವನ್ನು (Rape And Murder Case) ಪೊಲೀಸರು 24 ಗಂಟೆಯಲ್ಲಿಯೇ ಬೇಧಿಸಿದ್ದಾರೆ. ಮಂಗಳವಾರ ಸಂಜೆ ಅಂದ್ರೆ ನವೆಂಬರ್ 1ರ ಮಧ್ಯಾಹ್ನ ಸುಮಾರು ಮೂರು ಗಂಟೆ ವೇಳೆ ಬಾಲಕಿ ಬಹಿರ್ದೆಸೆಗೆ ತೆರಳಿದ್ದ ವೇಳೆ ಆಕೆಯನ್ನು ಎಳೆದೊಯ್ದು ಅತ್ಯಾಚಾರಗೈದು ಕೊಲೆ ಮಾಡಲಾಗಿತ್ತು. ಬಂಧಿತ 16 ವರ್ಷದ ಅಪ್ರಾಪ್ತ ಐಟಿಐ ವಿದ್ಯಾರ್ಥಿಯಾಗಿದ್ದು (ITI Student), ವಿಚಾರಣೆ ವೇಳೆ ತಪ್ಪೊಪ್ಪಿಕೊಂಡಿದ್ದಾನೆ. ಬಂಧಿತ ಅಪ್ರಾಪ್ತ ಗ್ರಾಮದಲ್ಲಿ ಯಾರೊಬ್ಬರೊಂದಿಗೂ ಬೆರೆಯದೇ ಸದಾ ಒಂಟಿಯಾಗಿ ರುತ್ತಿದ್ದನು. ಸದಾ ಮೊಬೈಲ್ (Mobile) ನೋಡುತ್ತಿದ್ದ ಆರೋಪಿ, ಅಶ್ಲೀಲ ಸಿನಿಮಾ ವೀಕ್ಷಿಸಿ ಅದರಿಂದ ಪ್ರಚೋದನೆಗೆ ಒಳಗಾಗಿ ಈ ಕೃತ್ಯ ಎಸಗಿದ್ದಾನೆ. ಈ ಪ್ರಕರಣದ ಕುರಿತು ಕಲಬುರಗಿಯಲ್ಲಿ ಸುದ್ದಿಗೋಷ್ಠಿ ನಡೆಸಿದ ಎಸ್‌ಪಿ ಇಶಾಪಂತ್ ಕೇಸ್‌ಬಗ್ಗೆಮಾಹಿತಿ ನೀಡಿದರು. ಕೃತ್ಯ ಎಸಗಿದ್ದ 16 ವರ್ಷದ ಅಪ್ರಾಪ್ತಬಾಲಕ, ಐಟಿಐ ಓದುತ್ತಿದ್ದಾನೆ. ವಿಕೃತ ವಿಡಿಯೋ ನೋಡಿ ಕೃತ್ಯ ಬಾಲಕ ಸದಾ ಮೊಬೈಲ್‌ನಲ್ಲಿ ವಿಕೃತ ವಿಡಿಯೋಗಳನ್ನುನೋಡುತ್ತಿದ್ದನು. ಇದರಿಂದ ಪ್ರೇರಿತಗೊಂಡು ಬಹಿರ್ದೆಸೆಗೆ ಹೊರಟ ಬಾಲಕಿಯನ್ನು ಹಿಂಬಾಲಿಸಿದ್ದಾನೆ. ಈತನನ್ನು ನೋಡಿ ಬಾಲಕಿ ಓಡಿ ಹೋದರೂ ಬೆನ್ನಟ್ಟಿ ಹಿಡಿದು ಕಬ್ಬಿನ ಗದ್ದೆಗೆ ಎಳೆದೊಯ್ದ ಆರೋಪಿ ಕೃತ್ಯ ನಡೆಸಿ ಕಲ್ಲಿನಿಂದ ಜಜ್ಜಿ ಕೊಲೆ ಮಾಡಿದ್ದಾನೆ ಎಂದು ತಿಳಿಸಿದರು. ಇಶಾ ಪಂತ್, ಎಸ್‌ಪಿ ಪೊಲೀಸರಿಗೆ 1 ಲಕ್ಷ ಬಹುಮಾನ ಸೂಕ್ತ ಸಾಕ್ಷ್ಯಾಧಾರಗಳ ಆಧಾರದ ಮೇಲೆ ಆರೋಪಿಯ ಬಂಧನ ಮಾಡಲಾಗಿದೆ.ಕೃತ್ಯ ನಡೆದು 24 ಗಂಟೆಯಲ್ಲಿ ಆರೋಪಿಯನ್ನು ಪತ್ತೆ ಹಚ್ಚಿ ಬಂಧಿಸಿದ್ದೇವೆ. ಈ ಕಾರ್ಯಕ್ಕಾಗಿ ಇಲಾಖೆ ಆಳಂದ ಪೊಲೀಸರಿಗೆ 1 ಲಕ್ಷ ಬಹುಮಾನ ಘೋಷಿಸಲಾಗಿದೆ.ಈ ಪ್ರಕರಣದಲ್ಲಿ ಹತ್ತು ದಿನಗಳ ಒಳಗೆ ಚಾರ್ಜ್ ಶೀಟ್ ಸಲ್ಲಿಸುತ್ತೇವೆ ಎಂದರು. ಈ ಮೂಲಕ ಮೃತ ಬಾಲಕಿಗೆ ನ್ಯಾಯ ಕೊಡಲು ಯತ್ನಿಸುವೆವು.ಮೊಬೈಲ್ ಬಳಕೆಯೇ ಈ ಕೃತ್ಯಕ್ಕೆ ಕಾರಣ. ಹೆತ್ತವರು ಮಕ್ಕಳ ಕೈಗೆ ಗೆಜೆಟ್ಸ್ ಕೊಡುವಾಗ ಎಚ್ಚರಿಕೆವಹಿಸಬೇಕು. ಗ್ರಾಮೀಣ ಭಾಗದಲ್ಲಿ ಶೌಚಾಲಯಗಳ 'ಬಳಕೆ ಮಾಡದಿರುವುದೂ ಸಹ ಗಮನಿಸಿರುವೆ. ಈ ಎರಡುವಿಚಾರಗಳಬಗ್ಗೆ ಮುಂದಿನ ದಿನಗಳಲ್ಲಿ ಜಾಗೃತಿ ಮೂಡಿಸಲು ಪ್ರಯತ್ನಿಸಲಾಗುವುದು ಎಂದು ಹೇಳಿದರು. ಮೂಲತಃ ಅಫಜಲ್ಪುರ ತಾಲೂಕಿನ ಬಾಲಕಿ ಅತ್ಯಾಚಾರಕ್ಕೊಳಗಾಗಿ ಕೊಲೆಯಾದ 14 ವರ್ಷದ ಬಾಲಕಿ ಮೂಲತಃ ಅಫಜಲಪುರ ತಾಲೂಕಿನವಳು.ಆಳಂದ ತಾಲೂಕಿನ ಗ್ರಾಮವೊಂದರಲ್ಲಿ ವಿದ್ಯಾಭ್ಯಾಸ ಮಾಡಲು ಬಂದಿದ್ದಳು. ಆಳಂದ ಪೊಲೀಸ್ ಠಾಣೆ ಅಪ್ರಾಪ್ತ ಬಾಲಕಿಯ ಅತ್ಯಾಚಾರ ಮತ್ತು ಕೊಲೆ ಘಟನೆ ಖಂಡಿಸಿ ಆಳಂದ ಪಟ್ಟಣದಲ್ಲಿ ವಿವಿಧ ಸಂಘಟನೆಗಳು ಮತ್ತು ಕಲಬುರಗಿ ನಗರದಲ್ಲಿ ರಾಮ್ ಸೇನೆ ಸಂಘಟನೆ ಜಿಲ್ಲಾಧಿಕಾರಿ ಕಚೇರಿ ಮುಂದೆ ಪ್ರತಿಭಟನೆ ನಡೆಸಿ ಆಕ್ರೋಶ ವ್ಯಕ್ತಪಡಿಸಿದರು.

ಟ್ಯೂಷನ್‌ಗೆ ತೆರಳಿದ್ದ ಬಾಲಕಿ ಶವವಾಗಿ ಪತ್ತೆ ಮಂಡ್ಯ ಜಿಲ್ಲೆ ಮಳವಳ್ಳಿ ಪಟ್ಟಣದಲ್ಲಿ ನಿರ್ಮಾಣ ಹಂತದ ಮನೆಯ ಸಂಪ್‌ನಲ್ಲಿ ಬಾಲಕಿ ಶವಪತ್ತೆಯಾಗಿತ್ತು. ದಿವ್ಯಾ ಮಧ್ಯಾಹ್ನ ಟ್ಯೂಷನ್‌ಗೆ ತೆರಳಿದ್ದಳು. ಎಷ್ಟು ಸಮಯ ಕಳೆದರೂ ಬಾಲಕಿ ಮನೆಗೆಬಾರದಹಿನ್ನೆಲೆ ಕುಟುಂಬಸ್ಥರು ಹುಡುಕಾಡಿದ್ದಾರೆ. ಈ ವೇಳೆ ಟ್ಯೂಷನ್ ಹಿಂಭಾಗದಲ್ಲಿ ನಿರ್ಮಾಣ ಹಂತದ ಮನೆಯ ಸಂಪ್‌ನಲ್ಲಿ ಬಾಲಕಿ ಶವಪತ್ತೆಯಾಗಿತ್ತು. ಸ್ಥಳಕ್ಕೆ ಮಳವಳ್ಳಿ ಟೌನ್ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿ ಮೃತದೇಹವನ್ನ ಮರಣೋತ್ತರ ಪರೀಕ್ಷೆಗಾಗಿ ಮಿಮ್ಸ್ ಶವಾಗಾರಕ್ಕೆ ರವಾನಿಸಿದ್ದರು.ಇದರ ನಡುವೆ ಬಾಲಕಿಯನ್ನ ಅತ್ಯಾಚಾರವೆಸಗಿ ಕೊಲೆಗೈದಿರುವ ಬಗ್ಗೆ ಪೋಷಕರು ಆರೋಪ ಮಾಡಿದ್ದರು.ಸದ್ಯ ಈಗ ಪೊಲೀಸರ ವಿಚಾರಣೆ ವೇಳೆ ಸತ್ಯ ಬಯಲಾಗಿತ್ತು.

# ಟಿಕೆಟ್ ಆಕಾಂಕ್ಷಿಗಳಿಂದ ಡಿಕೆಶಿ ಲಕ್ಷ-ಲಕ್ಷ ಲೂಟಿ; ಬಿಜೆಪಿ

ಬೆಂಗಳೂರು: ಕೆಪಿಸಿಸಿ ಅಧ್ಯಕ್ಷ ಡಿ.ಕೆ ಶಿವಕುಮಾರ್ ಲಕ್ಷ-ಲಕ್ಷ ಲೂಟಿ ಮಾಡ್ತಿದ್ದಾರೆ ಎಂದು ಬಿಜೆಪಿ ಗಂಭೀರ ಆರೋಪ ಮಾಡಿದೆ. ಈ ಕುರಿತು ಟ್ವೀಟ್ ಮಾಡಿರುವ ಬಿಜೆಪಿ, 2018ರಲ್ಲಿ ನಾಮಪತ್ರ ಸಲ್ಲಿಸಲು ಕಾರ್ಯಕರ್ತರಿಂದ ಡಿಕೆ ಶಿವಕುಮಾರ್ 50-100 ಭಿಕ್ಷೆ ಬೇಡಿದರು.



ಇದೀಗ ಕೋಟಿ-ಕೋಟಿ ರೂಪಾಯಿ ಆಸ್ತಿ ಇದ್ದರೂ, ಕೆಪಿಸಿಸಿ ಅಧ್ಯಕ್ಷರಾದ ಮೇಲೆ ಟಿಕೆಟ್ ಆಕಾಂಕ್ಷಿಗಳಿಂದ ಕಾಂಗ್ರೆಸ್ ಲಕ್ಷ-ಲಕ್ಷ ಲೂಟಿ ಮಾಡಲು ಹೊರಟಿದೆ. ಇದರಿಂದ ಆಕಾಂಕ್ಷಿಗಳ ಜೇಬು ಖಾಲಿಯಾಗಲಿದೆಯೇ ಹೊರತು ಖಾಲಿಯಾದ ಜೇಬಿಗೆ ಟಿಕೆಟ್ ಬರುವುದಿಲ್ಲ ಎಂದು ಕುಟುಕಿದೆ.

ಅಧಿಕಾರ ದುರ್ಬಳಕೆ ಮಾಡಿಕೊಂಡ ಕರ್ನಾಟಕ ಕಾಂಗ್ರೆಸ್‌ನ ದ್ಬುರೆಲ್ಲ ಜಾಮೀನಿನ ಮೇಲೆ ಜೀವನ ಸಾಗಿಸುತ್ತಿದ್ದಾರೆ. ನಾಡನ್ನು ಅರಾಜಕತೆಯಿಂದ ತಪ್ಪಿಸಿದ ಬಿಜೆಪಿಯ ದಕ್ಷ ಆಡಳಿತವು ಭ್ರಷ್ಟರಿಗೆ ಸೆರೆಮನೆಯ ದಾರಿ ತೋರಿಸಿ, ಜನತೆಗೆ ನೆಮ್ಮದಿ ನೀಡುತ್ತಿದೆ ಎಂದು ಹೇಳಿಕೊಂಡಿದೆ. ಎರಡು ದಿನಗಳ ಹಿಂದೆಯಷ್ಟೇ ಡಿಕೆ ಶಿವಕುಮಾರ್, ಕಾಂಗ್ರೆಸ್ ಪಕ್ಷದಿಂದ ಟಿಕೆಟ್ ಬೇಕಾದವರು ಅರ್ಜಿ ಸಲ್ಲಿಸಬಹುದು, ಪಕ್ಷಕ್ಕೆ ಬರುವವರಿಗೆ ಮುಕ್ತ ಅವಕಾಶ ನೀಡಲಾಗಿದೆ ಎಂದು ಎಂದು ಹೇಳಿದ್ದರು. ಕಾಂಗ್ರೆಸ್ ನಿಂದ ವಲಸೆ ಹೋದವರಿಗೂ ಮುಕ್ತ ಆಹ್ವಾನವಿದೆ. ನಾನು ಇದನ್ನು ಪಕ್ಷದ ಅಧ್ಯಕ್ಷನಾಗಿ ಮಾತನಾಡ್ತಿದ್ದೇನೆ. ಯಾರೂ ಬೇಕಾದರೂ ಪಕ್ಷಕ್ಕೆ ಬರಬಹುದು, ಅರ್ಜಿ ಹಾಕುವವರಿಗೆ ಮುಕ್ತ ಅವಕಾಶವಿದೆ. ಯಾರು ಬೇಕಾದ್ರೂ ಬರಲಿ ನೋ ಪ್ರಾಬ್ಲಂ. ಮೊದಲು ಅವರು ಅರ್ಜಿ ಹಾಕಲಿ, ಆಮೇಲೆ ನಮ್ಮ ಕಮಿಟಿ ಪರಿಶೀಲಿಸುತ್ತದೆ ಎಂದು ತಿಳಿಸಿದ್ದರು. ಅರ್ಜಿಗೆ 5 ಸಾವಿರ ರೂ. ನಿಗದಿ ಮಾಡಲಾಗಿದೆ. ಜೊತೆಗೆ ಅರ್ಜಿ ಸಲ್ಲಿಸುವಾಗ ಸಾಮಾನ್ಯ ವರ್ಗದವರು 2 ಲಕ್ಷ ರೂ., ಎಸ್ಸಿ-ಎಸ್ಟಿ ವರ್ಗದವರು (ಖಅಖಖಿ ಅಂಟಟಣಟುಣಥಿ) 1 ಲಕ್ಷ ರೂ. ಡಿಡಿ ಲಗತ್ತಿಸಬೇಕು. ಆ ಹಣವನ್ನು ಕೆಪಿಸಿಸಿ ಕಟ್ಟಡದ ನಿರ್ಮಾಣಕ್ಕೆ ಬಳಸಿಕೊಳ್ಳುತ್ತದೆ. ನಾನು ಸ್ಪರ್ಧೆ ಮಾಡಬೇಕೆಂದರೂ ಅರ್ಜಿ ಸಲ್ಲಿಸಬೇಕು. ಹೀಗಾಗಿ ಚುನಾವಣೆಯಲ್ಲಿ ಸ್ಪರ್ಧೆ ಮಾಡಬೇಕೆಂದುಕೊಂಡವರು ಮೊದಲು ಅರ್ಜಿ ಸಲ್ಲಿಸಿ ಎಂದು ಹೇಳಿದ್ದರು.

# ಮಳೆ ಅಡ್ಡಿ: ಜೆಡಿಎಸ್ ಪಂಚರತ್ನ ಯಾತ್ರೆ ವಾರದ ಮಟ್ಟಿಗೆ ಮುಂದೂಡಿಕೆ

ಮುಳಬಾಗಿಲು (ಕೋಲಾರ ಜಿಲ್ಲೆ): ಸತತ ಮಳೆ ಕಾರಣ ಪಂಚರತ್ನ ರಥಯಾತ್ರೆಯನ್ನು ವಾರದಮಟ್ಟಿಗೆ ಮುಂದೂಡಲಾಗಿದೆ ಎಂದು ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಎಚ್.ಡಿ. ಕುಮಾರಸ್ವಾಮಿ ತಿಳಿಸಿದರು. ಮಂಗಳವಾರ ಇಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ದೇವರ



ಪ್ರಸಾದವೂ ಆಗಿದೆ, ಚೆನ್ನಾಗಿ ಪೂಜೆಯೂ ನಡೆದಿದೆ.

ಆದರೆ, ಮಳೆ ಕಾರಣ ಸಮಾವೇಶ ನಡೆಸಲು ಸಾಧ್ಯವಾಗುತ್ತಿಲ್ಲ. ಹವಾಮಾನ ಇಲಾಖೆ ಮಾಹಿತಿ ಪ್ರಕಾರ ಇನ್ನೂ ನಾಲ್ಕೈದು ದಿನ ಮಳೆ ಬರಲಿದೆ' ಎಂದರು.

ಕಾರ್ಯಕ್ರಮ ಅಸ್ತವ್ಯಸ್ತವಾಗಲಿದೆ ಎಂಬ ಮುಖಂಡರ ಸಲಹೆ ಮೇರೆಗೆ ರಥಯಾತ್ರೆ ಮುಂದೂಡಲಾಗಿದೆ. ಗ್ರಾಮ ವಾಸ್ತವ್ಯವೂ ನಡೆಯುವುದಿಲ್ಲ' ಎಂದು ಹೇಳಿದರು.

ಪಂಚರತ್ನ ನನ್ನ ಮಹತ್ವಾಕಾಂಕ್ಷೆಯ ಕಾರ್ಯಕ್ರಮ. ಮಳೆ ಬಂದಿರುವುದು ಪಂಚರತ್ನಕ್ಕೆ ಶುಭ ಸೂಚನೆ. ಮುಂದಿನ ದಿನಾಂಕವನ್ನು ಮೂರು ದಿನಗಳಲ್ಲಿ ಚರ್ಚೆ ಮಾಡಿ ನಿಗದಿ ಮಾಡುತ್ತೇವೆ. ಮುಳಬಾಗಿಲಿನಿಂದಲೇ ಮತ್ತೆ ರಥಯಾತ್ರೆಗೆ ಚಾಲನೆ ನೀಡುತ್ತೇವೆ' ಎಂದರು.

'ಕಾರ್ಯಕ್ರಮಕ್ಕೆ ತೆಲಂಗಾಣ ಸಚಿವ ರಾಜೇಂದ್ರ ರೆಡ್ಡಿ ಕೂಡ ಬಂದಿದ್ದರು. ಮುಂದಿನ ಚುನಾವಣೆಯಲ್ಲಿ ಗಡಿಭಾಗದಲ್ಲಿ ಅವರು ನಮಗೆ ಸಹಕಾರ ನೀಡಲಿದ್ದಾರೆ' ಎಂದು ಹೇಳಿದರು.

# ಯಲಿಯೂರು ವಿಎಸ್‌ಎಸ್‌ಎನ್‌ಗೆ ಅಧ್ಯಕ್ಷರಾಗಿ ನಾರಾಯಣಸ್ವಾಮಿ ಅವಿರೋಧ ಆಯ್ಕೆ

ವಾರ್ತಾ ಜಾಲ ದೇವನಹಳ್ಳಿ : ತಾಲ್ಲೂಕಿನ ಯಲಿಯೂರು ವ್ಯವಸಾಯ ಸೇವಾ ಸಹಕಾರ ಸಂಘದ ಅಧ್ಯಕ್ಷರಾಗಿದ್ದ ನಂಜಪ್ಪ ರವರ ರಾಜೀನಾಮೆ ನೀಡಿದ ಹಿನ್ನೆಲೆ ಅಧ್ಯಕ್ಷ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಅಧ್ಯಕ್ಷರಾಗಿ ನಾರಾಯಣ ಸ್ವಾಮಿ ಅವಿರೋಧವಾಗಿ ಆಯ್ಕೆಯಾದರು. ಚನ್ನರಾಯಪಟ್ಟಣ ಹೋಬಳಿ ಅಧ್ಯಕ್ಷ ಮುನಿರಾಜು, ನೂತನ ಅಧ್ಯಕ್ಷ ನಾರಾಯಣಸ್ವಾಮಿ ಅವರನ್ನು ಅಭಿನಂದಿಸಿ ಮಾತನಾಡಿ, ಸಹಕಾರ ಕ್ಷೇತ್ರದಲ್ಲಿ ಪಕ್ಷವನ್ನು ಬದಿಗೊತ್ತಿ ರೈತರಿಗೆ ಸಾರ್ವಜನಿಕರಿಗೆ ಅನುಕೂಲವಾದ ಕೆಲಸ ಕಾರ್ಯಗಳು ಮಾಡಬೇಕು ಇದಕ್ಕೆ ಉಳಿದಂತ ನಿರ್ದೇಶಕ ಮಂಡಳಿ ಸದಸ್ಯರು ಅಧ್ಯಕ್ಷರಿಗೆ ಮತ್ತು



ಉಪಾಧ್ಯಕ್ಷರಿಗೆ ಸಹಕಾರ ನೀಡುವುದು ಅಗತ್ಯ ಎಂದರು.

ಬೊಮ್ಮವಾರ ವ್ಯವಸಾಯ ಸೇವಾ ಸಹಕಾರ ಸಂಘದ ನೂತನ ಅಧ್ಯಕ್ಷ ಬೊಮ್ಮನಹಳ್ಳಿ ನಾರಾಯಣಸ್ವಾಮಿ ಮಾತನಾಡಿ ನನ್ನ ಆಯ್ಕೆಗೆ ಸಹಕರಿಸಿದ ನಮ್ಮ ಪಕ್ಷದ ಜೆಡಿಎಸ್‌ನ ನಿರ್ದೇಶಕರಿಗೂ ಧನ್ಯವಾದ ತಿಳಿಸುತ್ತೇನೆ ನನ್ನ ಅವಧಿಯಲ್ಲಿ ರೈತರಿಗೆ ಸರಾಕಾರದಿಂದ ದೊರೆಯುವ ಸೌಲಭ್ಯಗಳನ್ನು ಪಕ್ಷಾತೀತವಾಗಿ ನೀಡುವುದರ ಜೊತೆಗೆ ರಸಗೊಬ್ಬರ ಮಾರಾಟ ಬಗ್ಗೆ ಹೆಚ್ಚಿನ ಆದ್ಯತೆ ನೀಡುವುದಾಗಿ ತಿಳಿಸಿದರು.

ಇದೇ ವೇಳೆ ಟಿ.ಎ.ಪಿ.ಸಿ.ಎಂ.ಎಸ್ ಮಾಜಿ ಅಧ್ಯಕ್ಷ ನಾರಾಯಣಸ್ವಾಮಿ, ನಿರ್ದೇಶಕರಾದ ನಂಜಪ್ಪ, ಮಂಜುಳಾ, ಐಯ್ಯಣ್ಣ,ವೀರಪ್ಪ, ಚಂದ್ರಶೇಖರ್, ನಾರಾಯಣಸ್ವಾಮಿ, ಕೃಷ್ಣಪ್ಪ, ಸೀನಪ್ಪ, ಕೇಶವ, ಮಂಜುನಾಥ್, ಮುನಿವೆಂಕಟಪ್ಪ, ಜೆ.ಡಿ.ಎಸ್. ಮುಖಂಡರಾದ ಯಲಿಯೂರು ಚಿಕ್ಕಣ್ಣ, ಯರ್ತಿಗಾನಹಳ್ಳಿ ಮುನಿರಾಜ್, ಕುರುಬರಹಳ್ಳಿ ದೇವರಾಜ್, ಕಾರ್ಯನಿರ್ವಾಹಕ ಅಧಿಕಾರಿ ಎಂ.ಎಸ್. ವೆಂಕಟೇಶ್ ಇದ್ದರು.

# ಕಾಂಗ್ರೆಸ್ ಪಕ್ಷದವರಿಗೆ ಕರ್ನಾಟಕದ ಜನರಿಗೆ ಮುಖ ತೋರಿಸುವ ನೈತಿಕತೆ ಇಲ್ಲ: ಬೊಮ್ಮಾಯಿ

ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರುವುದು ಕನಸಿನ ಮಾತು ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದರು. ಉಡುಪಿ ಜಿಲ್ಲೆಯ ಕಾಪುವಿನಲ್ಲಿ ಸೋಮವಾರ ನಡೆದ ಜನಸಂಕಲ್ಪ ಯಾತ್ರೆಯ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ವಕ್ಫ್ ಜಾಗ ಕಬಳಿಸಿದವರು ಕಾಂಗ್ರೆಸ್ ಪಕ್ಷದವರು ಎಂದು ಟೀಕಿಸಿದರು. ಒಡೆದು ಆಳುವ ನೀತಿ ಕಾಂಗ್ರೆಸ್ಸಿಗರದು. ಕಾಂಗ್ರೆಸ್ ಪಕ್ಷದವರಿಗೆ ಕರ್ನಾಟಕದ ಜನರಿಗೆ ಮುಖ ತೋರಿಸುವ ನೈತಿಕತೆ ಇಲ್ಲ ಎಂದು ಆಕ್ಷೇಪಿಸಿದರು. ಹಾಸ್ಟೆಲ್ ಕಟ್ಟಡ ವಿಚಾರದಲ್ಲಿ ಭ್ರಷ್ಟಾಚಾರ, ಅನ್ನ ಭಾಗ್ಯದಲ್ಲಿ ಕನ್ನ, ಬಿಡಿಎ, ಭೂಮಿ, ನೀರಾವರಿ ಯೋಜನೆಗಳಲ್ಲಿ ಭ್ರಷ್ಟಾಚಾರ ಮಾಡಿದವರು ಕಾಂಗ್ರೆಸ್ಸಿಗರು. ಎಸ್‌ಸಿ ಎಸ್‌ಟಿ ಮೀಸಲಾತಿ ವಿಚಾರದಲ್ಲಿ ನಮಗೆ ಧೈರ್ಯ ಇತ್ತು. ಆದರೆ, ಕಾಂಗ್ರೆಸ್‌ಗೆ ಆ ಧಮ್ ಇರಲಿಲ್ಲ ಎಂದು ಟೀಕಿಸಿದರು. ಕರ್ನಾಟಕದ ಸಮಗ್ರ ಅಭಿವೃದ್ಧಿಗೆ ಡಬಲ್ ಎಂಜಿನ್ ಸರಕಾರ ಕೆಲಸ ಮಾಡುತ್ತಿದೆ. ಇದನ್ನು ಗಮನಿಸಿ ಬಿಜೆಪಿ ಸರಕಾರಕ್ಕೆ ನಿಮ್ಮ ಬೆಂಬಲ ಇರಲಿ ಎಂದು ಮನವಿ ಮಾಡಿದರು. 5 ಬಿಲಿಯನ್ ಡಾಲರ್ ಆರ್ಥಿಕತೆಯ ಚಿಂತನೆಗೆ 1 ಬಿಲಿಯನ್ ಡಾಲರ್ ಕೊಡುಗೆಯನ್ನು ನೀಡಲು ಕರ್ನಾಟಕವು ಸಂಕಲ್ಪ ಮಾಡಿದೆ. ಅನೇಕ ಕೈಗಾರಿಕೆಗಳು ಕರಾವಳಿಯಲ್ಲಿ ಹೂಡಿಕೆ ಮಾಡಲಿವೆ. ಕರ್ನಾಟಕದ ಅಭಿವೃದ್ಧಿಗೆ ಕರಾವಳಿಯ ಕೊಡುಗೆ ಮಹತ್ವದ್ದಾಗಲಿದೆ ಎಂದು ತಿಳಿಸಿದರು. ರೈತರ ಪಂಪ್‌ಸೆಟ್‌ಗಳಿಗೆ ಉಚಿತ ವಿದ್ಯುತ್, 4 ಸಾವಿರ ಹೆಚ್ಚುವರಿ ಹಣವನ್ನು



ಕಿಸಾನ್ ಸಮ್ಮಾನ್ ಯೋಜನೆಯಡಿ ನೀಡಿರುವುದು, ರೈತ ವಿದ್ಯಾನಿಧಿ ಯೋಜನೆ ಜಾರಿಯನ್ನು ಉಲ್ಲೇಖಿಸಿದ ಅವರು, ವಿದ್ಯಾನಿಧಿಯನ್ನು ಮೀನುಗಾರರ ಮಕ್ಕಳಿಗೂ ಕೊಡಲಾಗುತ್ತಿದೆ ಎಂದರು. ಜನರ ಸಂಕಷ್ಟ ನಿವಾರಿಸಲು ನಾವು ಶ್ರಮಿಸುತ್ತಿದ್ದೇವೆ. ಮೀನುಗಾರರಿಗೆ 5 ಸಾವಿರ ಮನೆಗಳನ್ನು ನಿರ್ಮಿಸಿ ಕೊಡಲಾಗುವುದು. ಮೀನುಗಾರರಿಗೆ ಹೆಚ್ಚುವರಿ ಕೆರೋಸಿನ್ ನೀಡಲು ಬದ್ಧವಿದ್ದೇವೆ. ಪಡಿತರ ಮೂಲಕ ಕುಚ್ಚಲಕ್ಕಿ ವಿತರಿಸಲಿದ್ದೇವೆ ಎಂದು ತಿಳಿಸಿದರು. ಈ ಭಾಗದ 8 ಮೀನುಗಾರರ ಬಂದರು ಅಭಿವೃದ್ಧಿಗೆ ಹೆಚ್ಚುವರಿ ಹಣ ಕೊಡಲಾಗಿದೆ. ಕೆಲಸ ಶೀಘ್ರವೇ ನಡೆಯಲಿದೆ. 100 ಹೈಸ್ಪೀಡ್ ಬೋಟ್ ಮಂಜೂರು ಮಾಡಿದ್ದೇವೆ. ಇದೇ ವರ್ಷ ಮಂಜೂರಾತಿ ಸಿಗಲಿದ್ದು, ಶೇಕಡಾ 40ರ ಸಬ್ಸಿಡಿಯೂ ಸಿಗಲಿದೆ ಎಂದು ವಿವರಿಸಿದರು. ಹಿಂದುಳಿದ ವರ್ಗಕ್ಕೆ ಸೇರಿದ ನರೇಂದ್ರ ಮೋದಿಜಿ ಅವರು ಗುಜರಾತ್‌ನ ಮುಖ್ಯಮಂತ್ರಿಯಾಗಿ 12 ವರ್ಷ ಕಾಲ ಉತ್ತಮ ಆಡಳಿತ ನೀಡಿದವರು. ಪ್ರಧಾನಿಯಾಗಿ ದೇಶವನ್ನು ಸಮರ್ಥವಾಗಿ ಮುನ್ನಡೆಸಿದವರು. ಅವರ ನೇತೃತ್ವದಲ್ಲಿ ದೇಶವು ಆರ್ಥಿಕವಾಗಿ ಅಭಿವೃದ್ಧಿ ಪಥದಲ್ಲಿ ಮುನ್ನಡೆದಿದೆ ಎಂದರು. ಸಾಗರ್ ಮಾಲಾ ಯೋಜನೆಗಳ ಮೂಲಕ ಅನೇಕ ಅಭಿವೃದ್ಧಿ ಕಾರ್ಯಗಳು ನಡೆಯಲಿವೆ. ಸಿಆರ್‌ಜಡ್ ನಿಯಮಾವಳಿಯಲ್ಲಿ ಬದಲಾವಣೆಗೆ ಬೇಡಿಕೆ ಇದ್ದುದನ್ನು ಅನುಮತಿ ಕೊಟ್ಟಿದ್ದಾರೆ. 3 ದಶಕಗಳ ಬೇಡಿಕೆ ಇದಾಗಿತ್ತು. ಕಡಲ ತೀರದ ಆರ್ಥಿಕತೆಗೆ ಇದು ವೇಗ ಕೊಡಲಿದೆ ಎಂದು ತಿಳಿಸಿದರು. ರಾಷ್ಟ್ರೀಯ ಹೆದ್ದಾರಿ, ರೈಲ್ವೆ ಸೇರಿ ಎಲ್ಲ ಕ್ಷೇತ್ರಗಳಲ್ಲಿ ದೂರದೃಷ್ಟಿ ಇರುವ ಕಾರ್ಯಕ್ರಮಗಳನ್ನು ಮೋದಿಜಿ ನೀಡಿದ್ದಾರೆ. ಕೊಂಕಣ ರೈಲ್ವೆ ವಿದ್ಯುದೀಕರಣಕ್ಕೆ ಬಿಜೆಪಿ ಕಾರಣ. ಗತಿ ಶಕ್ತಿ ಯೋಜನೆ ಮೂಲಕ ಬಂದರುಗಳನ್ನು ಮುಖ್ಯ ನಗರಗಳಿಗೆ ಜೋಡಿಸುವ ಕಾರ್ಯ ನಡೆದಿದೆ ಎಂದು ವಿವರಿಸಿದರು. 2 ತಿಂಗಳಿಗೊಮ್ಮೆ ಅದರ ಪ್ರಗತಿಯನ್ನು ಪ್ರಧಾನಿಯವರೇ ಪರಿಶೀಲಿಸುತ್ತಿದ್ದಾರೆ ಎಂದರು. ಸಾಮಾಜಿಕ ನ್ಯಾಯ ಕಾಂಗ್ರೆಸ್ ಪಕ್ಷದ ಭಾಷಣದ ಸರಕಾಗಿತ್ತು. ಅಹಿಂದ ಈಗ ಉಳಿದಿಲ್ಲ. ಹಿಂದುಳಿದ ವರ್ಗದ ಜನರು ಕಾಂಗ್ರೆಸ್ ಪಕ್ಷದ ಮೇಲಿನ ವಿಶ್ವಾಸವನ್ನು ಕಳೆದುಕೊಂಡಿದ್ದಾರೆ ಆದರೆ, ಸಾಮಾಜಿಕವಾಗಿ ಕ್ರಾಂತಿಕಾರಿ ನಿರ್ಣಯಗಳನ್ನು ಮೋದಿಜಿ ಕೈಗೊಂಡಿದ್ದಾರೆ ಎಂದರು.

# ತಂತ್ರಜ್ಞಾನದಿಂದ ಚಿಂತನಾ ಶಕ್ತಿ ಕುಸಿತ: ಬಸವರಾಜ ಬೊಮ್ಮಾಯಿ

ಬೆಂಗಳೂರು: ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ವಿಸ್ತಾರ ಮೀಡಿಯಾ ಪ್ರೈವೇಟ್‌ಲಿಮಿಟೆಡ್‌ನ 'ವಿಸ್ತಾರ ಸುದ್ದಿವಾಹಿನಿ'ಗೆ ಭಾನುವಾರ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಮುಖ್ಯಮಂತ್ರಿ ಬೊಮ್ಮಾಯಿ, ಅವರು, 'ಮಾಧ್ಯಮಗಳು ಜನರ ದನಿಯಾಗಬೇಕು. ಇಂದು ತಂತ್ರಜ್ಞಾನ ಇಡೀ ಬದುಕನ್ನು ಆವರಿಸಿದೆ. ಆದರೆ ನಮ್ಮ ಚಿಂತನಾ ಶಕ್ತಿ ಕಡಿಮೆ ಆಗುತ್ತಿದೆ. ಒಂದು ಬಟನ್‌ಒತ್ತಿದರೆ ಎಲ್ಲವೂ ಸಿಗುವಂತೆ ತಂತ್ರಜ್ಞಾನ ಬೆಳೆದಿದೆ' ಎಂದರು. 'ಆದರೆ, ಇಂತಹ ಸಂದರ್ಭದಲ್ಲಿ ಅಂತಃಕರಣ, ಮಾನವೀಯತೆ, ಪ್ರೀತಿ, ವಿಶ್ವಾಸವನ್ನು ಮರೆಯಬಾರದು. ಅದನ್ನು ತಂತ್ರಜ್ಞಾನ ಹೇಳಿಕೊಡದು. ಯಾವುದೇ ರಾಜಕಾರಣಿಯ ತಲೆ ತಣ್ಣಗಿರಬೇಕು, ಹೃದಯ ಬೆಚ್ಚಗಿರಬೇಕು ಎಂದು ಹಿರಿಯರು ಹೇಳುತ್ತಾರೆ 'ಎಂದು ಬಸವರಾಜ ಬೊಮ್ಮಾಯಿ ಅವರು ನುಡಿದರು.

ಕಾರ್ಯಕ್ರಮದಲ್ಲಿ ಪಂಚಮಸಾಲಿ ಪೀಠದ




ವಚನಾನಂದ ಸ್ವಾಮೀಜಿ, ವಿಧಾನಸಭೆ ಅಧ್ಯಕ್ಷ ವಿಶ್ವೇಶರ ಹೆಗಡೆ ಕಾಗೇರಿ, ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್, ಕೇಂದ್ರ ಸಚಿವ ಪ್ರಲ್ಹಾದ ಜೋಶಿ, ಸಚಿವರಾದ ಭೈರತಿ ಬಸವರಾಜ, ಆರ್.ಅಶೋಕ, ಎಸ್.ಟಿ.ಸೋಮಶೇಖರ್, ಡಾ.ಕೆ.ಸುಧಾಕರ್, ವಿಸ್ತಾರ ಮೀಡಿಯಾದ ಸಿಇಒ ಹರಿಪ್ರಕಾಶ್‌ಕೋಣೆಮನೆ ಇದ್ದರು. ಖಾಕಿ, ಖಾವಿ, ಖಾದಿ ಗೌರವ ಉಳಿದಿಲ್ಲ: ಡಿ.ಕೆ.ಶಿವಕುಮಾರ್

ಬೆಂಗಳೂರು: 'ಈಗ ಖಾಕಿ, ಖಾವಿ, ಖಾದಿ ಈ ಯಾವುದರ ಗೌರವವೂ ಉಳಿದಿಲ್ಲ. ಎಲ್ಲ ಗೋವಿಂದಾ, ಗೋವಿಂದ ಆಗಿ ಹೋಗಿದೆ' ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಹೇಳಿದರು.

'ವಿಸ್ತಾರ' ಸುದ್ದಿ ವಾಹಿನಿಯ ಉದ್ಘಾಟನೆ ಸಮಾರಂಭದಲ್ಲಿ 'ನಿಮ್ಮೊಡನೆ ನಾವು' ಸಹಾಯವಾಣಿ ಲೋಕಾರ್ಪಣೆ ಮಾಡಿ ಮಾತನಾಡಿದ ಅವರು, 'ಹಿಂದೆ ಶಾಸಕರೆಂದರೆ ದೊಡ್ಡ ಗೌರವ ಇತ್ತು. ನಾನು ಬಾಲಕನಾಗಿದ್ದಾಗ ಖಾಸಗಿ ಶಾಲೆಯಲ್ಲಿ ಸೀಟು ಬೇಕು ಎಂದು ನನ್ನ ತಂದೆ ನನ್ನನ್ನು ಶಾಸಕ ಕರಿಯಪ್ಪ ಅವರ ಬಳಿ ಕರೆದುಕೊಂಡು ಹೋಗಿ ಕಾಲಿಗೆ ಬೀಳು ಅಂತ ಅಂದಿದ್ದರು. ಆಗ ಶಾಸಕರೆಂದರೆ ಅಷ್ಟು ಗೌರವ. ಆದರೆ, ಈಗ ಪರಿಸ್ಥಿತಿ ಕೆಟ್ಟು ಹೋಗಿದೆ. ಟಿವಿಯಲ್ಲಿ ಖಾಕಿ ಬಟ್ಟೆ ಹಾಕಿಕೊಂಡಿರುವವರನ್ನು ನೋಡಿದರೆ ಕಳ್ಳ, ಕಳ್ಳ ಎನ್ನುತ್ತಾರೆ' ಎಂದರು. 'ಪ್ರಜಾಪ್ರಭುತ್ವದ ನಾಲ್ಕನೇ ಅಂಗವಾದ ಮಾಧ್ಯಮರಂಗ ಗೌರವ ಉಳಿಸಿಕೊಂಡಿದೆ. ರಾಜಕಾರಣಿಗಳ ಗೌರವದ ಬಗ್ಗೆಯೂ ಸ್ವಲ್ಪ ಯೋಚಿಸಿ' ಎಂದರು. 'ಸಹಾಯವಾಣಿಗೆ ಕರೆ ಮಾಡಿ ಯಾವುದಕ್ಕೆ ಎಷ್ಟು ದುಡ್ಡು ಮತ್ತಿತರ ವಿಚಾರಗಳ ಬಗ್ಗೆ ಸಿ.ಎಂಗೆ ದೂರು ಕೊಡೋಣ ಎಂದುಕೊಂಡೆ. ನನ್ನ ದೂರುಗಳು ಇದ್ದವು. ಆದರೆ, ವಿರೋಧಪಕ್ಷದ ಕೆಲಸ ಮಾಡಬೇಕಲ್ಲ. ಬೇರೆ ಸಂದರ್ಭದಲ್ಲಿ ಮಾಡಬಹುದೆಂಬ ಸುಮ್ಮನಾದೆ' ಎಂದು ಅವರು ಹೇಳಿದರು.

# ದೇವನಹಳ್ಳಿ ಕ್ಷೇತ್ರ ಎಸ್.ಟಿ. ಘಟಕದ ಸಭೆ ಜೆ.ಡಿ.ಎಸ್ ಬಲವರ್ಧನೆಗೆ ಕ್ಷೇತ್ರದ ಮುಖಂಡರು ಒಗ್ಗೂಡಬೇಕು: ಶಾಸಕ ನಿಸರ್ಗ ನಾರಾಯಣಸ್ವಾಮಿ

ವಾರ್ತಾ ಜಾಲ ದೇವನಹಳ್ಳಿ : ಜೆಡಿಎಸ್ ಪಕ್ಷದ ಬಲವರ್ಧನೆಗೆ ಕ್ಷೇತ್ರದ ಮುಖಂಡರು, ಕಾರ್ಯಕರ್ತರು ಒಗ್ಗೂಡಬೇಕು, ಪಕ್ಷ ಸಂಘಟನೆಗೆ ಹೆಚ್ಚಿನ ಒತ್ತು ನೀಡುವಂತೆ ಆಗಬೇಕು ಎಂದು ಶಾಸಕ ಎಲ್.ಎನ್.ನಾರಾಯಣಸ್ವಾಮಿ ತಿಳಿಸಿದರು. ದೇವನಹಳ್ಳಿ ಪಟ್ಟಣದ ಪ್ರವಾಸಿ ಮಂದಿರದಲ್ಲಿ ದೇವನಹಳ್ಳಿ ವಿಧಾನಸಭಾ ಕ್ಷೇತ್ರದ ಜೆಡಿಎಸ್ ವತಿಯಿಂದ ಹಮ್ಮಿಕೊಂಡಿದ್ದ ದೇವನಹಳ್ಳಿ ವಿಧಾನಸಭಾ ಕ್ಷೇತ್ರದ ಎಸ್.ಟಿ.ಘಟಕದ ಕಾರ್ಯಕರ್ತರ ಸಭೆ ಹಾಗೂ ಪದಾಧಿಕಾರಿಗಳ ಆಯ್ಕೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ದೇವನಹಳ್ಳಿ ವಿಧಾನಸಾಭಾ ಕ್ಷೇತ್ರದಲ್ಲಿ ಎಲ್ಲಾ ಜನರು ನನ್ನ ಸಹೋದರ, ಸಹೋದರಿಯರಿದ್ದಂತೆ, ಜೆಡಿಎಸ್ ಪಕ್ಷವು ಒಂದು ಕುಟುಂಬದಂತೆ, ಪ್ರತಿಯೊಬ್ಬರು ಪಕ್ಷ ಸಂಘಟನೆಗೆ ಹೆಚ್ಚಿನ ಒತ್ತು ನೀಡಬೇಕು. ಪಕ್ಷವಿದ್ದರೆ, ನಾವಿದ್ದಹಾಗೇ, ಈಗಾಗಲೇ ವಾಲ್ಮೀಕಿ ಭವನದಕ್ಕೆ ಸಚಿವ ಶ್ರೀರಾಮುಲು ಅವರ ಬಳಿ 1.5ಕೋಟಿ ರೂ.ಗಳ ಅನುದಾನ ತರಲು ಶ್ರಮಸಲಾಗಿದ್ದ ಫಲವಾಗಿ ಇದೀಗ ಭವನ ನಿರ್ಮಾಣವಾಗಿದೆ, ಸಮುದಾಯದ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಲಾಗಿದೆ, ಭವನದ ಉದ್ಘಾಟನೆಗೆ ಸಚಿವರ ಬಳಿ ಹೋಗಿ ಉದ್ಘಾಟನೆಗೆ ದಿನಾಂಕ ನಿಗಧಿಪಡಿಸಿಕೊಳ್ಳಲಾಗುತ್ತದೆ, ತಾಲೂಕಿನ ಯಲಿಯೂರು ಗ್ರಾಮದಲ್ಲಿ ಸಮಾಜದ ಹಾಸ್ಟೆಲ್ ನಿರ್ಮಾಣಕ್ಕಾಗಿ 2ಕೋಟಿ ರೂ. ಅನುದಾನ



ನೀಡಲಾಗಿದ್ದು ಈಗಾಗಲೇ ಗುದ್ದಲಿ ಪೂಜೆ ನೆರವೇರಿಸಲಾಗಿದೆ, ವಿಜಯಪುರದಲ್ಲಿ ವಾಲ್ಮೀಕಿ ಭವನ ನಿರ್ಮಾಣವಾಗಿದೆ, ಜಿಲ್ಲಾ ಉಸ್ತುವಾರಿ ಸಚಿವರು ದಿನಾಂಕ ನಿಗಧಿ ಪಡಿಸದ ಕಾರಣ ಉದ್ಘಾಟನೆಗೆ ಸ್ವಲ್ಪ ತಡವಾಗುತ್ತಿದೆ, ಹುರಳಗುರ್ಕಿ ಜಮೀನನ್ನು ಯಾರೋ ಅಕ್ರಮವಾಗಿ ಖಾತೆ ಮಾಡಿ ಕೊಂಡಿದ್ದಾರೆಂಬ ಸದ್ದು ಕೇಳಿಬಂದಿತ್ತು, ವಾಲ್ಮೀಕಿ ಅಧ್ಯಯನ ಪೀಠಕ್ಕೆ ಮೀಸಲಿರುವ ಜಾಗವಾಗಿದ್ದು, ಜಾಗವನ್ನು ಕಬಳಿಸಲು ನಾವು ಬಿಡುವುದಿಲ್ಲವೆಂದು ಪಕ್ಷದ ಅಧ್ಯಕ್ಷರೊಂದಿಗೆ ಬೇಟಿ ಕೊಟ್ಟು, ಆ ಜಾಗವನ್ನು ಭದ್ರಗೊಳಿಸಲಾಗಿದೆ, ಅಧ್ಯಯನ ಪೀಠವನ್ನು ಬೇರೆಡೆ ಸ್ಥಾಪನೆ ಮಾಡುವ ಬಗ್ಗೆ ನನ್ನ ಗಮನಕ್ಕೆ ಬಂದಾಗ ನಾನು ಸಂಬಂಧಪಟ್ಟ ಸದನದಲ್ಲಿ ಧ್ವನಿಯೆತ್ತುವುದರ ಮೂಲಕ ಗುರ್ತಿಸಿರುವ ಜಾಗವನ್ನೇ ಮೀಸಲಿಡಲು ಚರ್ಚಿಸಲಾಗಿದೆ. ಸಮಾಜದ ಮುಖಂಡರೊಂದಿಗೆ ಸದಾ ಇರುತ್ತೇನೆ. ಸಮಾಜದ ಮುಖಂಡರು, ಕಾರ್ಯಕರ್ತರು ಜೆಡಿಎಸ್ ಪಕ್ಷವನ್ನು ಬೂತ್ ಮಟ್ಟದಿಂದ ಈಗಿನಿಂದಲೇ ಸದೃಢಗೊಳಿಸಬೇಕು ಎಂದು ಕರೆ ನೀಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜೆಡಿಎಸ್ ಎಸ್‌ಟಿ ಘಟಕದ ಅಧ್ಯಕ್ಷ ಯರ್ತಿಗಾನಹಳ್ಳಿ ಶಿವಣ್ಣ ವಹಿಸಿದ್ದರು. ಈ ವೇಳೆ ತಾಲೂಕು ಜೆಡಿಎಸ್ ಅಧ್ಯಕ್ಷ ಆರ್.ಮುನೇಗೌಡ, ಪ್ರಧಾನ ಕಾರ್ಯದರ್ಶಿ ಜಿ.ಎ.ರವೀಂದ್ರ, ದೇವನಹಳ್ಳಿ ತಾಲೂಕು ಟಿ.ಎ.ಪಿ.ಸಿ.ಎಂ.ಎಸ್.ನ ಅಧ್ಯಕ್ಷ ದೇವರಾಜ್, ನಿರ್ದೇಶಕ ಕಾಮೇನಹಳ್ಳಿ ರಮೇಶ್, ಕುಂದಾಣ ವಿಎಸ್.ಎಸ್.ಎನ್ ಮಾಜಿ ಅಧ್ಯಕ್ಷ ರಾಮಣ್ಣ, ವಿಶ್ವನಾಥಪುರ ಗ್ರಾಮ ಪಂಚಾಯಿತಿ ಸದಸ್ಯ ಶ್ರೀನಿವಾಸ್, ದುದ್ದನಹಳ್ಳಿ ಗ್ರಾ.ಪಂ ಅಧ್ಯಕ್ಷೆ ಗೌರಮ್ಮ, ಮಂಡಿಬೆಲೆ ಗ್ರಾ.ಪಂ ಅಧ್ಯಕ್ಷೆ ಅಂಬಿಕಾ, ಮಾಳಿಗೇನಹಳ್ಳಿ ಎಂ.ಪಿ.ಸಿ.ಎಸ್ ಅಧ್ಯಕ್ಷ ವೆಂಕಟೇಶ್, ಮೀಸಗಾನಹಳ್ಳಿ ಶಿವಶಂಕರ್, ಎಸ್.ಟಿ ಸಮಾಜದ ಮುಖಂಡರು, ಕಾರ್ಯಕರ್ತನಾರಾಯಣಸ್ವಾಮಿ ಇದ್ದರು.

# ಬಿಬಿಎಂಪಿಯಲ್ಲಿ ಕೆಲಸ ಖಾಲಿ ಇದೆ; ನವೆಂಬರ್ 10ರಂದು ನೇರ ಸಂದರ್ಶನ

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ) ಮೆಡಿಕಲ್ ಆಫೀಸರ್ ಹುದ್ದೆಗಳನ್ನು ಭರ್ತಿ ಮಾಡುತ್ತಿದೆ. ಆಸಕ್ತರು ನವೆಂಬರ್ 10ರಂದು ನಡೆಯುವ ನೇರ ಸಂದರ್ಶನದಲ್ಲಿ ಪಾಲ್ಗೊಳ್ಳಬಹುದಾಗಿದೆ. ಬಿಬಿಎಂಪಿಯಲ್ಲಿ ಖಾಲಿ ಇರುವ 63 ಮೆಡಿಕಲ್ ಆಫೀಸರ್ ಹುದ್ದೆಗಳನ್ನು ಭರ್ತಿ ಮಾಡಲಾಗುತ್ತಿದೆ. ಎಂಬಿಬಿಎಸ್ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳನ್ನು ನೇರ ಸಂದರ್ಶನದ ಮೂಲಕ ಆಯ್ಕೆ ಮಾಡಲಾಗುತ್ತದೆ. ಆಯ್ಕೆಯಾದ ಅಭ್ಯರ್ಥಿಗಳಿಗೆ 47,250 ರೂ. ವೇತನ ನಿಗದಿ ಮಾಡಲಾಗಿದೆ. ಆಯ್ಕೆಯಾದ ಅಭ್ಯರ್ಥಿಗಳು ಬೆಂಗಳೂರಿನಲ್ಲಿ ಕೆಲಸ ಮಾಡಬೇಕು. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ನೇಮಕಾತಿ ನಿಯಮಗಳ ಅನ್ವಯ ವಯೋಮಿತಿ ನಿಗದಿ ಮಾಡಲಾಗಿದೆ. ಅಭ್ಯರ್ಥಿಗಳನ್ನು ಲಿಖಿತ ಪರೀಕ್ಷೆ ಮತ್ತು ಸಂದರ್ಶನದ ಮೂಲಕ ಆಯ್ಕೆ ಮಾಡಲಾಗುತ್ತದೆ.




ಆಸಕ್ತ ಅಭ್ಯರ್ಥಿಗಳು ರೆಸ್ಯೂಮ್ ಮತ್ತು ಅಗತ್ಯ ದಾಖಲಾತಿಗಳ ಜೊತೆ ನೇರ ಸಂದರ್ಶನದಲ್ಲಿ ಪಾಲ್ಗೊಳ್ಳಬಹುದಾಗಿದೆ. ಸಂದರ್ಶನ ನಡೆಯುವ ಸ್ಥಳ; ನೌಕರರ ಭವನ, ಬಿಬಿಎಂಪಿ ಮುಖ್ಯ ಕಚೇರಿ, ಎನ್. ಆರ್. ಚೌಕ, ಬೆಂಗಳೂರು. ಅಪ್ರೆಂಟಿಸ್ ತರಬೇತಿಗೆ ಅರ್ಜಿ ಹಾಕಿ: ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವತಿಯಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಪತ್ರಿಕೋದ್ಯಮ ಪದವೀಧರರಿಗೆ ವೃತ್ತಿಯಲ್ಲಿ ತೊಡಗಿಸಿಕೊಳ್ಳಲು ಪ್ರೋತ್ಸಾಹ ನೀಡಲು 12 ತಿಂಗಳ ಅಪ್ರೆಂಟಿಸ್ ತರಬೇತಿ ನೀಡಲಾಗುತ್ತಿದೆ.

ಪತ್ರಿಕೋದ್ಯಮ ಪದವಿ ಅಥವಾ ಸ್ನಾತಕೋತ್ತರ ಪದವಿ ಪಡೆದ ಅಭ್ಯರ್ಥಿಗಳು ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಉಡುಪಿ ಜಿಲ್ಲಾ ಕಚೇರಿಗೆ 2022–23 ನೇ ಸಾಲಿನಲ್ಲಿ ಪರಿಶಿಷ್ಟ ಜಾತಿಯ ಇಬ್ಬರು ಅಭ್ಯರ್ಥಿಗಳನ್ನು ಸಂದರ್ಶನದ ಮೂಲಕ ಆಯ್ಕೆ ಮಾಡಿಕೊಳ್ಳಲಾಗುವುದು. ಆಯ್ಕೆಯಾದ ಪ್ರತಿ ಅಭ್ಯರ್ಥಿಗೆ ಅಪ್ರೆಂಟಿಸ್ ತರಬೇತಿ ಅವಧಿಯಲ್ಲಿ ತಿಂಗಳಿಗೆ 15 ಸಾವಿರ ರೂ. ಸ್ಟೈಪಂಡ್ ನೀಡಲಾಗುತ್ತದೆ.

ಅರ್ಜಿ ಸಲ್ಲಿಸುವ ಅಭ್ಯರ್ಥಿಯು ಪತ್ರಿಕೋದ್ಯಮದಲ್ಲಿ ಪದವಿ ಅಥವಾ ಸ್ನಾತಕೋತ್ತರ ಪದವಿ ಪಡೆದಿರಬೇಕು. ಕಂಪ್ಯೂಟರ್ ಜ್ಞಾನ ಹೊಂದಿರುವುದು ಕಡ್ಡಾಯ. ಕನ್ನಡ ಭಾಷೆ ಬಳಕೆಯಲ್ಲಿ ಪ್ರಬುದ್ಧತೆ ಇರಬೇಕು. ಅಭ್ಯರ್ಥಿಗಳ ವಯಸ್ಸು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ದಿನಾಂಕದಂದು 35 ವರ್ಷದೊಳಗಿರಬೇಕು. ಆಸಕ್ತ, ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನವೆಂಬರ್ 25 ಕೊನೆಯ ದಿನ. ಆಸಕ್ತರು ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಚೇರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವಾರ್ತಾ ಭವನ, ನಾಯರ್ ಕೆರೆ, ಉಡುಪಿ ಕಚೇರಿಯನ್ನು ಸಂಪರ್ಕಿಸಬಹುದು.

# ಸಚಿವರ ಅಸಮರ್ಥತೆಯಿಂದ ತಾಯಿ, ಮಕ್ಕಳ ಸಾವಿನ ಪ್ರಮಾಣ ಏರಿಕೆ: ಎಎಪಿ

ಬೆಂಗಳೂರು, ನವೆಂಬರ್ 07: ಮಹಿಳೆ ಮತ್ತು ಮಕ್ಕಳ ಅಭಿವೃದ್ಧಿ ಸಚಿವ ಹಾಲಪ್ಪ ಆಚಾರ್‌ರವರ ಅಸಮರ್ಥತೆ ಯಿಂದಾಗಿ ರಾಜ್ಯದ ಗರ್ಭಿಣಿಯರು, ಬಾಣಂತಿಯರು ಹಾಗೂ ಮಕ್ಕಳು ಸಾವಿಗೀಡಾಗುತ್ತಿದ್ದಾರೆ. ವಿಶೇಷವಾಗಿ ಉತ್ತರ ಕರ್ನಾಟಕದ ಜಿಲ್ಲೆಗಳು ತೀವ್ರ ಸಮಸ್ಯೆ ಎದುರಿಸುತ್ತಿವೆ ಎಂದು ಆಮ್ ಆದ್ಮಿ ಪಾರ್ಟಿಯ ಬೆಂಗಳೂರು ಮಹಿಳಾ ಘಟಕದ ಅಧ್ಯಕ್ಷೆ ಕುಶಲಸ್ವಾಮಿ ಹೇಳಿದರು.

ಬೆಂಗಳೂರಿನ ಆಮ್ ಆದ್ಮಿ ಪಕ್ಷ ಕಚೇರಿಯಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕುಶಲಸ್ವಾಮಿ ಅವರು, ರಾಜ್ಯದಲ್ಲಿ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದಲೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ತೀವ್ರ ನಿರ್ಲಕ್ಷ್ಯಕ್ಕೆ ಒಳಗಾಗಿದೆ. ಈ ಹಿಂದೆ ಸಚಿವರಾಗಿದ್ದ ಶಶಿಕಲಾ ಜೊಲ್ಲೆಯವರು ಇದೇ ಇಲಾಖೆಯಲ್ಲಿ ಮೊಟ್ಟೆ ಖರೀದಿಗೆ ಸಂಬಂಧಿಸಿ ಅಕ್ರಮ ನಡೆಸಿರುವುದು ವಿಡಿಯೋದಲ್ಲಿ ದಾಖಲಾಗಿದ್ದರೂ ಅವರನ್ನು ಸಚಿವ ಸಂಪುಟದಲ್ಲಿ ಉಳಿಸಿಕೊಳ್ಳಲಾಗಿದೆ ಎಂದರು ದೂರಿದರು. ಇದೀಗ ಮಹಿಳೆ ಮತ್ತು ಮಕ್ಕಳ ಅಭಿವೃದ್ಧಿ ಸಚಿವ ಹಾಲಪ್ಪ ಆಚಾರ್ ಅಧಿಕಾರ ವಹಿಸಿಕೊಂಡು ಒಂದೂವರೆ ವರ್ಷವಾದರೂ ಮಹಿಳೆಯರು ಹಾಗೂ ಮಕ್ಕಳಿಗೆ ನೆರವಾಗುವಂತಹ




ಯಾವುದೇ ಕ್ರಮ ಕೈಗೊಂಡಿಲ್ಲ.

ಪರಿಣಾಮವಾಗಿ ತಾಯಂದಿರು, ಮಕ್ಕಳ ಮರಣ ಪ್ರಮಾಣ ಏರಿಕೆಯಾಗುತ್ತಿದೆ ಎಂದು ಕಳವಳ ವ್ಯಕ್ತಪಡಿಸಿದರು. ಮಾತೃಪೂರ್ಣ ಯೋಜನೆ ಸಂಪೂರ್ಣ ಹಳ್ಳ ಹಿಡಿದಿದೆ. ಈ ಯೋಜನೆಯಡಿ ಪೂರೈಸಬೇಕಾದ ಆಹಾರವು ಭ್ರಷ್ಟರ ಪಾಲಾಗುತ್ತಿದೆ. ತೀವ್ರವಾದ ಅಪೌಷ್ಟಿಕತೆ ಹಾಗೂ ಕಲುಷಿತ ಆಹಾರ ಸೇವನೆಯಿಂದ ಬಾಣಂತಿಯರು ಹಾಗೂ ಮಕ್ಕಳು ಬಳಲುತ್ತಿದ್ದರೂ ಸಚಿವ ಹಾಲಪ್ಪ ಆಚಾರ್ ಜಾಣಕುರುಡು ತೋರುತ್ತಿದ್ದಾರೆ.

ಧಾರವಾಡದಲ್ಲಿ ಸಾವಿನ ಸಂಖ್ಯೆ ಏರಿಕೆ ಕೇವಲ ಧಾರವಾಡ ಜಿಲ್ಲೆಯ ಆಸ್ಪತ್ರೆಗಳಲ್ಲೇ 2019–20ರಲ್ಲಿ 60, 2020–21ರಲ್ಲಿ 69, 2021–22ರಲ್ಲಿ 71 ಹಾಗೂ 2022–23ರಲ್ಲಿ ಸೆಪ್ಟೆಂಬರ್ ವರೆಗೆ 41 ತಾಯಂದಿರು ಮೃತಪಟ್ಟಿದ್ದಾರೆ. ಧಾರವಾಡ ಜಿಲ್ಲೆಯ ಆಸ್ಪತ್ರೆಗಳಲ್ಲಿನ ಶಿಶು ಮರಣ ಪ್ರಮಾಣವನ್ನು ನೋಡುವುದಾದರೆ 2019–20ರಲ್ಲಿ 504, 2020–21ರಲ್ಲಿ 454, 2021–22ರಲ್ಲಿ 327 ಹಾಗೂ 2022–23ರಲ್ಲಿ ಸೆಪ್ಟೆಂಬರ್ ತನಕ 206 ಹಸುಗೂಸುಗಳು ಮೃತಪಟ್ಟಿವೆ ಎಂದು ಅವರು ಮಾಹಿತಿ ನೀಡಿದರು. ಮಾತೃಪೂರ್ಣ ಯೋಜನೆಯಡಿ ನೀಡಲಾಗುವ ಆಹಾರ ಪದಾರ್ಥಗಳನ್ನು ಬಿಸಿಲು ಹಾಗೂ ಮಳೆಯಲ್ಲಿ ಅಂಗನವಾಡಿಗಳಿಗೆ ಬಂದು ತೆಗೆದುಕೊಂಡು ಹೋಗಲು ಸಾಧ್ಯವಾಗುವುದಿಲ್ಲ. ಈ ಕಾರಣಕ್ಕಾಗಿಯೇ ಅನೇಕರು ಸೌಲಭ್ಯಗಳಿಂದ ವಂಚಿತರಾಗುತ್ತಿದ್ದಾರೆ. ಆದ್ದರಿಂದ ಗರ್ಭಿಣಿಯರು ಹಾಗೂ ಬಾಣಂತಿಯರ ಮನೆ ಬಾಗಿಲಿಗೆ ಈ ಸೇವೆಯನ್ನು ತಲುಪಿಸಲು ಸರ್ಕಾರ ಕ್ರಮ ಕೈಗೊಳ್ಳಬೇಕು. ಎಲ್ಲಕ್ಕಿಂತ ಮುಖ್ಯವಾಗಿ ಇಲಾಖೆಯ ಬಗ್ಗೆ ತೀವ್ರ ನಿರ್ಲಕ್ಷ್ಯ ವಹಿಸುತ್ತಿರುವ ಸಚಿವ ಹಾಲಪ್ಪ ಆಚಾರ್‌ರವರನ್ನು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಸಚಿವ ಸಂಪುಟದಿಂದ ವಜಾಗೊಳಿಸಬೇಕು ಎಂದು ಕುಶಲಸ್ವಾಮಿ ಆಗ್ರಹಿಸಿದರು.

ನಾಪತ್ತೆಯಾದ 119 ಮಕ್ಕಳು ಪತ್ತೆಯಾಗಿಲ್ಲ ಆಮ್ ಆದ್ಮಿ ಪಾರ್ಟಿಯ ಬೆಂಗಳೂರು ವಕ್ತಾರರಾದ ಉಷಾ ಮೋಹನ್ ಮಾತನಾಡಿ, "ರಾಜ್ಯದ ಬಾಲಮಂದಿರ ಗಳಿಂದ ಕಳೆದ ಐದು ವರ್ಷಗಳಲ್ಲಿ 484 ಮಕ್ಕಳು ನಾಪತ್ತೆಯಾಗಿದ್ದಾರೆ. ಈ ಪೈಕಿ 119 ಮಕ್ಕಳು ಇನ್ನೂ ಪತ್ತೆಯಾಗಿಲ್ಲ. ಬಾಲಮಂದಿರಗಳಲ್ಲಿ ಸಿಬ್ಬಂದಿ ಕೊರತೆಯಿಂದ ಮಕ್ಕಳು ತಪ್ಪಿಸಿಕೊಂಡು ಹೋಗುತ್ತಿದ್ದಾರೆ ಎಂದು ಸಚಿವ ಹಾಲಪ್ಪ ಆಚಾರ್‌ರವರೇ ಒಪ್ಪಿಕೊಂಡಿದ್ದಾರೆ. ಹೀಗೆ ತಪ್ಪಿಸಿಕೊಂಡ ಮಕ್ಕಳು ಮಾದಕ ವ್ಯಸನಿಗಳಾಗುವ ಹಾಗೂ ಸಮಾಜಘಾತುಕ ಶಕ್ತಿಗಳಾಗುವ ಸಾಧ್ಯತೆ ಇದ್ದರೂ ಸಚಿವರು ಇದನ್ನು ಗಂಭೀರವಾಗಿ ಪರಿಗಣಿಸ ದಿರುವುದು ಆಘಾತಕಾರಿ" ಎಂದರು.

# ಪಕ್ಷದಲ್ಲಿ ಕುರ್ಚಿ ಆಸೆಬಿಟ್ಟು ಕೆಲಸ ಮಾಡಿ : ಖರ್ಗೆ ಕರೆ

ಬೆಂಗಳೂರು: ಯಾರೇ ಆದರೂ ತತ್ವ ಸಿದ್ಧಾಂತಗಳಿಗೆ ಬದ್ಧರಾಗಿ ಕೆಲಸ ಮಾಡಿ, ಕುರ್ಚಿ ಆಸೆಗಾಗಿ ಕೆಲಸ ಮಾಡಬೇಡಿ ಎಂದು ನೂತನ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಕರೆ ನೀಡಿದರು. ಬೆಂಗಳೂರಿನ ಅರಮನೆ ಮೈದಾನದಲ್ಲಿ ಆಯೋಜಿಸಿದ್ದ ಕಾಂಗ್ರೆಸ್‘ಸರ್ವೋದಯ ಸಮಾವೇಶ’ದಲ್ಲಿ ಮಾತನಾಡಿದ ಅವರು, ಪಕ್ಷ ಸಿದ್ಧಾಂತ ನಂಬಿದವರು ಎಂದಿಗೂ ಪಕ್ಷ ಬಿಡಲ್ಲ. ಹಾಗಾಗಿ ತತ್ವ ಸಿದ್ಧಾಂತಗಳಿಗೆ ಬದ್ಧರಾಗಿ ಕೆಲಸ ಮಾಡಿ ಎಂದರು.

ಕೆಟ್ಟ ಸರ್ಕಾರಗಳನ್ನ ಕಿತ್ತೊಗೆಯಿರಿ: ಪ್ರಧಾನಿ ಮೋದಿ ನಮ್ಮನ್ನು ಕೇಳ್ತಾರೆ 70 ವರ್ಷದಲ್ಲಿ ಏನು ಮಾಡಿದ್ರಿ ಅಂತಾ, ನಾವು ಏನು ಮಾಡದೇ ಹೋಗಿದ್ರೆ ದೇಶ ಉಳಿಯುತ್ತಿರಲಿಲ್ಲ. ಕಾಂಗ್ರೆಸ್ ಈ ದೇಶಕ್ಕೆ ಬುನಾದಿ ಹಾಕಿಕೊಟ್ಟಿದೆ. ಅಂಬೇಡ್ಕರ್ ಸಂವಿಧಾನ ಉಳಿದರೆ ದೇಶ ಉಳಿಯುತ್ತೆ, ಸಂವಿಧಾನ ಇದ್ರೆ ಮಾತ್ರ ಮೋದಿ, ಅಮಿತ್ ಶಾ ಉಳಿತಾರೆ. ಹಾಗಾಗಿ ಸಂವಿಧಾನ, ಪ್ರಜಾಪ್ರಭುತ್ವ ಹಾಗೂ ದೇಶ ಉಳಿಯಬೇಕು. ಅದಕ್ಕಾಗಿ ಜನರನ್ನು ಒಗ್ಗೂಡಿಸಿ ಹೋರಾಟ ಮಾಡಿ. ಇರುವ ಕೆಟ್ಟ ಸರ್ಕಾರಗಳನ್ನ ಕಿತ್ತೊಗೆಯಿರಿ ಎಂದು ಗುಡುಗಿದರು.

ಇವತ್ತು ಮಾತನಾಡುವ ನಾಯಕರು ಮೋದಿ ಅವರ ಶಾಲೆಯಲ್ಲಿ ಕಲಿತಿದ್ದಾರಾ? ಕಾಂಗ್ರೆಸ್ ನಿರ್ಮಿಸಿದ ಶಾಲೆಯಲ್ಲಿ ಕಲಿತು



ಮಾತನಾಡುತ್ತಿದ್ದಾರೆ. ಇಂದಿರಾಗಾಂಧಿ ಹೋರಾಟ ಮಾಡದೇ ಇದ್ದಿದ್ದರೇ ಬಾಂಗ್ಲಾದೇಶ ಇರುತ್ತಿರಲಿಲ್ಲ. ಹಾಗೆಯೇ ವಿದೇಶಾಂಗ ನೀತಿ ರೂಪಿಸಿದ್ದು ನೆಹರು. ಪದೆ-ಪದೇ ನೆಹರು, ಇಂದಿರಾಗಾಂಧಿ, ಸೋನಿಯಾ ಬೈಯ್ಯವುದು ಬಿಡಿ ಎಂದು ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದರು.

ನಮ್ಮ ಪಕ್ಷದ ಚಿಂತೆ ನಿಮಗ್ಯಾಕಪ್ಪ? ನಮ್ಮ ಪಕ್ಷಕ್ಕೆ ಅವ್ವ ಮಕ್ಕಳ ಪಾರ್ಟಿ ಅಂತಾ ಈ ಶಾ ಕರಿತಾರೆ, ಈ ಚುನಾವಣೆಯಲ್ಲಿ ಗಾಂಧಿ ಕುಟುಂಬದವರು ಸ್ಪರ್ಧೆ ಮಾಡಿಲ್ಲ. ಆದರೂ ಶಾ ಮಾತನಾಡೋದನ್ನ ಬಿಡಲ್ಲ. ಅರೆ, ನಮ್ಮ ಪಾರ್ಟಿ ಚಿಂತೆ ನಿಮಗ್ಯಾಕಪ್ಪ? ನಮ್ಮ ಪಾರ್ಟಿ ಚಿಂತಿ ನಮಗ ಬಿಡ್ರಿ, ನಿಮಗ್ಯಾಕೆ? ಎಂದು ಅಮಿತ್ ಶಾಗೆ ಟಾಂಗ್ ನೀಡಿದರು.

ಮೊದಲು ಪಕ್ಷ ಸಂಘಟನೆ ಮಾಡಿದ್ವಿ: ಸ್ವಯಂ ಶಕ್ತಿಯಿಂದ ಮುಂದೆ ಬಂದ್ರೆ ಎಲ್ಲರೂ ಗುರುತಿಸ್ತಾರೆ. ಕಾಂಗ್ರೆಸ್ ಇಬ್ಭಾಗ ಆದಾಗ ಕಲಬುರಗಿಯಲ್ಲಿ ಅಧ್ಯಕ್ಷ ಇರಲಿಲ್ಲ. ನಾನು ವಕೀಲನಾಗಿ ವೃತ್ತಿ ಆರಂಭ ಮಾಡಿದ್ದೆ. ಆಗ ಕಾಂಗ್ರೆಸ್ ನಾಯಕರ ಸಂಪರ್ಕ ಬೆಳೆಯಿತು. ನಂತರ ಅಧ್ಯಕ್ಷರಾಗಿ ಅಂತ ನಾಯಕರು ಕೇಳಿಕೊಂಡ್ರು, ಇಂದಿರಾಗಾಂಧಿ ಮಾತ್ರ ಅಧಿಕಾರಕ್ಕೆ ಬರ್ತಾರೆ, ಮುಂದೆ ನೀವೂ ಅಧಿಕಾರಕ್ಕೆ ಬರಬೇಕು ಅಂತಾ ಪ್ರೋತ್ಸಾಹ ನೀಡಿದ್ರು. ಆಗ 35 ವರ್ಷದೊಳಗಿನ ಯುವಕರೇ ಸೇರಿ ಪಕ್ಷ ಸಂಘಟನೆ ಮಾಡಿದ್ವಿ ಎಂದು ಹೇಳಿದರು.

ಪಕ್ಷ ಸೇರಿದ ಕೂಡ್ಲೆ ಅಧಿಕಾರ ಬೇಕು ಅಂತಾರೆ: ಪಕ್ಷ ಸಂಘಟನೆ ಮಾಡಿದ ಬಳಿಕ ನನಗೆ ಎಂಎಲ್ಎ ಟಿಕೆಟ್ ನೀಡಿದ್ರು, ನಾನು ಗೆದ್ದು ಬಂದೆ. ಇವತ್ತು ಸೋನಿಯಾ ಗಾಂಧಿ ಎಐಸಿಸಿ ಅಧ್ಯಕ್ಷ ಸ್ಥಾನ ನೀಡಿದ್ದಾರೆ. ಒಂದೆ ದಿನಕ್ಕೆ ನಾನು ಅಧ್ಯಕ್ಷ ಆಗಿಲ್ಲ. ಹಂತ ಹಂತವಾಗಿ ಬೆಳೆದು ಅಧ್ಯಕ್ಷನಾಗಿದ್ದೇನೆ. ಆದರೀಗ ಈಗ ಪಕ್ಷ ಸೇರಿದ ತಕ್ಷಣ ಅಧಿಕಾರ ಬೇಕು ಅಂತಾರೆ. ಗುರಿ ಇಟ್ಟು ಕೆಲಸ ಮಾಡಿದರೆ ಮಾತ್ರ ಮುಂದೆ ಬರ್ತೀರಾ ಎಂದು ಯುವಕರಿಗೆ, ನಾಯಕರಿಗೆ ಮಲ್ಲಿಕಾರ್ಜುನ ಖರ್ಗೆ ಕಿವಿಮಾತು ಹೇಳಿದರು.

## ಚಿನ್ನ ಖರೀದಿ ನೆಪದಲ್ಲಿ ಒಡವೆ ಕದಿಯುತ್ತಿದ್ದ ಕಳ್ಳಿಯ ಬಂಧನ

ಬೆಂಗಳೂರು: ಚಿನ್ನ ಖರೀದಿ ನೆಪದಲ್ಲಿ ಜ್ಯೂವೆಲ್ಲರಿ ಶಾಪ್‌ಗಳಿಗೆ ತೆರಳಿ ಮಾಲೀಕರ ಗಮನ ಬೇರೆಡೆ ಸೆಳೆದು ಕಳ್ಳತನ ಮಾಡುತ್ತಿದ್ದ ಖತರ್‌ನಾಕ್ ಕಳ್ಳಿಯನ್ನ ಯಶವಂತಪುರ ಪೊಲೀಸರು ಬಂಧಿಸಿದ್ದಾರೆ. ಲಗ್ಗೆರೆ ವಾಸಿಯಾಗಿದ್ದ ನದೀಯಾ ಬಂಧಿತೆಯಾಗಿದ್ದು ಸದ್ಯ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಕಳ್ಳತನ ಮಾಡುವುದನ್ನು ಕಾಯಕ ಮಾಡಿಕೊಂಡಿದ್ದ ಈಕೆ ಸುಲಭವಾಗಿ ಹಣ ಸಂಪಾದಿಸಲು ವಂಚನೆಯ ದಾರಿ ಹಿಡಿದಿದ್ದಳು. ಕಳೆದ ತಿಂಗಳು 19 ರಂದು ಯಶವಂತಪುರದ ಮಹಾವೀರ್ ಜ್ಯೂವೆಲ್ಲರಿ ಶಾಪ್‌ನಲ್ಲಿ ಚಿನ್ನಾಭರಣ ಕಳ್ಳತನ ಮಾಡಿದ್ದಳು. ಲೆಕ್ಕದಲ್ಲಿ ವ್ಯತ್ಯಾಸ ಕಂಡು ಬಂದಿದ್ದರಿಂದ ಮಾಲೀಕರು ಸಿಸಿಟಿವಿ ಪರಿಶೀಲಿಸಿದಾಗ ಮಹಿಳೆಯ ಕಳ್ಳತನ ಕೃತ್ಯ ಬೆಳಕಿಗೆ ಬಂದಿದೆ. ಈ ಸಂಬಂಧ ಪೊಲೀಸರಿಗೆ ನೀಡಿದ ದೂರಿನ ಆಧಾರದ ಮೇಲೆ ನದಿಯಾಳನ್ನು ಬಂಧಿಸಿ 3.2 ಲಕ್ಷ ಬೆಲೆಯ 63 ಗ್ರಾಂ ಚಿನ್ನ ವಶಪಡಿಸಿಕೊಂಡಿದ್ದಾರೆ.

## ಡಿಸೆಂಬರ್ ಮೂರನೇ ವಾರದಿಂದ ರಾಜ್ಯದಲ್ಲಿ ಅಸಲಿ ರಾಜಕೀಯದಾಟ

ಬೆಂಗಳೂರು : ವಿಧಾನಸಭಾ ಚುನಾವಣೆಗೆ ಎಲ್ಲಾ ಪಕ್ಷಗಳು ರಣತಂತ್ರ ರೂಪಿಸುತ್ತಿದ್ದು, ಬಿಜೆಪಿಯಂತೂ ಹೇಗಾದ್ರೂ ಮಾಡಿ ಅಧಿಕಾರ ಉಳಿಸಿಕೊಳ್ಳಬೇಕು ಎಂದು ನಾನಾ ತಂತ್ರ ಮಾಡುತ್ತಿದೆ. ಗೆಲ್ಲುವ ಅಭ್ಯರ್ಥಿಗಳ ಶೋಧಕ್ಕಾಗಿ ಡಿಸೆಂಬರ್ ಮೊದಲ ವಾರದವರೆಗೂ ಮೊ ದಲ ಹಂತದ ಟಿಕೆಟ್ ಸರ್ವೇಯನ್ನು ಬಿಜೆಪಿ ನಡೆಸಲಿದೆ. ಎಲೆಕ್ಷನ್ ಒಳಗೆ ಒಟ್ಟು ಮೂರು ಸಮೀಕ್ಷೆಗಳನ್ನು ನಡೆಸಿ ಬಳಿಕ ಅಭ್ಯರ್ಥಿಗಳ ಪಟ್ಟಿಯನ್ನು ಬಿಜೆಪಿ ಅಂತಿಮ ಮಾಡಲಿದೆ. ಬೇರೆ ರಾಜ್ಯಗಳಲ್ಲಿ ಮಾಡಿದಂತೆ ಹೊಸ ಮುಖ ಬಿಜೆಪಿ ಮಣೆ ಹಾಕುವ ಸಾಧ್ಯತೆಯಿದೆ. ಸದ್ಯ ಗುಜರಾತ್ ಎಲೆಕ್ಷನ್ ಬಗ್ಗೆ ತಲೆ ಕೆಡಿಸಿಕೊಂಡಿರುವ ಬಿಜೆಪಿ ಹೈಕಮಾಂಡ್ ಅಲ್ಲಿನ ಫಲಿತಾಂಶ ಹೊರಬಿದ್ದ ನಂತರ ಕರ್ನಾಟಕದ ಕಡೆ ತಲೆ ಹಾಕಲಿದೆ. ಕೇಸರಿ ಪಡೆ ಪ್ರಕಾರ ಡಿಸೆಂಬರ್ ಮೂರನೇ ವಾರದಿಂದ ರಾಜ್ಯದಲ್ಲಿ ಅಸಲಿ ರಾಜಕೀಯದಾಟ ಶುರುವಾಗಲಿದೆ. ದೆಹಲಿ ನಾಯಕರೆಲ್ಲಾ ಹೆಚ್ಚು ಕಡಿಮೆ ರಾಜ್ಯದಲ್ಲೇ ಠಿಕಾಣಿ ಹೂಡಲಿದ್ದಾರೆ. ಕಡೆಯ ನಾಲ್ಕು ತಿಂಗಳಲ್ಲಿ ದೆಹಲಿ ಟೀಂ ಆಣತಿಯಂತೆ ರಾಜ್ಯ ಬಿಜೆಪಿ ನಡೆದುಕೊಳ್ಳಲಿದೆ ಎಂಬ ವಿಚಾರ ಮೂಲಗಳಿಂದ ತಿಳಿದು ಬಂದಿದೆ.

## ಕೃಷಿ ಮೇಳಕ್ಕೆ ಸಂಭ್ರಮದ ತೆರೆ: 17 ಲಕ್ಷ ಜನರಿಂದ ವೀಕ್ಷಣೆ

ಯಲಹಂಕ: ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ ಜಿಕೆವಿಕೆ ಆವರಣದಲ್ಲಿ ನಾಲ್ಕು ದಿನಗಳಿಂದ ನಡೆದ ಕೃಷಿಮೇಳಕ್ಕೆ ಭಾನುವಾರ ಸಂಭ್ರಮದ ತೆರೆ ಬಿತ್ತು.

ಸಮಾರೋಪ ಮತ್ತು ಪ್ರಶಸ್ತಿ ಪ್ರದಾನ ಸಮಾರಂಭದ ನಂತರ ಮಾತನಾಡಿದ ಕುಲಪತಿ ಡಾ.ಎಸ್.ವಿ.ಸುರೇಶ್, ‘ಮೇಳಕ್ಕೆ ನಾಲ್ಕು ದಿನಗಳಲ್ಲಿ ಸುಮಾರು 17 ಲಕ್ಷ ಜನರು ಭೇಟಿ ನೀಡಿದ್ದರು. ಸುಮಾರು 9 ಕೋಟಿ ವಹಿವಾಟು ನಡೆದಿದೆ’ ಎಂದು ತಿಳಿಸಿದರು.



‘ಮುಂದಿನ ದಿನಗಳಲ್ಲಿ ರೈತಸ್ನೇಹಿ ಸಂಶೋಧನೆಗಳನ್ನು ಕೃಷಿಕರ ಹೊಲಗಳಲ್ಲಿಯೂ ಕೈಗೊಳ್ಳುವ ಮೂಲಕ ನಮ್ಮ ಆವರಣದಿಂದ ಹೊರಗೂ ಕೃಷಿ ಕಾರ್ಯ ಚಟುವಟಿಕೆ ನಡೆಸಲಾಗುವುದು’ ಎಂದು ಹೇಳಿದರು. ‘ವಿವಿಧ ಪ್ರಶಸ್ತಿಗಳನ್ನು ಪಡೆದ ಪ್ರಗತಿಪರ ರೈತರು, ತಂತ್ರಜ್ಞಾನಗಳು ಮತ್ತು ಆವಿಷ್ಕಾರಗಳನ್ನು ಇತರೆ ರೈತರಿಗೂ ತಲುಪಿಸುವ ಮೂಲಕ ಕೃಷಿ ವಿಶ್ವವಿದ್ಯಾಲಯದ ರಾಯಭಾರಿಗಳಾಗಿ ಕಾರ್ಯ ನಿರ್ವಹಿಸಬೇಕು’ ಎಂದು ಮನವಿ ಮಾಡಿದರು. ‘ಕೃಷಿಕರು ಕೇವಲ ಕೃಷಿ ಮಾಡಿದರೆ ಸಾಲದು. ಉತ್ತಮ ಉದ್ಯಮಿಗಳಾಗಬೇಕೆಂಬುದು ಕೃಷಿ ವಿಶ್ವವಿದ್ಯಾಲಯದ ಆಶಯವಾಗಿದೆ. ಉತ್ಪಾದನೆ ಮಾಡುವವರು ತಮ್ಮ ಬೆಳೆಗಳನ್ನು ಸಂಸ್ಕರಿಸಿ, ಅದರಿಂದ ಉತ್ತಮವಾದ ಪದಾರ್ಥಗಳನ್ನು



## ಅಪ್ಪುಗೆ ಕರ್ನಾಟಕ ರತ್ನ ಪ್ರಶಸ್ತಿ ಪ್ರದಾನ ಮಾಡಿದ ರಜನಿಕಾಂತ್ : ಮಳೆಯಲಿ ಅಭಿಮಾನಿಗಳು

ಬೆಂಗಳೂರು: ದಿವಂಗತ ಪುನೀತ್ ರಾಜ್‌ಕುಮಾರ್ ಅವರಿಗೆ ಸೂಪರ್‌ಸ್ಟಾರ್ ರಜನಿಕಾಂತ್ ಅವರು ಕರ್ನಾಟಕ ರತ್ನ ಪ್ರಶಸ್ತಿ ಪ್ರದಾನ ಮಾಡಿದರು. ಜೂನಿಯರ್ ಎನ್‌ಟಿಆರ್ ಕೂಡ ಹಾಜರಿದ್ದರು.

ವಿಧಾನಸೌಧದ ಮುಂದೆ ನಡೆದ ಕಾರ್ಯಕ್ರಮದಲ್ಲಿ ಪ್ರಶಸ್ತಿಯನ್ನು ಪ್ರದಾನ ಮಾಡಲಾಯಿತು. ಕಾರ್ಯಕ್ಕೆಮಕ್ಕೆ ಮಳೆ ಅಡ್ಡಿಯಾಯಿತು. ಮಳೆಯಲ್ಲಿಯೇ ಕಾರ್ಯಕ್ರಮ ನಡೆಯಿತು.

# ರಾಜ್ಯಪಾಲರಿಂದ ರಾಷ್ಟ್ರಪತಿಯವರ ಪದಕ ಪ್ರದಾನ

ಬೆಂಗಳೂರು: ದೇಶದ ಭದ್ರತೆ, ಸಾರ್ವಭೌಮತೆ, ಏಕತೆ ಮತ್ತು ಸಮಗ್ರತೆಯನ್ನು ಕಾಪಾಡುವಲ್ಲಿ ನಿರಂತರವಾಗಿ ತೊಡಗಿರುವ ಗೃಹರಕ್ಷಕ ದಳ, ನಾಗರಿಕ ರಕ್ಷಣೆ, ಅಗ್ನಿಶಾಮಕ ಮತ್ತು ತುರ್ತು



ಸೇವೆಗಳು ಮತ್ತು ಎಸ್ ಡಿಆರ್ ಎಫ್ ಇಲಾಖೆಯ ಯೋಧರು ಮತ್ತು ಅಧಿಕಾರಿಗಳು ಇಂದಿನ ಯುವಪೀಳಿಗೆಗೆ ಸ್ಫೂರ್ತಿ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಹೇಳಿದರು.

ನಗರದ ರಾಜಭವನದ ಗಾಜಿನಮನೆಯಲ್ಲಿ ಆಯೋಜಿಸಲಾಗಿದ್ದ ರಾಷ್ಟ್ರಪತಿಯವರ ಪದಕ ಪ್ರಧಾನ–2022 ಸಮಾರಂಭದಲ್ಲಿ ಗೃಹರಕ್ಷಕ ದಳ, ನಾಗರಿಕ ರಕ್ಷಣೆ, ಅಗ್ನಿಶಾಮಕ ಮತ್ತು ತುರ್ತು ಸೇವೆಗಳಲ್ಲಿ ಉತ್ತಮವಾಗಿ ಸೇವೆ ಸಲ್ಲಿಸಿದ ಅಧಿಕಾರಿ ಸಿಬ್ಬಂದಿಗೆ ರಾಷ್ಟ್ರಪತಿ ಪದಕ ಪ್ರದಾನ ಮಾಡಿ ಅವರು ಮಾತನಾಡಿದರು. ದೇಶದ ಭದ್ರತೆ, ಸಾರ್ವಭೌಮತೆ, ಏಕತೆ ಮತ್ತು ಸಮಗ್ರತೆಯನ್ನು ಕಾಪಾಡುವಲ್ಲಿ ಮತ್ತು ನೈಸರ್ಗಿಕ ಮತ್ತು ಮಾನವೀಯತೆಯಿಂದ ಜನರಿಗೆ ಸೇವೆ ಸಲ್ಲಿಸುವಲ್ಲಿ ಗೃಹರಕ್ಷಕ ದಳ, ನಾಗರಿಕ ರಕ್ಷಣೆ, ಅಗ್ನಿಶಾಮಕ ಮತ್ತು ತುರ್ತು ಸೇವೆಗಳು ಮತ್ತು ರಾಜ್ಯ ವಿಪತ್ತು ನಿರ್ವಹಣಾ ಪಡೆ ಇಲಾಖೆಯ ಯೋಧರು ಮತ್ತು ಅಧಿಕಾರಿಗಳು ನಿರ್ವಹಿಸುತ್ತಿರುವ ಕಾರ್ಯ ಪ್ರಶಂಸನೀಯ ಎಂದರು.

ಕಷ್ಟದ ಪರಿಸ್ಥಿತಿಯುಲ್ಲಿ ದೇಶವಾಸಿಗಳ ರಕ್ಷಣೆಗಾಗಿ ಹಾಗೂ ತ್ಯಾಗ ಮತ್ತು ಸಮರ್ಪಣೆಗಾಗಿ ಮತ್ತು ಅವರ ಜೀವ ಮತ್ತು ಆಸ್ತಿಯುನ್ನು ರಕ್ಷಿಸುವಲ್ಲಿ ಅವರ ವಿಶಿಷ್ಟ ಸೇವೆಗಳಿಗಾಗಿ ಗೃಹರಕ್ಷಕ ದಳ, ನಾಗರಿಕ ರಕ್ಷಣೆ, ಅಗ್ನಿಶಾಮಕ ಮತ್ತು ತುರ್ತು ಸೇವೆಗಳು ಮತ್ತು ಎಸ್‌ಡಿಆರ್ ಎಫ್‌ನ ಸಿಬ್ಬಂದಿ ಮತ್ತು ಅಧಿಕಾರಿಗಳಿಗೆ "ರಾಷ್ಟ್ರಪತಿ ಪದಕ"ವನ್ನು ಪ್ರದಾನ ಮಾಡಿರುವುದು ಸಂತಸ ತಂದಿದೆ. ಅದಮ್ಯ ಧೈರ್ಯ, ಸಂಕಲ್ಪ, ನಿಸ್ವಾರ್ಥ ಮತ್ತು ತ್ಯಾಗ ಶ್ಲಾಘನೀಯ. ಉತ್ಕೃಷ್ಟತೆಯು ಎತ್ತರವನ್ನು ಸಾಧಿಸಲು ನಿಮ್ಮ ಕಾರ್ಯಗಳು ಎಲ್ಲರಿಗೂ ಮಾದರಿಯಾಗುತ್ತವೆ ಎಂದು ತಿಳಿಸಿದರು.

ಕೋವಿಡ್, ಪ್ರವಾಹ, ಕಟ್ಟಡಗಳಲ್ಲಿ ಬೆಂಕಿ, ರಸ್ತೆ, ರೈಲು ಮತ್ತು ವಾಯು ಅಪಘಾತಗಳು ಮತ್ತು ನೈಸರ್ಗಿಕ ವಿಕೋಪಗಳು – ಭೂಕಂಪ ಮತ್ತು ಭೂಕುಸಿತ ಮುಂತಾದ ವಿವಿಧ ಸಂದರ್ಭಗಳಲ್ಲಿ ಡಿಜಿಪಿ ಡಾ. ಅಮರ್ ಕುಮಾರ್ ಪಾಂಡೆ ನೇತೃತ್ವದಲ್ಲಿ ನಾಗರಿಕ ರಕ್ಷಣಾ ಇಲಾಖೆಯು ಅತ್ಯುತ್ತಮ ಪ್ರದರ್ಶನ ನೀಡಿದೆ ಎಂದು ತಿಳಿಸಿದರು.

ರಕ್ಷಣೆ, ಪರಿಹಾರ ಮತ್ತು ಪುನರ್ವಸತಿ ಹೊರತುಪಡಿಸಿ, ಅಗ್ನಿಶಾಮಕ ಸೇವೆಗಳು, ಸಿವಿಲ್ ಡಿಫೆನ್ಸ್ ಮತ್ತು ಹೋಮ್ ಗಾರ್ಡ್‌ಗಳು ಯಾವುದೇ ರೀತಿಯ ವಿಪತ್ತಿನ ಸಂದರ್ಭದಲ್ಲಿ ಸಮುದಾಯದ ಸುರಕ್ಷತೆಗೆ ಪ್ರಾಥಮಿಕವಾಗಿ ಅತ್ಯಗತ್ಯ. ಅಪಘಾತ ಅಥವಾ ನೈಸರ್ಗಿಕ ವಿಕೋಪದ ಸ್ಥಳದಲ್ಲಿ ಪ್ರಥಮ ಚಿಕಿತ್ಸೆ ಮತ್ತು ಸಂವಹನಗಳನ್ನು ಒದಗಿಸಲು ಪ್ರಾಥಮಿಕ ಪ್ರತಿಸ್ಪಂದಕರಾಗಿ, ವಿಪತ್ತು ನಿರ್ವಹಣೆಗಾಗಿ ಸಾರ್ವಜನಿಕ ಜಾಗೃತಿ ಮತ್ತು ಸಮುದಾಯದ ಸಾಮರ್ಥ್ಯವನ್ನು ನಿರ್ಮಿಸಲು ಈ ಸಂಸ್ಥೆಗಳು ಮಾಡುತ್ತಿರುವ ಕೆಲಸ ಶ್ಲಾಘನೀಯ ಎಂದು ಪ್ರಶಂಸಿದರು. ಹವಾಮಾನ ಬದಲಾವಣೆಯಿಂದಾಗಿ, ಪ್ರವಾಹಗಳು, ಬರಗಳು, ಶಾಖದ ಅಲೆಗಳು ಮತ್ತು ಚಂಡಮಾರುತಗಳಂತಹ ಪರಿಸ್ಥಿತಿಗಳು ಸೃಷ್ಟಿಯಾಗುತ್ತಲೇ ಇರುತ್ತವೆ ಎಂಬುದು ಅನೇಕ ಸಂಶೋಧನಾ ಕಾರ್ಯಗಳಿಂದ ಸ್ಪಷ್ಟವಾಗಿದೆ. ಈ ದಿಕ್ಕಿನಲ್ಲಿ ಸಕಾರಾತ್ಮಕ ಕ್ರಮಗಳನ್ನು ತೆಗೆದುಕೊಳ್ಳದಿದ್ದರೆ, ನೈಸರ್ಗಿಕ ವಿಕೋಪಗಳ ಆವರ್ತನ ಮತ್ತು ತೀವ್ರತೆ ಹೆಚ್ಚಾಗುವ ಸಾಧ್ಯತೆಯಿದೆ ಎಂದು ಅಭಿಪ್ರಾಯಪಟ್ಟರು.

ಬೆಂಗಳೂರಿನ ರಾಸಾಯನಿಕ ಕಾರ್ಖಾನೆಯಲ್ಲಿ ಇತ್ತೀಚೆಗೆ ಸಂಭವಿಸಿದ ರಾಸಾಯನಿಕ ಬೆಂಕಿಯ ಸಂದರ್ಭದಲ್ಲಿ, ಅಗ್ನಿಶಾಮಕ ಸೇವೆಗಳು ಜೀವ ಮತ್ತು ಆಸ್ತಿಗಳನ್ನು ಉಳಿಸುವ ಉನ್ನತ ಮಟ್ಟದ ಸಾಮರ್ಥ್ಯವನ್ನು ಪ್ರದರ್ಶಿಸಿದವು. ಇದು ಎಲ್ಲಾ ಹಂತಗಳಲ್ಲಿ ಮೆಚ್ಚುಗೆ ಪಡೆದಿದೆ. ಭಾರತ ಸರ್ಕಾರದ ಗೃಹ ವ್ಯವಹಾರಗಳ ಸಚಿವಾಲಯವು ಕರ್ನಾಟಕದ ನಾಗರಿಕ ರಕ್ಷಣಾ ಇಲಾಖೆಯನ್ನು ದೇಶದ ಅತ್ಯುತ್ತಮ ನಾಗರಿಕ ರಕ್ಷಣಾ ಸೇವಾ ಪೂರೈಕೆದಾರ ಎಂದು ಗುರುತಿಸಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಗೃಹರಕ್ಷಕ ದಳ, ನಾಗರಿಕ ರಕ್ಷಣೆ, ಅಗ್ನಿಶಾಮಕ ಮತ್ತು ತುರ್ತು ಸೇವೆಗಳಲ್ಲಿ ಉತ್ತಮವಾಗಿ ಸೇವೆ ಸಲ್ಲಿಸಿದ ಒಟ್ಟು 58 ಅಧಿಕಾರಿ,



ಸಿಬ್ಬಂದಿಗೆ ರಾಷ್ಟ್ರಪತಿ ಪದಕ ಪ್ರದಾನ ಮಾಡಲಾಯಿತು. ಗೃಹ ಸಚಿವರಾದ ಆರಗ ಜ್ಞಾನೇಂದ್ರ, ಅಪರ ಮುಖ್ಯ ಕಾರ್ಯದರ್ಶಿ ರಜನೀಶ್ ಗೋಯಲ್, ಆರಕ್ಷಕ ಮಹಾನಿರ್ದೇಶಕರಾದ ಡಾ.ಅಮರ್ ಕುಮಾರ್ ಪಾಂಡೆ ಸೇರಿದಂತೆ ಮುಂತಾದ ಗಣ್ಯರು ಉಪಸ್ಥಿತರಿದ್ದರು.

# ಕಾಂಗ್ರೆಸ್ ಮುಳುಗುವ ಹಡಗಿಗೆ ಹೊಸ ಕ್ಯಾಪ್ಟನ್ ಮಾಡಿದೆ: ಆರಗ ಜ್ಞಾನೇಂದ್ರ

ಬೆಂಗಳೂರು: ಮುಳುಗುವ ಹಡಗಿಗೆ ಕಾಂಗ್ರೆಸ್‌ನವರು ಹೊಸ ಕ್ಯಾಪ್ಟನ್ ನೇಮಿಸಿ ಬದಲಾವಣೆ ಮಾಡಿದ್ದಾರೆ. ಮಲ್ಲಿಕಾರ್ಜುನ ಖರ್ಗೆ ಈ ವಯಸ್ಸಿನಲ್ಲಿ ಇಡೀ ದೇಶ ಸುತ್ತಿ ಹೇಗೆ ಪಕ್ಷ ಕಟ್ತಾರೋ ಗೊತ್ತಿಲ್ಲ. ಎಂದು ಗೃಹ ಸಚಿವ ಆರಗ ಜ್ಞಾನೇಂದ್ರ ಕಾಂಗ್ರೆಸ್ ವಿರುದ್ಧ ವ್ಯಂಗ್ಯವಾಡಿದ್ದಾರೆ.



ನಿನ್ನೆ ಕಾಂಗ್ರೆಸ್ ಸಮಾವೇಶದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ತರುತ್ತೇವೆ ಎಂಬ ಕಾಂಗ್ರೆಸ್ ನಾಯಕರ ಹೇಳಿಕೆಗೆ ಪ್ರತಿಕ್ರಿಯೆ ನೀಡಿ ದ ಅವರು, ಕಾಂಗ್ರೆಸ್ ಅವರು ಇನ್ನೊಬ್ಬರಿಗೆ ಟೀಕೆ ಮಾಡೋದು ಯಶಸ್ಸು ಅಂತ ಅಂದುಕೊಂಡಿದ್ದಾರೆ. ಆದರೆ ಅದು ಯಾವುದು ಕೈಗೂಡುವುದಿಲ್ಲ. ಕಾಂಗ್ರೆಸ್ ಎಷ್ಟು ಭ್ರಷ್ಟಾಚಾರ ಮಾಡಿದೆ ಅಂತ ಜನರಿಗೆ ಗೊತ್ತಿದೆ. ಕಾಂಗ್ರೆಸ್ ಅವರು ಮುಳುಗುವ ಹಡಗಿಗೆ ಈಗ ಹೊಸ ಕ್ಯಾಪ್ಟನ್ ಬದಲಾವಣೆ ಮಾಡಿದ್ದಾರೆ ಎಂದು ಕಿಡಿಕಾರಿದ್ದಾರೆ.

ಇಷ್ಟು ದಿನ ಆ ಕುಟುಂಬವೇ ಎಲ್ಲಾ ಮಾಡ್ತಿತ್ತು. ಪಕ್ಷ ಮುಳುಗೋ ಸಮಯದಲ್ಲಿ ಖರ್ಗೆಗೆ ಅಧಿಕಾರ ಕೊಟ್ಟಿದ್ದಾರೆ. ಖರ್ಗೆ ಅವರ ಮೇಲೆ ನನಗೆ ಅಪಾರ ಗೌರವ ಇದೆ. ಆದ್ರೆ ಈ ವಯಸ್ಸಿನಲ್ಲಿ ಇಡೀ ದೇಶ ಸುತ್ತಿ ಹೇಗೆ ಪಕ್ಷ ಕಟ್ತಾರೋ ಗೊತ್ತಿಲ್ಲ. ಕಾಂಗ್ರೆಸ್‌ಗೆ ದೇಶ, ರಾಜ್ಯದಲ್ಲಿ ಭವಿಷ್ಯ ಇಲ್ಲ ಎಂದು ಟೀಕಿಸಿದ್ದಾರೆ.

ಸಿದ್ದರಾಮಯ್ಯರಿಂದ ಕಾಂಗ್ರೆಸ್ ಅಧಿಕಾರಕ್ಕೆ ತರುತ್ತೇವೆ ಎಂದು ಮಲ್ಲಿಕಾರ್ಜುನ ಖರ್ಗೆ ಅವರಿಗೆ ಮಾತು ಕೊಟ್ಟ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಕಾಂಗ್ರೆಸ್ ನಾಯಕರು ಏನ್ ಮಾತಾಡ್ತಾರೆ ಅನ್ನೋದು ಮುಖ್ಯ ಅಲ್ಲ. ಜನ ಏನ್ ಮಾತಾಡ್ತಾರೆ ಅನ್ನೋದು ಮುಖ್ಯ. ದೇಶದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದಾಗ ಏನೇನು ಮಾಡಿದ್ದಾರೆ ಅಂತ ಜನರಿಗೆ ಗೊತ್ತಿದೆ. ಕಾಂಗ್ರೆಸ್ ಅವ್ರು ನಂಬಿಕೆ ಭರವಸೆ ಕಳೆದುಕೊಂಡಿದ್ದಾರೆ. ಅವರು ಅಧಿಕಾರದಲ್ಲಿ ಇದ್ದಾಗ ಭ್ರಷ್ಟಾಚಾರ ಮಾಡಿದ್ದಾರೆ. ಈಗ ಏನ್ ಮಾತಾಡಿದ್ರು ಜನ ನಂಬುವ ಸ್ಥಿತಿಯಲ್ಲಿ ಇಲ್ಲ ಎಂದು ವಾಗ್ದಾಳಿ ನಡೆಸಿದ್ದಾರೆ.

# ಮಂಡ್ಯದಲ್ಲಿ ಬಿಜೆಪಿಗೆ ನೆಲೆ ಇಲ್ಲ, ಅವರಿಂದ ಜೆಡಿಎಸ್ ಮುಕ್ತ ಮಾಡಲು ಆಗಲ್ಲ: ನಿಖಿಲ್ ಕುಮಾರಸ್ವಾಮಿ




ಮಂಡ್ಯ: ಬಿಜೆಪಿಗೆ ಮಂಡ್ಯ ಜಿಲ್ಲೆಯಲ್ಲಿ ನೆಲೆಯೇ ಇಲ್ಲ, ಅವರು ಹೇಗೆ ಜೆಡಿಎಸ್ ಮುಕ್ತ ಮಾಡುತ್ತಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ನಳಿನ್‌ಕುಮಾರ್ ಕಟೀಲ್‌ಗೆ ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಟಾಂಗ್ ನೀಡಿದ್ದಾರೆ.

ಕಳೆದ ವಾರ ಮಂಡ್ಯದಲ್ಲಿ ನಡೆದ ಬಿಜೆಪಿ ಸಭೆಯಲ್ಲಿ ಮಂಡ್ಯದಲ್ಲಿ ಈಗಾಗಲೇ ಕಾಂಗ್ರೆಸ್ ಮುಕ್ತವಾಗಿದೆ, ನಾವು ಜೆಡಿಎಸ್ ಮುಕ್ತ ಮಾಡುತ್ತೇವೆ ಎಂದು ನಳಿನ್ ಕುಮಾರ್ ಕಟೀಲು ಹೇಳಿದ್ದರು. ಈ ಹೇಳಿಕೆಗೆ ಮಂಡ್ಯದಲ್ಲಿ ಇಂದು ಪ್ರತಿಕ್ರಿಯೆ ನೀಡಿದ ನಿಖಿಲ್ ಕುಮಾರಸ್ವಾಮಿ, ಮೊನ್ನೆ ಕಟೀಲ್ ಸಾಹೇಬ್ರು ಮಾತನಾಡುವ ವೇಳೆ ಬಹುತೇಕ ಎಲ್ಲ ಕುರ್ಚಿಗಳು ಖಾಲಿಯಾಗಿದ್ದವು. ಮಂಡ್ಯದಲ್ಲಿ ಜೆಡಿಎಸ್ ಮುಕ್ತ ಮಾಡುವುದಕ್ಕೆ ಬಿಜೆಪಿಗೆ ಮಂಡ್ಯದಲ್ಲಿ ನೆಲೆಯೇ ಇಲ್ಲ. ಅದರ ಬಗ್ಗೆ ಚರ್ಚೆ ಮಾಡುವುದಕ್ಕೆ ನಾನು ಇಷ್ಟಪಡಲ್ಲ ಎಂದು ಹೇಳಿದ್ದಾರೆ.

ಇದೇ ವೇಳೆ ಹೆಚ್.ಡಿ.ಕುಮಾರಸ್ವಾಮಿ ಕಣ್ಣೀರಾ ನಾಯಕ ಎಂಬ ಕಟೀಲ್ ಹೇಳಿಕೆಗೆ, ಕುಮಾರಣ್ಣ ಮಂಡ್ಯಕ್ಕೆ ಬಜೆಟ್‌ನಲ್ಲಿ ಎಂಟೂಮುಕ್ಕಾಲು ಸಾವಿರ ಕೋಟಿ ಮೀಸಲಿಟ್ಟಿದ್ದರು. ಆಗ ಬಿಜೆಪಿಯವರು ಲಘುವಾಗಿ ಮಾತನಾಡಿದರು. ಮಂಡ್ಯ, ರಾಮನಗರ, ಹಾಸನಕ್ಕೆ ಸೀಮಿತವಾದ ಬಜೆಟ್ ಅಂದರು. ಬಳಿಕ ಬಿಜೆಪಿ ಸರ್ಕಾರ ಬಂದ ಮೇಲೆ ಆ ಅನುದಾನ ಏನಾಯಿತು ಅಂತ ಪ್ರಶ್ನೆ ಮಾಡಿಕೊಳ್ಳಲಿ ಎಂದು ತಿರುಗೇಟು ನೀಡಿದ್ದಾರೆ.

## ಓಲಾ, ಉಬರ್‌ನಲ್ಲಿ ಆಟೋರಿಕ್ಷಾ ಸೇವೆ: 4 ವಾರ ಸಮಯ ನೀಡುವಂತೆ ಹೈಕೋರ್ಟ್‌ಗೆ ಮನವಿ ಮಾಡಿದ ಸರ್ಕಾರ

ಬೆಂಗಳೂರು: ಮೊಬೈಲ್ ಆಪ್ ಆಧಾರಿತ ಓಲಾ ಉಬರ್ ಸೇವೆಗಳಲ್ಲಿ ಆಟೋರಿಕ್ಷಾಗಳ ಬಳಕೆ ನಿರ್ಬಂಧಿಸಿದ್ದ ಅರ್ಜಿ ಸಂಬಂಧ ಪರಿಹಾರ ಕಂಡುಕೊಳ್ಳಲು ಇನ್ನೂ ನಾಲ್ಕು ವಾರಗಳ ಕಾಲಾವಕಾಶ ನೀಡಬೇಕು ಎಂದು ಹೈಕೋರ್ಟ್‌ಗೆ ಸರ್ಕಾರ ಮನವಿ ಮಾಡಿದೆ.



ಆಪ್ ಆಧಾರಿತ ಓಲಾ ಮತ್ತು ಉಬರ್ ಆಟೋರಿಕ್ಷಾ ಸೇವೆ ಸ್ಥಗಿತಗೊಳಿಸಬೇಕು ಎಂದು ರಾಜ್ಯ ಸರ್ಕಾರ ಇತ್ತೀಚೆಗೆ ಹೊರಡಿಸಿರುವ ಆದೇಶ ರದ್ದುಪಡಿಸುವಂತೆ ಕೋರಿ ಸಲ್ಲಿಸಿದ ಅರ್ಜಿಗಳ ವಿಚಾರಣೆ ವೇಳೆ ಮುಂದಿನ 4 ವಾರ ಸಮಯ ನೀಡುವಂತೆ ಹೈಕೋರ್ಟ್‌ಗೆ ಸರ್ಕಾರದ ಪರ ವಕೀಲರು ಮನವಿ ಮಾಡಿದರು.

ಆಪ್ ಆಧಾರಿತ ಓಲಾ ಮತ್ತು ಉಬರ್ ಆಟೋರಿಕ್ಷಾ ಸೇವೆ ಸ್ಥಗಿತಗೊಳಿಸಬೇಕು ಎಂದು ರಾಜ್ಯ ಸರ್ಕಾರ ಇತ್ತೀಚೆಗೆ ಹೊರಡಿಸಿರುವ ಆದೇಶ ರದ್ದುಪಡಿಸುವಂತೆ ಕೋರಿ ಎಎನ್ಐ ಟೆಕ್ನಾಲಜೀಸ್ ಪ್ರೈವೇಟ್ ಲಿಮಿಟೆಡ್ ಮತ್ತು ಉಬರ್ ಇಂಡಿಯಾ ಟೆಕ್ನಾಲಜೀಸ್ ಪ್ರೈವೇಟ್ ಲಿಮಿಟೆಡ್ ಪ್ರತ್ಯೇಕ ಅರ್ಜಿ ಸಲ್ಲಿಸಿದ್ದರು. ಅರ್ಜಿಗಳ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂಜಿಎಸ್ ಕಮಲ್ ನೇತೃತ್ವದ ಪೀಠ, ಪ್ರಕರಣಕ್ಕೆ ಸಂಬಂಧಿಸಿದಂತೆ ಸೂಕ್ತ ಪರಿ ಹಾರ ಕಂಡುಕೊಳ್ಳಲು ಸರ್ಕಾರಕ್ಕೆ ಸೂಚನೆ ನೀಡಿ ವಿಚಾರಣೆಯನ್ನು ಮುಂದೂಡಿತ್ತು.

ಇಂದು ವಿಚಾರಣೆ ಕೈಗೆತ್ತಿಕೊಂಡ ನ್ಯಾಯಪೀಠದ ಮುಂದೆ ಸರ್ಕಾರ ಪರ ವಕೀಲರು ಹಾಜರಾಗಿ, ಓಲಾ, ಉಬರ್ ಸೇವೆಗಳಲ್ಲಿ ಆಟೋರಿಕ್ಷಾಗಳ ಬಳಕೆಗೆ ಸಂಬಂಧಿಸಿದಂತೆ ಮತ್ತಷ್ಟು ಚರ್ಚೆ ನಡೆಸಬೇಕಾಗಿದೆ. ಹೀಗಾಗಿ, ಮತ್ತಷ್ಟು ಕಾಲಾವಕಾಶ ನೀಡಬೇಕು ಎಂದು ಮನವಿ ಮಾಡಿದರು. ಮನವಿ ಪುರಸ್ಕರಿಸಿದ ನ್ಯಾಯಪೀಠ, ಕಾಲಾವಕಾಶ ನೀಡಿ ವಿಚಾರಣೆ ಮುಂದೂಡಿತು.

ಐದು ದಿನಗಳಲ್ಲಿ ಆಕ್ಷೇಪಣೆ ಸಲ್ಲಿಸಿ: ಇದೇ ವೇಳೆ ಆಟೋಗಳ ಬಳಕೆಗೆ ಹೆಚ್ಚುವರಿ ಶುಲ್ಕ ನಿಗದಿಪಡಿಸಲು ಕೋರಿ ಓಲಾ ಮತ್ತು ಉಬರ್ ಮಧ್ಯಂತರ ಅರ್ಜಿ ಸಲ್ಲಿಸಿತು. ಈ ಸಂಬಂಧ ಐದು ದಿನಗಳಲ್ಲಿ ಆಕ್ಷೇಪಣೆ ಸಲ್ಲಿಸಲು ಸರ್ಕಾರಕ್ಕೆ ಸೂಚನೆ ನೀಡಿದ ನ್ಯಾಯಪೀಠ ವಿಚಾರಣೆ ಮುಂದೂಡಿತು.

## ವಂದೇ ಭಾರತ್ ಎಕ್ಸ್‌ಪ್ರೆಸ್ ಟ್ರಯಲ್ ರನ್ ಯಶಸ್ವಿ: ಮೈಸೂರಿಗೆ ಬಂದ ರೈಲು



ಮೈಸೂರು: ಚೆನ್ನೈ–ಬೆಂಗಳೂರು–ಮೈಸೂರು ವಂದೇ ಭಾರತ್ ಎಕ್ಸ್ ಪ್ರೆಸ್ ಟ್ರಯಲ್ ರೈಲು ಸೋಮವಾರ ಮೈಸೂರು ರೈಲ್ವೆ ನಿಲ್ದಾಣಕ್ಕೆ ಆಗಮಿಸಿದೆ. ದಕ್ಷಿಣ ಭಾರತದ ಮೊದಲ ವಂದೇ ಭಾರತ್ ರೈಲು ಇದಾಗಿದೆ.

ವಂದೇ ಭಾರತ್ ಎಕ್ಸ್ ಪ್ರೆಸ್ ಹೈ–ಸ್ಪೀಡ್ ರೈಲು ಬೆಳಗ್ಗೆ 6 ಗಂಟೆಗೆ ಚೆನ್ನೈನಿಂದ ಹೊರಟಿತ್ತು. ಇದು ಸುಮಾರು 504 ಕಿಮೀ ದೂರವನ್ನು 6 ಗಂಟೆ12 ನಿಮಿಷಕ್ಕೆ ಸುಸೂತ್ರವಾಗಿ ತಲುಪಿದೆ. ಈ ರೈಲನ್ನು ನ.11 ರಂದು ಪ್ರಧಾನಿ ನರೇಂದ್ರ ಮೋದಿ ಅವರು ಬೆಂಗಳೂರಿನಲ್ಲಿ ಉದ್ಘಾಟನೆ ಮಾಡಲಿದ್ದಾರೆ.ವಂದೇ ಭಾರತ್ ರೈಲಿನ ವಿಶೇಷತೆಗಳು:ವಂದೇ ಭಾರತ್ ಹೈ–ಸ್ಪೀಡ್ ರೈಲು ಸಂಪೂರ್ಣ ಹವಾ ನಿಯಂತ್ರಿತವಾಗಿದೆ.

ಗಟ್ಟಿ ಮುಟ್ಟಾದ ವಿಶೇಷವಾಗಿ ಡಿಸೈನ್ ಮಾಡಿದ ಭೋಗಿಗಳನ್ನು ಹೊಂದಿದೆ. ಒಳಗಡೆ ಪ್ರತಿ ಬೋಗಿಗೂ ಸ್ವಯಂ ಚಾಲಿತ ಬಾಗಿಲು ಇದೆ. ಪ್ರತಿ ಬೋಗಿಗೂ ಸಿಸಿಟಿವಿ ಅಳವಡಿಕೆ. ಐಷಾರಾಮಿ ಆಸನ ವ್ಯವಸ್ಥೆಯಿದ್ದು, ಕೊನೆಯ 2 ಬೋಗಿಗಳಲ್ಲಿ ಇರುವ ಆಸನಗಳು ವಿಶೇಷವಾಗಿ ಸಿದ್ಧಪಡಿಸಿದ 360 ಕೋನದಲ್ಲಿ ತಿರುಗಲಿವೆ.

ಈ ರೈಲಿನ ಟೆಸ್ಟಿಂಗ್ ಯಶಸ್ವಿಯಾಗಿದ್ದು, ಯಾವುದೇ ತಾಂತ್ರಿಕ ತೊಂದರೆಗಳಿಲ್ಲ ಎಂದು ಟೆಕ್ನಿಕಲ್ ವಿಭಾಗದ ಮುಖ್ಯಸ್ಥ ಅಖಿಲ ರಂಜನ್ ವಿವರಿಸಿದ್ದಾರೆ. ವಂದೇ ಭಾರತ್ ರೈಲನ್ನು ದೇಶಿಯವಾಗಿ ಅಭಿವೃದ್ಧಿ ಪಡಿಸಲಾಗಿದೆ. ಚೆನ್ನೈ– ಮೈಸೂರು ಮಾರ್ಗದಲ್ಲಿ ಓಡುವ ಐದನೇ ವಂದೇ ಭಾರತ್ ರೈಲು ಇದಾಗಿದೆ.

## ಡಿಕೆಶಿಯವರೇ ನೀವು ಸಿಎಂ ಆಗೋದು ಡೌಟ್, ಬಿಜೆಪಿಗೆ ಬಂದು ಬಿಡಿ– ಮುನಿರತ್ನ ಆಹ್ವಾನ

ಬೆಂಗಳೂರು: ಡಿ.ಕೆ ಶಿವಕುಮಾರ್ ಅವರೇ ನೀವು ಸಿಎಂ ಆಗೋದು ಡೌಟ್ ಇದೆ, ಹಾಗಾಗಿ ನೀವೇ ಬಿಜೆಪಿಗೆ ಬಂದುಬಿಡಿ ಎಂದು ಸಚಿವ ಮುನಿರತ್ನ ಆಹ್ವಾನ ಕೊಟ್ಟಿದ್ದಾರೆ.



ಕಾಂಗ್ರೆಸ್‌ನಿಂದ ವಲಸೆ ಹೋಗಿರುವ ಶಾಸಕರಿಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ ಶಿವಕುಮಾರ್ ಮತ್ತೆ ಆಹ್ವಾನ ನೀಡಿರುವ ವಿಚಾರಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿ, ಡಿಕೆಶಿ ಬಿಜೆಪಿ ಸೇರುವಂತೆ ಮರು ಆಹ್ವಾನ ಕೊಟ್ಟಿದ್ದಾರೆ. ನಗರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವ ಮುನಿರತ್ನ, ನಮ್ಮ ಪಕ್ಷಕ್ಕೆ ಬಂದಿರೋ 17 ಜನರ ಮೇಲೆ ಡಿಕೆ ಶಿವಕುಮಾರ್ ಅವ್ರಿಗೆ ಪ್ರೀತಿಯಿದೆ. ಹಾಗಾಗಿ ಆಹ್ವಾನ ನೀಡ್ತಿದ್ದಾರೆ. ನಮಗೂ ಡಿ.ಕೆ ಶಿವಕುಮಾರ್ ಮೇಲೆ ಪ್ರೀತಿಯಿದೆ. ಅವರೇ ಬೇಕಿದ್ದರೆ ಬಿಜೆಪಿಗೆ ಬರಲಿ ಎಂದು ಹೇಳಿದ್ದಾರೆ. ಡಿ.ಕೆ ಶಿವಕುಮಾರ್‌ಗೆ ಕಾಂಗ್ರೆಸ್ ನಲ್ಲಿ ಭವಿಷ್ಯವಿಲ್ಲ. ಜಿ.ಪರಮೇಶ್ವರ್ ಮುಂದಿನ ದಲಿತ ಮುಖ್ಯಮಂತ್ರಿ ನಾನೇ ಅಂತಾರೆ. ಇನ್ನೊಂದೆಡೆ ಸಿದ್ದರಾಮಯ್ಯ ಮುಂದಿನ ಮುಖ್ಯಮಂತ್ರಿ ಅಂತಾರೆ. ಈ ಬಡಿದಾಟದಲ್ಲಿ ನೀವು ಮುಖ್ಯಮಂತ್ರಿ ಆಗೋದು ಡೌಟ್ ಇದೆ. ಹಾಗಾಗಿ ನೀವೆ ಬಿಜೆಪಿಗೆ ಬನ್ನಿ. ನಾವೇ ನಮ್ಮ ನಾಯಕರು, ಪ್ರಧಾನಿಗೆ ಹೇಳ್ತಿವಿ ನಮ್ಮ ಪಕ್ಷಕ್ಕೆ ಸೇರಿಸಿಕೊಳ್ತಿವಿ ಅಂತ. ಡಿಕೆಶಿಗೆ ನಮ್ಮ ಪಕ್ಷಕ್ಕೆ ಬಂದ್ರೆ ಒಳ್ಳೆದಾಗುತ್ತೆ ಎಂದು ಭವಿಷ್ಯ ನುಡಿದಿದ್ದಾರೆ.ಡಿ.ಕೆ ಶಿವಕುಮಾರ್, ಸಿದ್ದರಾಮಯ್ಯ, ಸ್ಪೀಕರ್ ರಮೇಶ್ ಕುಮಾರ್ ನಮ್ಮ ಪಕ್ಷಕ್ಕೆ ಬಿಟ್ಟು ಹೋದವರ ಅವಶ್ಯಕತೆಯಿಲ್ಲ ಅಂದಿದ್ರು. ಈಗ ಏಕೆ ಕರೆಯುತ್ತಿದ್ದಾರೆ. ನಮ್ಮ ಅವಶ್ಯಕತೆ ಬಿದಿದ್ದು ಹೇಗೆ? ಬಿಜೆಪಿಯಲ್ಲಿ ನಮ್ಮನ್ನ ಗೌರವದಿಂದ ನೋಡಿಕೊಳ್ತಿದ್ದಾರೆ ಅಂತಾ ಈಗ ವಾಪಸ್ ಆಹ್ವಾನ ನೀಡುತ್ತಿದ್ದಾರೆ ಎಂದು ಕುಟುಕಿದ್ದಾರೆ.

## ಆರ್ಥಿಕವಾಗಿ ಹಿಂದುಳಿದ ವರ್ಗಗಳಿಗೆ ಮೀಸಲಾತಿ – ತಿದ್ದುಪಡಿಯು ಸಂವಿಧಾನ ಬದ್ಧವಾಗಿದೆ: ಸುಪ್ರೀಂಕೋರ್ಟ್

ನವದೆಹಲಿ: ಆರ್ಥಿಕವಾಗಿ ಹಿಂದುಳಿದ ವರ್ಗಗಳಿಗೆ ಶಿಕ್ಷಣ ಮತ್ತು ಉದ್ಯೋಗದಲ್ಲಿ ಶೇ 10ರಷ್ಟು ಮೀಸಲಾತಿ ಕಲ್ಪಿಸಿ ಸಂವಿಧಾನಕ್ಕೆ ಮಾಡಲಾದ 103ನೇ ತಿದ್ದುಪಡಿಯು ಸಂವಿಧಾನ ಬದ್ಧವಾಗಿದೆ ಎಂದು ಸುಪ್ರೀಂಕೋರ್ಟ್ ಹೇಳಿದೆ. ಮುಖ್ಯ ನ್ಯಾ. ಯು.ಯು ಲಲಿತ್ ನೇತೃತ್ವದ ಸಾಂವಿಧಾನಿಕ ಪೀಠ 3:2 ಅಂತರದಲ್ಲಿ ಈ ತೀರ್ಪು ಪ್ರಕಟಿಸಿದೆ.

ಐವರು ನ್ಯಾಯಮೂರ್ತಿಗಳ ಪೈಕಿ ಮೂವರು ತಿದ್ದುಪಡಿಯ ಸಿಂಧುತ್ವವನ್ನು ಎತ್ತಿಹಿಡಿದಿದ್ದಾರೆ. ಇಬ್ಬರು ನ್ಯಾಯಮೂರ್ತಿಗಳು ಮಾತ್ರ ಭಿನ್ನಮತದ ತೀರ್ಪು ನೀಡಿದ್ದಾರೆ. ನ್ಯಾಯಮೂರ್ತಿ ದೀನೇಶ್ ಮಹೇಶ್ವರಿ, ನ್ಯಾ. ಬೇಲಾ ತ್ರಿವೇದಿ, ನ್ಯಾ ಜೆ.ಬಿ ಪರ್ದಿವಾಲಾ ಆರ್ಥಿಕ ಹಿಂದುಳಿದ ವರ್ಗ ಪರವಾಗಿ ಆದೇಶ ನೀಡಿದರೆ ಮುಖ್ಯ ನ್ಯಾಯಮೂರ್ತಿ ಯು.ಯು ಲಲಿತ್, ನ್ಯಾ ರವೀಂದ್ರ ಭಟ್ ವಿರುದ್ಧವಾಗಿ ಆದೇಶ ನೀಡಿದ್ದಾರೆ. 103ನೇ ಸಾಂವಿಧಾನಿಕ ತಿದ್ದುಪಡಿಯನ್ನು ಎತ್ತಿಹಿಡಿದ ನ್ಯಾಯಮೂರ್ತಿ ದಿನೇಶ್ ಮಹೇಶ್ವರಿ, ಇದು ಸಂವಿಧಾನದ ಮೂಲ ರಚನೆಯನ್ನು ಉಲ್ಲಂಘಿಸುವುದಿಲ್ಲ, ಏಕೆಂದರೆ ಇದು ಆರ್ಥಿಕ ಮಾನದಂಡಗಳನ್ನು ಆಧರಿಸಿದೆ, ಕೋಟಾಕ್ಕೆ ವಿಶೇಷ ನಿಬಂಧನೆಯನ್ನು ರೂಪಿಸುವ ರಾಜ್ಯವು ಮೂಲಭೂತ ರಚನೆಯನ್ನು ಉಲ್ಲಂಘಿಸುವುದಿಲ್ಲ ಎಂದು ತೀರ್ಪಿನಲ್ಲಿ ಉಲ್ಲೇಖಿಸಿದ್ದಾರೆ.



ನ್ಯಾಯಮೂರ್ತಿ ಬೇಲಾ ಎಂ ತ್ರಿವೇದಿ ಅವರು ಪ್ರತ್ಯೇಕ ತೀರ್ಪಿನ ಮೂಲಕ ನ್ಯಾಯಮೂರ್ತಿ ಮಹೇಶ್ವರಿ ಅವರ ಮಾತಿಗೆ ಸಹಮತ ವ್ಯಕ್ತಪಡಿಸಿದರು. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಹೊರತುಪಡಿಸಿ ಇತರರಿಗೆ ವಿಶೇಷ ಅವಕಾಶ ಕಲ್ಪಿಸಲು ರಾಜ್ಯಕ್ಕೆ ಅನುವು ಮಾಡಿಕೊಡುವ ತಿದ್ದುಪಡಿಯನ್ನು ಸಂಸತ್ತಿನ ದೃಢವಾದ ಕ್ರಮವೆಂದು ಪರಿಗಣಿಸಬೇಕು ಎಂದು ಅವರು ತೀರ್ಪಿನಲ್ಲಿ ತಿಳಿಸಿದ್ದಾರೆ. ನ್ಯಾಯಮೂರ್ತಿ ಜೆಬಿ ಪರ್ದಿವಾಲಾ, ಅನಿರ್ದಿಷ್ಟಾವಧಿಗೆ ಮೀಸಲಾತಿಯ ಮುಂದುವರಿಕೆಗೆ ಅಂತ್ಯ ಹಾಡುವ ಬಗ್ಗೆ ಪ್ರಸ್ತಾಪಿಸಿದರು. ಇಂದಿನ ಕಾಲದಲ್ಲಿ ಪ್ರಸ್ತುತವಾಗುವಂತೆ ಮೀಸಲಾತಿ ಮರುಪರಿಶೀಲಿಸುವ ಅಗತ್ಯವಿದೆ. ಮೀಸಲಾತಿ ಅನಿರ್ದಿಷ್ಟ ಕಾಲಕ್ಕೆ ಮುಂದುವರಿಯಬಾರದು. ಅದು ಪಟ್ಟಭದ್ರ ಹಿತಾಸಕ್ತಿಯಾಗುತ್ತದೆ ಎಂದು ಅವರು ಆದೇಶ ನೀಡಿದರು.

ಅಲ್ಪಸಂಖ್ಯಾತರ ದೃಷ್ಟಿಯಿಂದ ಇಡಬ್ಲ್ಯೂಎಸ್ ಕೋಟಾಕ್ಕೆ ನ್ಯಾಯಮೂರ್ತಿ ಎಸ್ ರವೀಂದ್ರ ಭಟ್ ಅಸಮ್ಮತಿ ವ್ಯಕ್ತಪಡಿಸಿದ್ದರು. ಈ ತಿದ್ದುಪಡಿಯು ಸಾಮಾಜಿಕ ಮತ್ತು ಹಿಂದುಳಿದ ವರ್ಗದ ಪ್ರಯೋಜನವನ್ನು ಪಡೆಯುವವರು, ಎರಡು ಪ್ರಯೋಜನಗಳನ್ನು ನೀಡುವ ಈ ತಿದ್ದುಪಡಿಯು ತಪ್ಪಾಗಿದೆ. ಈ ತಿದ್ದುಪಡಿಯು ಸಾಂವಿಧಾನಿಕವಾಗಿ ಅಸಮರ್ಥನೀಯವಾಗಿದೆ, ಆದಾಗ್ಯೂ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ವರ್ಗಗಳನ್ನು ಹೊರತುಪಡಿಸಿ ಸಂವಿಧಾನಾತ್ಮಕವಾಗಿ ಅನುಮತಿಸಲಾಗುವುದಿಲ್ಲ ಎಂದು ತೀರ್ಪು ನೀಡಿದರು. ನ್ಯಾಯಮೂರ್ತಿ ಭಟ್ ಅವರ ಅಭಿಪ್ರಾಯಕ್ಕೆ ಸಿಜೆಐ ಲಲಿತ್ ಸಹಮತ ವ್ಯಕ್ತಪಡಿಸಿದರು. ಕೇಂದ್ರ ಸರ್ಕಾರವು 2019ರಲ್ಲಿ ಸಂವಿಧಾನಕ್ಕೆ 103ನೇ ತಿದ್ದುಪಡಿ ತಂದಿತ್ತು. ಆ ಮೂಲಕ ಆರ್ಥಿಕವಾಗಿ ಹಿಂದುಳಿದ ವರ್ಗಗಳಿಗೆ ಶಿಕ್ಷಣ ಮತ್ತು ಸರ್ಕಾರಿ ಉದ್ಯೋಗದಲ್ಲಿ ಶೇ 10ರಷ್ಟು ಮೀಸಲಾತಿಯನ್ನು ಜಾರಿಗೆ ತಂದಿತ್ತು. ಇದು ಸಂವಿಧಾನಬಾಹಿರ ಮತ್ತು ಸಾಮಾಜಿಕ ನ್ಯಾಯಕ್ಕೆ ವಿರುದ್ಧ ಎಂದು ಸುಪ್ರೀಂಕೋರ್ಟ್‌ಗೆ ಹಲವರು ಅರ್ಜಿ ಸಲ್ಲಿಸಿದ್ದರು.

# ಸಮೃದ್ಧಿ ಸಮಾಜ ಸೇವಾ ಟ್ರಸ್ಟ್ ಉದಯ 16ಜೋಡಿಗಳಿಗೆ ಸಾಮೂಹಿಕ ವಿವಾಹ

ವಾರ್ತಾ ಜಲ ದೇವನಹಳ್ಳಿ : ಒಂದು ಮದುವೆ ಮಾಡಬೇಕೆಂದರೆ ಅನೇಕ ಅಡಚಣೆಗಳು ಜೊತೆಗೆ ಆರ್ಥಿಕವಾಗಿ ಹಿಂದುಳಿದವರ ಪಾಡು ಹೇಳ ತೀರದಂತಾಗುವುದು ಸಹಜ ಆದರೆ ನೂತನವಾಗಿ ಸಮಾಜ ಸೇವೆಗೆಂದೆ ಸೃಷ್ಠಿಯಾಗಿರುವ ಸಮೃದ್ಧಿ ಸಮಾಜ ಸೇವಾ ಟ್ರಸ್ಟಿನಿಂದ ಸರಳವಾಗಿ 16ಜೋಡಿ ಸತಿಪತಿಗಳಾಗಿ ಸಪ್ತಪದಿ ತುಳಿಯುವ ಕಾರ್ಯಕ್ಕೆ ಮುನ್ನುಡಿ ಬರೆದಿದ್ದಾರೆ ಎಂದು ಬುಳ್ಳಹಳ್ಳಿ ದ್ರೌಪದಿ ಆದಿಪರಾಶಕ್ತಿ ಮಹಾಸಂಸ್ಥಾನ ಪೀಠ ಅವದೂತ ಸದ್ಗುರು ಬಾಲಯೋಗಿ ಸಾಯಿ ಮಂಜುನಾಥ್ ಮಹಾರಾಜ್ ತಿಳಿಸಿದರು. ಅವರು ಪಟ್ಟಣದ ಅಂಬೇಡ್ಕರ್ ಭವನದಲ್ಲಿ "ಸಮೃದ್ಧಿ ಸಮಾಜ ಸೇವಾ ಟ್ರಸ್ಟ್' ವತಿಯಿಂದ ಟ್ರಸ್ಟ್ ಉದ್ಘಾಟನೆ ಹಾಗೂ ಸಾಮೂಹಿಕ ವಿವಾಹ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ ಇಂತಹ ವಿವಾಹಗಳಲ್ಲಿ ಅನೇಕ ಬಡ ಮಧ್ಯಮ ವರ್ಗದ ಕುಟುಂಬ ಸರಳವಾಗಿ ಮಕ್ಕಳ ಮದುವೆ ಮಾಡಲು ಅನುಕೂಲವಾಗಿದೆ, ಇಂತಹ ಮದುವೆಗಳಿಂದ ಆಡಂಬರಕ್ಕೆ ಬೆಲೆ ನೀಡದೆ ದುಂದುವೆಚ್ಚಕ್ಕೆ ಕಡಿವಾಣ ಹಾಕಿ ಸರಳವಾಗಿ ಸಾಮೂಹಿಕ ವಿವಾಹ ಮಾಡುವುದು ಪುಣ್ಯದ ಕಾರ್ಯವಾಗಿದೆ, ಇಂದು ಸಪ್ತಪದಿ ತುಳಿಯುವ ವಧು ವರರು ನೂರು ವರ್ಷಗಳ ಕಾಲ ಸುಖವಾಗಿ ಬಾಳಿ ಸಂಸಾರವನ್ನು ಮಾಡಿ ಪ್ರತಿಯೊಬ್ಬರಿಗೂ ಮಾದರಿಯಾಗಿ ಸುಖವಾಗಿ ಜೀವನ ನಡೆಸಲಿ ಎಂದು ಶುಭ ಹಾರೈಸಿದರು. ಸಿ.ಹೆಚ್.ಬಿ ಗ್ರೂಪ್ಸ್ ಮಾಲೀಕ ಹಾಗೂ ಕಾಂಗ್ರೆಸ್ ಮುಖಂಡ ಚಿಕ್ಕಣ್ಣ (ಚಿಕ್ಕನಹಳ್ಳಿ ಚಂದ್ರಣ್ಣ) ಸಮೃದ್ಧಿ ಸಮಾಜಸೇವಾ ಟ್ರಸ್ಟ್



ಉದ್ಘಾಟನೆಯಲ್ಲಿಯೇ ಸರಳ ಸಾಮೂಹಿಕ ವಿವಾಹವನ್ನು ಮಾಡುವುದರ ಮೂಲಕ ಸಮಾಜಮುಖಿ ಕಾರ್ಯಮಾಡಲು ಮುಂದಾಗಿರುವುದು ಉತ್ತಮ ಕಾರ್ಯವಾಗಿದೆ, ಸಮೃದ್ಧಿ ಸಮಾಜಸೇವಾ ಟ್ರಸ್ಟ್ ಬಡಜನರಿಗೆ ಮತ್ತಷ್ಟು ಹತ್ತಿರವಾಗುವಂತ ಕಾರ್ಯಕ್ರಮಗಳನ್ನು ಮಾಡಿ ಟ್ರಸ್ಟ್ ವತಿಯಿಂದ ಮತ್ತಷ್ಟು ಅಭಿವೃದ್ಧಿಯಾಗಲಿ, ಇತ್ತೀಚಿನ ದಿನಗಳಲ್ಲಿ ಆಡಂಬರ ಮದುವೆಯಿಂದ ದುಂದುವೆಚ್ಚಗಳು ಹೆಚ್ಚಾಗುತ್ತಿದ್ದು ಇಂತಹ ಸಾಮೂಹಿಕ ವಿವಾಹಗಳನ್ನು ಹೆಚ್ಚು ಹೆಚ್ಚು ಮಾಡುವುದರಿಂದ ದುಂದುವೆಚ್ಚಕ್ಕೆ ಕಡವಾಣ ಹಾಕಬಹುದು ಎಂದು ಹಾರೈಸಿದರು. ಸಮೃದ್ಧಿ ಸಮಾಜ ಸೇವಾ ಟ್ರಸ್ಟ್ ಪ್ರಾರಂಭದಲ್ಲಿ 16ಜೋಡಿಗಳಿಗೆ ಸಾಮೂಹಿಕ ವಿವಾಹ ಮಾಡಿ ಎಲ್ಲಾ ಸಂಸ್ಥೆಗಳಿಗೂ ಒಂದು ಮಾದರಿ ಟ್ರಸ್ಟ್ ಆಗಿರುವುದು ಸಂತಸ ತಂದಿದೆ. ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಟ್ರಸ್ಟಿನಿಂದ ಸೌಲಭ್ಯಗಳು ದೊರೆಯುವಂತೆ ಆಗಬೇಕು. ಎಂದು ಹೇಳಿದರು. ಮಾಜಿ ಶಾಸಕ ಪಿಳ್ಳಮುನಿಶಾಮಪ್ಪ ಮಾತನಾಡಿ ಬಡಜನರಿಗೆ ಕೂಲಿ ಮಾಡುವ ಜನರು, ಒಂದೊತ್ತಿನ ಕೂಳಿಗೆ ಕಷ್ಟಪಟ್ಟು ಬಂದು ಜೀವನ ನಡೆಸುತ್ತಿರುವ ಬಡಜನರ ಮಕ್ಕಳ ಸಾಮೂಹಿಕ ಮದುವೆ ಮಾಡಲು ಸಹಕಾರಿಯಾಗುತ್ತದೆ, ಇತ್ತೀಚೆಗೆ ಇಂತಹ ಸಾಮೂಹಿಕ ಮದುವೆಗಳು ಆಗಬೇಕು, ದಾನಿಗಳ ವತಿಯಿಂದ, ಸಂಘಸಂಸ್ಥೆಗಳ ವತಿಯಿಂದ ಇಂತಹ ಮದುವೆಗಳು ಮಾಡಬೇಕು ಎಂದರು. ಅಧ್ಯಕ್ಷತೆಯನ್ನು ಸಮೃದ್ಧಿ ಸಮಾಜ ಸೇವಾಟ್ರಸ್ಟ್ ಅಧ್ಯಕ್ಷ ಬುಳ್ಳಹಳ್ಳಿ ಎಂ.ರಾಜಪ್ಪ ಮಾತನಾಡಿ ಪ್ರತಿವರ್ಷವೂ ಉಚಿತ ಸಾಮೂಹಿಕ ವಿವಾಹ ನಮ್ಮ ಕಮಿಟಿಯಿಂದ ಮಾಡಲು ತೀರ್ಮಾನ ಮಾಡುತ್ತೇವೆ, ತಂದೆ ತಾಯಿಗಳನ್ನು ದೇವರಂತೆ ಪೂಜಿಸಬೇಕು, ಈ ದಿನ ಮದುವೆಯಾದವರು ಸಂಘವನ್ನು ಸ್ಮರಿಸುವ ದಿನವಾಗುತ್ತದೆ. ತಾಲೂಕಿನಲ್ಲಿ ಸಮೃದ್ಧಿ ಸಮಾಜ ಸೇವಾಟ್ರಸ್ಟ್ ಈಗ ಅಂಬೆಗಾಲು ಇಡಲು ಪ್ರಾರಂಭಿಸಿದೆ, ಉದ್ಘಾಟನೆ ಕಾರ್ಯಕ್ರಮದಲ್ಲಿ ಉಚಿತ ಸಾಮೂಹಿಕ ವಿವಾಹ ಮಾಡುವುದರ ಮೂಲಕ ಜನರ ಕಲ್ಯಾಣ ಕಾರ್ಯಕ್ರಮದ ಮೂಲಕ ಪ್ರಾರಂಭಿಸಿದ್ದೇವೆ ಎಂದು ಹೇಳಿದರು.

ಈ ವೇಳೆಯಲ್ಲಿ ಮಾಜಿ ಪುರಸಭಾ ಅಧ್ಯಕ್ಷರಾದ ಎಂ. ನಾರಾಯಣಸ್ವಾಮಿ ನರಸಿಂಹಮೂರ್ತಿ ಜಿಲ್ಲಾ ಬಿಜೆಪಿ ಅಧ್ಯಕ್ಷ ಎ.ವಿ. ನಾರಾಯಣಸ್ವಾಮಿ ಜಿ.ಪಂ. ಮಾಜಿ ಸದಸ್ಯ ಮುನಿಯಪ್ಪ ತಾ.ಪಂ. ಮಾಜಿ ಅಧ್ಯಕ್ಷ ಮುದುಗುರ್ಕಿ ನಾರಾಯಣಸ್ವಾಮಿ ಜಿಲ್ಲಾ ಮಾದಿಗ ದಂಡೋರ ಅಧ್ಯಕ್ಷ ಮಾರಪ್ಪ, ತಾಲೂಕು ಅಧ್ಯಕ್ಷ ಕದಿರಪ್ಪ, ಎಂ.ಎಂ. ಡೆವಲರ್ಸ್ ಮುದ್ದಪ್ಪ, ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಯೋಜನಾ ಪ್ರಾಧಿಕಾರದ ಮಾಜಿ ಅಧ್ಯಕ್ಷ ಅಶ್ವಥನಾರಾಯಣ್, ವಿಶ್ವನಾಥಪುರ ಗ್ರಾ.ಪಂ. ಉಪಾಧ್ಯಕ್ಷ ವಿನಯ್‌ಕುಮಾರ್, ತಾಲೂಕು ಬಿಜೆಪಿ ಪ್ರಧಾನ ಕಾರ್ಯದರ್ಶಿ ನೀಲೇರಿ ಮಂಜುನಾಥ್, ಟೌನ್ ಬಿಜೆಪಿ ಅಧ್ಯಕ್ಷ ಸಂದೀಪ್, ಮುಖಂಡ ಡಿ.ಸಿ.ಅಂಬರೀಶ್, ಜಾಲಿಗೆ ಮುನಿರಾಜು, ಸಮೃದ್ಧಿ ಸಮಾಜಸೇವಾ ಟ್ರಸ್ಟಿನ ಕಾರ್ಯಾಧ್ಯಕ್ಷ ಡಿ.ನರಸಿಂಹ ಮೂರ್ತಿ, ಉಪಾಧ್ಯಕ್ಷೆ ಮುನಿರತ್ನಮ್ಮ, ಪ್ರಧಾನ ಕಾರ್ಯದರ್ಶಿ ಎಂ.ನರಸಿಂಹಮೂರ್ತಿ, ಖಜಾಂಚಿ ಹೆಚ್.ಡಿ.ದೇವರಾಜ್, ಕಾನೂನು ಸಲಹೆಗಾರ ಎನ್.ಮುನಿರಾಜು, ಲೆಕ್ಕ ಪರಿಶೋಧಕ ಮಾರಪ್ಪ, ನಿರ್ದೇಶಕರಾದ ಕದಿರಪ್ಪ, ನರಸಿಂಹಪ್ಪ, ಜಗದೀಶ್, ವೆಂಕಟೇಶ್ ಪ್ರಭು, ಎಂ.ವೇಣು ಗೋಪಾಲ್, ಮುನಿರಾಜು, ನಾರಾಯಣ ಸ್ವಾಮಿ, ಪ್ರಕಾಶ್, ಮಾರಪ್ಪ, ಮುನಿರಾಜು, ವೆಂಕಟೇಶ್, ಮುನಿರಾಜು, ಕೇಶವ, ಸುದಾಮಣಿ, ಮತ್ತಿತರರು ಇದ್ದರು.







**ದಿನಾಂಕ 01-12-2022 ರಂದು ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲೂಕಿನ ನಾಯಕನಹಟ್ಟಿ ತಿಪ್ಪೇರುದ್ರಸ್ವಾಮಿ ತೆಪ್ಪೋತ್ಸವ ಕ್ಕೆ ರಾಜ್ಯದ ನಾನಾ ಬಾಗಳಿಂದ ಆಗಮಿಸುವಂತಹ ಭಕ್ತಾದಿಗಳಿಗೆ ಆದರದ ಸ್ವಾಗತ ಈ ನಿಟ್ಟಿನಲ್ಲಿ ಸ್ಥಳೀಯ ಪಟ್ಟಣ ಪಂಚಾಯತಿ ಯವರು ಭಕ್ತಾದಿಗಳ ಅನುಕೂಲಕ್ಕಾಗಿ ಮೂಲಭೂತ ಸೌಕರ್ಯ ಹಾಗೂ ಸ್ಥಳೀಯ ಪೊಲೀಸ್ ಠಾಣೆಯವರು ಸಂಚಾರಿ ಸುಗಮ ಆಗುವುದಕ್ಕೆ ವ್ಯವಸ್ಥೆ ಮಾಡಿ ದಿನಾಂಕ 10-03-2023 ರಂದು ನಡೆಯವ ತೆಪ್ಪೋತ್ಸವ ವನ್ನು ಯಶ್ವಯಾಗಿ ಎಲ್ಲರೂ ಸೇರಿ ನೆರವೇರಿಸಿ ಶ್ರೀ ಗುರು ತಿಪ್ಪೇರುದ್ರಸ್ವಾಮಿ ಕೃಪೆಗೆ ಪಾತ್ರರಾಗಬೇಕೆಂದು ಮನವಿ**

**ವರದಿ : ಇಂತಿ ತಮ್ಮ ಸಿ ಪಿ ತಿಪ್ಪೇಸ್ವಾಮಿ 9591254006 & 9845222299**

# ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಯಾವುದೇ ಒಂದು ಸಮುದಾಯಕ್ಕೆ ಸೀಮಿತವಾಗಿಲ್ಲ : ನಿಂಗರಾಜುಗೌಡ

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ಪಟ್ಟಣದ ಗುರುಭವನದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆಯ ವತಿಯಿಂದ ನವೆಂಬರ್ 7 ಡಾ. ಬಿ.ಆರ್. ಅಂಬೇಡ್ಕರ್ ಶಾಲಾ ದಾಖಲಾತಿ ದಿನಾಚರಣೆಯ ಕಾರ್ಯಕ್ರಮವನ್ನು ರಾಜ್ಯಾಧ್ಯಕ್ಷ ನಿಂಗರಾಜುಗೌಡ ಅವರು ಉದ್ಘಾಟಿಸಿದರು.

ಕರವೇ ಸ್ವಾಭಿಮಾನಿ ಸೇನೆಯ ರಾಜ್ಯಾಧ್ಯಕ್ಷ ನಿಂಗರಾಜುಗೌಡ ಅವರು ಮಾತನಾಡಿ, ಡಾ.ಬಿ.ಆರ್.ಅಂಬೇಡ್ಕರ್ ಅವರ ಶಾಲಾ ದಾಖಲಾತಿ ದಿನಾಚರಣೆಯನ್ನು ದೇಶದಲ್ಲಿ ಪ್ರಥಮವಾಗಿ ಈ ಕಾರ್ಯಕ್ರಮ ಮಾಡಿರುವುದು ಎಂದು ಭಾವಿಸಲಾಗಿದೆ. ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಯಾವುದೇ ಒಂದು ಸಮುದಾಯಕ್ಕೆ ಸೀಮಿತವಾಗಿಲ್ಲ. ಅವರು ಇಡೀ ಮನುಕುಲದ



ಎಲ್ಲಾ ಸಮುದಾಯಕ್ಕೂ ಸೀಮಿತಗೊಂಡವರಾಗಿದ್ದಾರೆ. ಅವರು ರಚಿಸಿರುವ ಸಂವಿಧಾನದಡಿಯಲ್ಲಿ ನಾವೆಲ್ಲರೂ ಇದ್ದೇವೆ.

ಇವರ ಜೀವನದಲ್ಲಿ ಅನೇಕ ಬದಲಾವಣೆಯನ್ನು ಎದುರಿಸಿ ಸಮಾಜಕ್ಕೆ ಅವರು ಉತ್ತಮ ಕೊಡುಗೆಯನ್ನು ಕೊಟ್ಟಿದ್ದಾರೆ ಎಂದು ಸ್ಮರಿಸಿದರು. ಇದೇ ಸಂದರ್ಭದಲ್ಲಿ ಕಾರ್ಯಕ್ರಮಕ್ಕೆ ಆಗಮಿಸಿದ ಕಸಾಪ ತಾಲೂಕು ಅಧ್ಯಕ್ಷ ನಂಜೇಗೌಡ, ಎಂಪಿಸಿಎಸ್ ಮಾಜಿ ಅಧ್ಯಕ್ಷ ರಂಗಸ್ವಾಮಿ, ಕಸಾಪ ಅಶ್ವತ್‌ಗೌಡ, ಪೊಲೀಸ್ ಇಲಾಖೆ ಮಹಿಳಾ ಹೆಡ್‌ಕಾನ್ಸ್‌ಟೇಬಲ್ ನಜೀನಾಬೀ, ಕರಾಟೆಯಲ್ಲಿ ವಿಶ್ವಮಟ್ಟದಲ್ಲಿ ಗುರ್ತಿಸಿಕೊಂಡಿರುವ ಖೇಲ್‌ರತ್ನ ಪ್ರಶಸ್ತಿ ಪುರಸ್ಕೃತ ಸನ್ ಸೈ ಮುರಳಿ ಸೇರಿದಂತೆ ಹಲವಾರರಿಗೆ ಅಭಿನಂದಿಸಲಾಯಿತು.

ಈ ವೇಳೆಯಲ್ಲಿ ರಾಜ್ಯ ಕರವೇ ಸ್ವಾಭಿಮಾನಿ ಸೇನೆಯ ಉಪಾಧ್ಯಕ್ಷ ಸುರೇಶ್‌ಗೌಡ, ಸಂತೋಷ್‌ಗೌಡ, ಜಿಲ್ಲಾ ಬೆಂಗಳೂರು ನಗರ ಘಟಕದ ಅಧ್ಯಕ್ಷ ನವೀನ್, ಗಾಂಧಿನಗರ ವಿಧಾನಸಭಾ ಕ್ಷೇತ್ರ ಅಧ್ಯಕ್ಷ ಸುರೇಶ್ ಗಾಂಧಿ, ಬೆಂಗಳೂರು ಗ್ರಾಮಾಂತರ ಜಿಲ್ಲಾ ಮಹಿಳಾಧ್ಯಕ್ಷೆ ಅನುರಾಧ ಅಶೋಕ್, ದಾಸರಹಳ್ಳಿ ವಿಧಾಸಭಾ ಕ್ಷೇತ್ರ ಅಧ್ಯಕ್ಷ ಸ್ವಾಮಿ, ಪದಾಧಿಕಾರಿಗಳಾದ ವೆಂಕಟೇಶ್, ಕುಮಾರ್, ಅನಿತಾ, ಅನುಪಮ, ಶಶಿಕಲಾ, ಬೇಬಿ, ವೀಣಾ, ಮಮತ, ಚೌಡಮ್ಮ, ತ್ಯಾಗರಾಜ್, ಪ್ರವೀಣ್, ಅನಂತ, ಪ್ರಭು, ನಾರಾಯಣಸ್ವಾಮಿ, ರಾಮು, ದೈಹಿಕ ಶಿಕ್ಷಣ ಶಿಕ್ಷಕರಾದ ಶ್ರೀನಿವಾಸ್, ವೆಂಕಟೇಶ್, ಮತ್ತಿತರರು ಇದ್ದರು.

# ಪುನೀತ್ ರಾಜ್ ಕುಮಾರ್ ಪುಣ್ಯಸ್ಮರಣೆ ಪ್ರಯುಕ್ತ ಉಚಿತ ಆರೋಗ್ಯ ತಪಾಸಣಾ ಶಿಬಿರ

ಲಿಯೋ ಕ್ಲಬ್ ಆಫ್ ಕಿರಣ ಎಂ.ವಿ.ಜೆ. ಮೆಡಿಕಲ್ ಕಾಲೇಜು ಹಾಗೂ ರೂರಲ್ ಡೇವಲಪಮೆಂಟ್ ವೇಲ್ಫೇರ್ ಸೊಸೈಟಿ ಇವರ



ಸಹಯೋಗದಲ್ಲಿ. ಭುವನೇಶ್ವರಿ ವೃತ್ತ ಪ್ಯಾರಗಾನ್ ಶಾಲೆಯಲ್ಲಿ ದಿವಂಗತ ನಟ ಸಾರ್ವಭೌಮ ಪುನೀತ್ ರಾಜ್ ಕುಮಾರ್ ರವರ ಪುಣ್ಯ ಸ್ಮರಣೆ ಅಂಗವಾಗಿ ಬೃಹತ್ ನೇತ್ರಧಾನ ಶಿಬಿರ ಹಾಗೂ ಉಚಿತ ಆರೋಗ್ಯ ತಪಾಸಣಾ ಶಿಬಿರ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮಕ್ಕೆ ನಗರ ಠಾಣೆ ಉಪ ನಿರೀಕ್ಷಕರು ಸುನಿಲ್, ಕಂಪನಿ ದೇವರಾಜ್, ಸರಕಾರಿ ಪ್ರಥಮ ಧರ್ಜೆ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆ ಕಾರ್ಯಕ್ರಮಧಿಕಾರಿ ಊ.ಅ ಮುನಿರಾಜ್, ಸ್ಥಳೀಯ ಜನಪ್ರಿಯ ವೈದ್ಯ ಡಾಕ್ಟರ್ ಕೃಷ್ಣ ರವರು ಅತಿಥಿಗಳಾಗಿ ಆಗಮಿಸಿದ್ದರು. ದಿವಂಗತ ನಟ ಪುನೀತ್ ರಾಜ್ ಕುಮಾರ್ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ದೀಪ ಬೆಳಗಿ ಒಂದು ನಿಮಿಷಗಳ ಕಾಲ ಮೌನಾಚರಣೆ ಮಾಡಲಾಯಿತು. ಗಾಯಕ ನಾಗಭೂಷಣ್ ರವರ ಸುಮಧುರ ಧ್ವನಿಯಲ್ಲಿ ಪುನೀತ್ ರಾಜ್ ಕುಮಾರ್ ರವರ ಗೀತೆಗಳ ಗಾಯನ ಕಾರ್ಯಕ್ರಮಕ್ಕೆ ಕಳೆ ತಂದುಕೊಟ್ಟಿತ್ತು. ಶಿಬಿರದಲ್ಲಿ ರೋಗಿಗಳಿಗೆ ಉಚಿತ ಇಸಿಜಿ, ಬಿಪಿ ಮತ್ತು ಶುಗರ್ ಪರೀಕ್ಷೆಗಳನ್ನು ಮಾಡಲಾಗಿತ್ತು. ಹಿರಿಯ ನಾಗರೀಕರನ್ನು ಶಿಬಿರಕ್ಕೆ ಕರೆತರಲು ವಿಶೇಷ ವಿಲ್ ಚೇರ್ ಗಳನ್ನು ಆಯೋಜನೆ ಮಾಡಿ ಲಿಯೋ ಸ್ವಯಂ ಸೇವಕರನ್ನೂ ನೇಮಿಸಲಾಗಿತ್ತು. ಕಾರ್ಯಕ್ರಮದಲ್ಲಿ ಸಾಂಕ್ರಾಮಿಕ ರೋಗಗಳ ಅರಿವು, ಸಾರ್ವಜನಿಕ ಆಸ್ಪತ್ರೆ ಖಅಖಿಅ ಕೇಂದ್ರದಿಂದ ನಾಗರೀಕರಿಗೆ ಖಅಖಿಅ ಪರೀಕ್ಷೆ ಮತ್ತು ಆಪ್ತ ಸಮಾಲೋಚನೆ, ಕಫ ಪರೀಕ್ಷೆ, ಕ್ಷಯ ರೋಗ ನಿರ್ಮೂಲ ಕಾರ್ಯಕ್ರಮ ಮತ್ತು ಸಮುದಾಯ ಆಧಾರಿತ ತಪಾಸಣ ಶಿಬಿರ, ಬೃಹತ್ ನೇತ್ರಧಾನ ನೋಂದಣಿ ಅಭಿಯಾನ, ಆರೋಗ್ಯ ತಪಾಸಣ ಶಿಬಿರ , ಹಾಗೂ ಉಚಿತ ಆಯುಷ್ಮಾನ್ ಭಾರತ್ ಆರೋಗ್ಯ ಕಾರ್ಡ್ ಗಳನ್ನೂ ಮಾಡಲಾಯಿತು. ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಕಂಪನಿ ದೇವರಾಜ್ ರವರು ಲಿಯೋ ಕ್ಲಬ್ 67 ನೇ ಕನ್ನಡ ರಾಜ್ಯೋತ್ಸವವನ್ನು ವಿಭಿನ್ನವಾಗಿ ಮಾಡಲಾಗಿದೆ. ಏನೆಂದರೆ ಕನ್ನಡ ರಾಜ್ಯೋತ್ಸವವನ್ನು ಹಾಡು, ಕುಣಿತ, ಅವತ್ತಿನ ಮಾತ್ರಕ್ಕೆ ಕನ್ನಡ ಎಂಬ ಭಾವನೆಯನ್ನು ಬೆಳೆಸಿಕೊಳ್ಳದೆ ಬಹಳ ಅರ್ಥಪೂರ್ಣವಾಗಿ ಆಚರಣೆಯನ್ನು ಮಾಡುತ್ತಿದ್ದಾರೆ. ಕಳೆದ ಎರಡು ವರ್ಷಗಳಿಂದ ಮನು ಕುಲಕ್ಕೆ ಮಾರಕವಾಗುವಂತೆ ಕೊರೋನ ಮಹಾಮಾರಿಯಿಂದ ಹೊರಗೆ ಬಂದಿದ್ದೇವೆ. ಶಿಡ್ಲಘಟ್ಟದಲ್ಲಿ ಸೌಲಭ್ಯಗಳ ಕೊರತೆಹೆಚ್ಚಾಗಿ ಕಾಣುತ್ತಿದೆ. ಈ ನಿಟ್ಟಿನಲ್ಲಿ ಸಾಮಾಜಿಕ ಮನಸ್ಥಿತಿಯನ್ನು ಒಳಗೊಂಡ ಯುವಕರ ತಂಡ ಲಿಯೋ ಕ್ಲಬ್ ಯುವ ಸಮೂಹಕ್ಕೆ ಸಮಾಜ ಮುಖಿಯಾಗಿ ಕೆಲಸಗಳನ್ನ ಮಾಡುತ್ತಿದೆ ನಾನು ಹಲವಾರು ಶಿಬಿರಗಳನ್ನು ಕಂಡಿದ್ದೇನೆ ಈ ಶಿಬಿರ ಬಹಳ ಅರ್ಥಪೂರ್ಣವಾಗಿದೆ ಮಾನವನಿಗೆ ಅವಶ್ಯಕವಾಗಿ ಬೇಕಾದ ಪ್ರಥಮ ಆದ್ಯತೆಯೇ ಆರೋಗ್ಯವಾಗಿದೆ. ಈ ಹಿನ್ನೆಲೆಯಲ್ಲಿ ನಿಮ್ಮ ಎಲ್ಲಾ ಸೇವಾ ಚಟುವಟಿಕೆಗಳು ಯಶಸ್ವಿಯಾಗಲಿ ಎಂದು ಶುಭ ಹಾರೈಸಿದರು. ಶಿಡ್ಲಘಟ್ಟ ಅಂತಾರಾಷ್ಟ್ರೀಯ ಮಟ್ಟದಲ್ಲಿ ರೇಷ್ಮೆಗೆ ಖ್ಯಾತಿಯನ್ನು ಪಡೆದಿದೆ. ಆದರೆ ಆ ರೇಷ್ಮೆಯನ್ನು ತಯಾರು ಮಾಡುವ ಕಾರ್ಮಿಕರು ಚರ್ಮ ರೋಗಗಳಿಂದ ಬಳಲುತ್ತಿದ್ದಾರೆ ಈ ಹಿನ್ನೆಲೆಯಲ್ಲಿ ಅಂತಹವರನ್ನು ಗುರುತಿಸಿ ಸೂಕ್ತ ಚಿಕಿತ್ಸೆಯನ್ನು ಕೊಡಿಸುವ ಕೆಲಸವನ್ನು ಮಾಡುತ್ತಿದ್ದೇವೆ ಎಂದು ಲಿಯೋ ಕ್ಲಬ್ ಕಾರ್ಯದರ್ಶಿ ಲೋಕೇಶ್. ಎಂ. ಅಭಿಪ್ರಾಯಪಟ್ಟರು. ಈ ಸಂದರ್ಭದಲ್ಲಿ ಲಿಯೋ ಅಧ್ಯಕ್ಷರು ಶ್ರೀಕಾಂತ್, ನಿರ್ದೇಶಕರು ಸುರೇಶ್ ಭಗತ್, ಮತ್ತು ಸಾದಲಿ ನರಸಿಂಹಮೂರ್ತಿ, ಎಂ ವಿ ಜೆ ಮೆಡಿಕಲ್ ಕಾಲೇಜಿನ ಡಾಕ್ಟರ್ ಸುದರ್ಶನ್ ಹಾಗೂ ಸುಹಾಸ್ ನೇತೃತ್ವದ ತಂಡ, ತಾಲೂಕು ಆರೋಗ್ಯನಿರೀಕ್ಷಣಾಧಿಕಾರಿ ದೇವರಾಜ್ ಮತ್ತು ಲೋಕೇಶ್, ಲಿಯೇ ಸದಸ್ಯರಾದ ಅನ್ವೇಷ್, ದುರ್ಗಾ ಪ್ರಸಾದ್, ಗೌತಮ್, ಅಭಿಲಾಷ್, ಪ್ರಜ್ವಲ್, ಗಂಗರಾಜು, ತಾತಹಳ್ಳಿ ಅಜಯ್ ಮತ್ತಿತ್ತರರು ಹಾಜರಿದ್ದರು.

# ಪವಿತ್ರ ಮೃತ್ತಿಕೆ ಸಂಗ್ರಹ: ಮಲ್ಲೇಶ್ವರದಲ್ಲಿ ನಾಡಪ್ರಭುವಿನ ಸ್ಮರಣೆ

ಬೆಂಗಳೂರು: ನಾಡಪ್ರಭು ಕೆಂಪೇಗೌಡರ ಕಂಚಿನ ಪ್ರತಿಮೆ ಲೋಕಾರ್ಪಣೆ ಭಾಗವಾಗಿ ನಡೆಯುತ್ತಿರುವ ರಾಜ್ಯ ಮಟ್ಟದ ಪವಿತ್ರ ಮೃತ್ತಿಕೆ ಸಂಗ್ರಹಣಾ ಕಾರ್ಯವು ಮಲ್ಲೇಶ್ವರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಭಾನುವಾರ ಮೇರೆ ಮೀರಿದ ಉತ್ಸಾಹದಿಂದ ನಡೆಯಿತು.

ಪವಿತ್ರ ಮೃತ್ತಿಕೆಯನ್ನು ಸಚಿವ ಡಾ.ಸಿ.ಎನ್. ಅಶ್ವತ್ಥನಾರಾಯಣ ಅವರಿಗೆ ಕ್ಷೇತ್ರದ ನಾಗರಿಕರು ಹಸ್ತಾಂತರಿಸಿದರು. ಮೊದಲಿಗೆ ಮತ್ತಿಕೆರೆಯ ನೇತಾಜಿ ವೃತ್ತದಲ್ಲಿ ಸಚಿವ ಮುನಿರತ್ನ ಪೂಜೆ ಸಲ್ಲಿಸಿ, ಮೃತ್ತಿಕೆ ಸಂಗ್ರಹಣೆಗೆ ಚಾಲನೆ ನೀಡಿದರು. ನಂತರ ಅಶ್ವತ್ಥನಾರಾಯಣ ಜತೆಗೂಡಿದರು.

ಮೊದಲು ಮತ್ತಿಕೆರೆ 3ನೇ ಮುಖ್ಯರಸ್ತೆಯಲ್ಲಿ ಹೆಜ್ಜೆ ಇಟ್ಟ ಕೆಂಪೇಗೌಡರ ಅಭಿಮಾನಿಗಳು, ನಂತರ 1ನೇ ಮುಖ್ಯ ರಸ್ತೆಯುಲ್ಲಿ ಹಬ್ಬದ ವಾತಾವರಣ ಸೃಷ್ಟಿಸಿದರು. ಮಧ್ಯದಲ್ಲಿ ಅಶ್ವತ್ಥನಾರಾಯಣ ಅವರು, ಬಸವಣ್ಣನವರ ಪ್ರತಿಮೆಗೆ ಪೂಜೆ ಸಲ್ಲಿಸಿ, ನಮಿಸಿದರು.

ಮೆರವಣಿಗೆ ಕೆ.ಎನ್. ಬಡಾವಣೆ, ಸುಬೇದಾರ್ ಪಾಳ್ಯ, ತ್ರಿವೇಣಿ ರಸ್ತೆಗಳಲ್ಲಿ ಸಾಗಿಬಂದಿತು. ದಾರಿಯುದ್ದಕ್ಕೂ ಅಲ್ಲಲ್ಲಿ ಇರುವ ದೇವಸ್ಥಾನಗಳ ಬಳಿ ನಾಡಪ್ರಭುವಿನ ರಥಗಳಿಗೆ ಪೂರ್ಣ ಕುಂಭ ಸ್ವಾಗತ ಕೋರಲಾಯಿತು. ಮತ್ತಿಕೆರೆಯ ಮುಸ್ಲಿಮರು ಅಭಿಯಾನದ ಜತೆ ಸೇರಿಕೊಂಡು, ಸಾಮರಸ್ಯದ ಸಂದೇಶ ಸಾರಿದರು.

ನಂತರ ರಾಜಕುಮಾರ್ ರಸ್ತೆ, ಸುಬ್ರಹ್ಮಣ್ಯ ನಗರ, ನಾಗರಾಜ್‌ರಸ್ತೆ ಮೂಲಕ ಇನ್ನೊಂದು ಸುತ್ತಿನ ಮೆರವಣಿಗೆ ನಡೆದು, ಮಹಾಕವಿ ಕುವೆಂಪು ರಸ್ತೆಯಲ್ಲಿ ಸಂಪನ್ನಗೊಂಡಿತು.

# ಚಂದ್ರು ಸಾವು: ಶಾಸಕ ರೇಣುಕಾಚಾರ್ಯ ನಿವಾಸಕ್ಕೆ ಸಿಎಂ ಬೊಮ್ಮಾಯಿ ಭೇಟಿ

ಶಾಸಕ ಎಂ.ಪಿ. ರೇಣುಕಾಚಾರ್ಯ ಅವರ ಸಹೋದರ ರಮೇಶ್ ಅವರ ಪುತ್ರ ಚಂದ್ರಶೇಖರ್ ನಿಗೂಢ ಸಾವಿನ ಹಿನ್ನೆಲೆಯಲ್ಲಿ ರೇಣುಕಾಚಾರ್ಯ ನಿವಾಸಕ್ಕೆ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಸೇರಿದಂತೆ ಬಿಜೆಪಿ ನಾಯಕರು ನಾಳೆ (ನವೆಂಬರ್ 9)ರಂದು ಭೇಟಿ ನೀಡಲಿದ್ದಾರೆ.

ನವೆಂಬರ್ 8ರ ರಾತ್ರಿ ಹೊಸದುರ್ಗ ತಾಲೂಕು ಸಾಣೇಹಳ್ಳಿಯಿಂದ ಹೊರಟು ದಾವಣಗೆರೆಗೆ ಆಗಮಿಸಲಿರುವ ಸಿಎಂ ಬಸವರಾಜ ಬೊಮ್ಮಾಯಿ, ಜಿಎಂಐಟಿಯಲ್ಲಿ ವಾಸ್ತವ್ಯ ಹೂಡಲಿದ್ದಾರೆ.

ನವೆಂಬರ್ 9ರಂದು ಬೆಳಗ್ಗೆ 9.45ಕ್ಕೆ ಜಿಎಂಐಟಿ ಹೆಲಿಪ್ಯಾಡ್‌ನಿಂದ ಹೊನ್ನಾಳಿ ತಾಲೂಕಿನ ಎಚ್.ಕಡದಕಟ್ಟೆಗೆ ಪ್ರಯಾಣ ಬೆಳೆಸಲಿರುವ ಸಿಎಂ, ಬೆಳಗ್ಗೆ 10.10ಕ್ಕೆ ಹೊನ್ನಾಳಿ ಪಟ್ಟಣದ ಶಾಸಕ ರೇಣುಕಾಚಾರ್ಯ ಅವರ ಮನೆಗೆ ಭೇಟಿ ನೀಡಲಿದ್ದಾರೆ. ಬಳಿಕ 11 ಗಂಟೆಗೆ ಮತ್ತೆ ಎಚ್. ಕಡದಕಟ್ಟೆ ಹೆಲಿಪ್ಯಾಡ್‌ನಿಂದ ಬೆಳಗಾವಿ ಜಿಲ್ಲೆಯ ರಾಯಬಾಗಕ್ಕೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಮುಖ್ಯಮಂತ್ರಿಗಳ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ. ಕುಟುಂಬಸ್ಥರಿಗೆ ಸಾಂತ್ವನ ಹೇಳಿದ ಸ್ವಾಮೀಜಿಗಳು ರಮೇಶ್ ಪುತ್ರ ಚಂದ್ರಶೇಖರ್ ನಿಗೂಢ ಸಾವಿನ ಹಿನ್ನೆಲೆಯಲ್ಲಿ ಇಂದು(ನವೆಂಬರ್8) ವಿವಿಧ ಮಠಗಳ ಮಠಾಧೀಶರು ಶಾಸಕ ರೇಣುಕಾಚಾರ್ಯ ಅವರ ನಿವಾಸಕ್ಕೆ ಭೇಟಿ ನೀಡಿ ಕುಟುಂಬಸ್ಥರಿಗೆ ಸಾಂತ್ವನ ಹೇಳಿದ್ದಾರೆ. ಹೊಸದುರ್ಗದ ಕುಂಚಿಟಿಗ ಮಹಾಸಂಸ್ಥಾನ ಮಠದ ಜಗದ್ಗುರು ಡಾ. ಶ್ರೀ ಶಾಂತವೀರ ಮಹಾಸ್ವಾಮೀಜಿ, ಚಿತ್ರದುರ್ಗದ ಶ್ರೀಜಗದ್ಗುರು ಸಿದ್ಧರಾಮೇಶ್ವರ ಮಹಾಸಂಸ್ಥಾನ ಭೋವಿಗುರುಪೀಠದ ಜಗದ್ಗುರು ಶ್ರೀ ಇಮ್ಮಡಿ ಸಿದ್ಧರಾಮೇಶ್ವರ ಮಹಾಸ್ವಾಮೀಜಿ, ಜಗದ್ಗುರು ಶ್ರೀ ಬಸವಮೂರ್ತಿ ಮಾದಾರ ಚೆನ್ನಯ್ಯ ಮಹಾಸ್ವಾಮೀಜಿ, ಜಗದ್ಗುರು ಶ್ರೀ ವಚನನಾಂದ ಮಹಾಸ್ವಾಮೀಜಿ, ಜಗದ್ಗುರು ಶ್ರೀ ಕೃಷ್ಣ ಯಾದವಾನಂದ ಮಹಾಸ್ವಾಮೀಜಿ, ಜಗದ್ಗುರು ಶ್ರೀ ಬಸವಮಾಚಿದೇವ ಸ್ವಾಮೀಜಿ, ಜಗದ್ಗುರು ಶ್ರೀ ಕುಂಬಾರ ಗುಂಡಯ್ಯ ಮಹಾಸ್ವಾಮೀಜಿ, ಜಗದ್ಗುರು ಶ್ರೀ ಅನ್ನದಾನಿ ಭಾರತಿ ಅಪ್ಪಣ್ಣ ಮಹಾಸ್ವಾಮೀಜಿ, ಶ್ರೀ ಬಸವಪ್ರಸಾದ ಮಹಾಸ್ವಾಮೀಜಿ ರೇಣುಕಾರ್ಯ ನಿವಾಸಕ್ಕೆ ಭೇಟಿ ನೀಡಿದರು. ಸಿಬಿಐ ಅಥವಾ ಎನ್‌ಐಎಗೆ ಪ್ರಕರಣ ಒಪ್ಪಿಸಿದರೆ ಸತ್ಯ ಹೊರಬರಲಿದೆ ಹೊನ್ನಾಳಿ ಶಾಸಕ ಎಂ. ಪಿ. ಶಾಸಕ ರೇಣುಕಾಚಾರ್ಯ ಅವರ ಸಹೋದರ ಪುತ್ರ ಎಂ. ಪಿ. ರಮೇಶ್ ಅವರ ಪುತ್ರ ಚಂದ್ರಶೇಖರ್ ನಿಗೂಢ ಸಾವಿನ ಪ್ರಕರಣವನ್ನು ಎನ್‌ಐಎ ಇಲ್ಲವೆ ಸಿಬಿಐ ತನಿಖೆಗೆ ಒಪ್ಪಿಸುವಂತೆ ಆಮ್ ಆದ್ಮಿ ಪಕ್ಷದ ಹೊನ್ನಾಳಿ ಘಟಕದ ಕಾರ್ಯಕರ್ತರು ಒತ್ತಾಯಿಸಿದ್ದಾರೆ. ಇಂದು ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿರುವ ಹೊನ್ನಾಳಿ



ತಾಲೂಕು ಘಟಕದ ಅಧ್ಯಕ್ಷ ಗುರುಪಾದಯ್ಯ ಮಠದ್, ಶಾಸಕ ರೇಣುಕಾಚಾರ್ಯ ಅವರೇ ಸ್ವತಃ ಪೊಲೀಸ್ ತನಿಖೆ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಅವರು ಶಾಸಕರು, ಸರ್ಕಾರದ ಅಂಗ. ಸಿಎಂ, ಗೃಹ ಸಚಿವರಿಗೆ ಆಗ್ರಹಿಸುವಷ್ಟು ಅವರೊಂದಿಗೆ ಉತ್ತಮ ಬಾಂಧವ್ಯ ಹೊಂದಿದ್ದಾರೆ. ಸಾವಿನ ನಿಖರತೆ ಇದುವರೆಗೆ ಗೊತ್ತಾಗಿಲ್ಲ. ಸ್ಪಷ್ಟತೆಯೂ ಸಿಕ್ಕಿಲ್ಲ. ಈ ಹಿನ್ನೆಲೆಯಲ್ಲಿ ಸಿಬಿಐ ಅಥವಾ ಎನ್‌ಐಎಗೆ ಪ್ರಕರಣ ಒಪ್ಪಿಸಿದರೆ ಸತ್ಯ ಹೊರಬರಲಿದೆ ಎಂದು ಹೇಳಿದರು. ಇದೊಂದು ವ್ಯವಸ್ಥಿತ ಕೊಲೆ ಎಂದು ಕುಟುಂಬಸ್ಥರು ಆರೋಪಿಸಿದ್ದಾರೆ ಚಂದ್ರಶೇಖರ್ ಸಾವಿನ ವಿಷಯದಲ್ಲಿ ಹೊನ್ನಾಳಿ ಕ್ಷೇತ್ರದ ಎಲ್ಲಾ ಪಕ್ಷಗಳು, ಸಂಘಟನೆಗಳು ಮತ್ತು ಜನತೆ ಪಕ್ಷಾತೀತವಾಗಿ ಶಾಸಕರು, ಅವರ ಕುಟುಂಬದ ಜೊತೆಗೆ ನಿಂತಿದ್ದೇವೆ. ಚಂದ್ರಶೇಖರ್ ಪಕ್ಷ, ಜಾತಿ, ರಾಜಕೀಯ ಭಿನ್ನಾಭಿಪ್ರಾಯ ಎಲ್ಲವುಗಳನ್ನೂ ಮೀರಿ ಎಲ್ಲರ ಸ್ನೇಹ ಗಳಿಸಿದ್ದರು. ಶಾಸಕರ ಕುಟುಂಬ ಮತ್ತು ನಮ್ಮ ಕ್ಷೇತ್ರದ ಜನತೆಗೆ ನ್ಯಾಯ ಕೊಡಿಸುವುದು ಸರ್ಕಾರದ ಆದ್ಯ ಕರ್ತವ್ಯವಾಗಿದೆ. ಚಂದ್ರಶೇಖರ್ ಅವರ ಸಾವು ಅಪಘಾತವೋ ಅಥವಾ ವ್ಯವಸ್ಥಿತ ಕೊಲೆಯೋ ಎಂಬ ಗೊಂದಲದಲ್ಲಿ ನಾವಿದ್ದೇವೆ. ಇದೊಂದು ವ್ಯವಸ್ಥಿತ ಕೊಲೆ ಎಂದು ಶಾಸಕರು ಮತ್ತು ಅವರ ಕುಟುಂಬ ಬಲವಾಗಿ ಪ್ರತಿಪಾದಿಸುತ್ತಿದೆ. ಈ ವಿಷಯದಲ್ಲಿ ರಾಜ್ಯ ಪೊಲೀಸರು ಸರಿಯಾದ ತನಿಖೆಯನ್ನು ಕೈಗೊಂಡಿಲ್ಲ ಎಂಬ ಮಾತು ಕೇಳಿ ಬರುತ್ತಿದೆ ಎಂದು ಗುರುಪಾದಯ್ಯ ಹೇಳಿದ್ದಾರೆ. ಪ್ರವೀಣ್ ನೆಟ್ಟಾರು, ಹರ್ಷ ಪ್ರಕರಣದಂತೆ ಚಂದ್ರು ಕೇಸ್ ಎನ್‌ಐಎಗೆ ನೀಡಿ ಇನ್ನು ತನಿಖೆ ಪೂರ್ಣಗೊಳ್ಳುವ ಮೊದಲೇ ಇದೊಂದು ಅಪಘಾತ ಎಂಬಂತೆ ಬಿಂಬಿಸಿ ಹೇಳಿಕೆ ನೀಡುತ್ತಿದ್ದಾರೆ ಎಂಬುದು ಶಾಸಕರು ಮತ್ತು ಅವರ ಕುಟುಂಬದ ಆಪಾದನೆಯಾಗಿದೆ. ಶಾಸಕರು ಪೊಲೀಸರ ತನಿಖಾ ವೈಫಲ್ಯದಿಂದ ರೋಸಿ ಹೋಗಿ ಪದೇ-ಪದೇ ಪೊಲೀಸರ ವಿರುದ್ಧ ಹರಿಹಾಯುತ್ತಿರುವುದು ಮಾಧ್ಯಮಗಳಲ್ಲಿ ಪ್ರಸಾರವಾಗುತ್ತಿದೆ. ಈ ಎಲ್ಲಾ ಬೆಳವಣಿಗೆಗಳಿಂದ ರಾಜ್ಯದಲ್ಲಿ ಮತ್ತು ನಮ್ಮ ಕ್ಷೇತ್ರದಲ್ಲಿ ದಿನಕ್ಕೊಂದು ಊಹಾಪೋಹಗಳು ಸೃಷ್ಟಿಯಾಗುತ್ತಿವೆ. ಈ ಹಿಂದೆ ನಡೆದಿರುವ ಪ್ರವೀಣ್ ನೆಟ್ಟಾರು ಮತ್ತು ಶಿವಮೊಗ್ಗದ ಹರ್ಷ ಕೊಲೆ ಪ್ರಕರಣಗಳನ್ನು ಎನ್‌ಐಎಗೆ ವಹಿಸಿರುವುದರಿಂದ ತನಿಖೆ ಸರಿಯಾದ ದಿಕ್ಕಿನಲ್ಲಿ ಶೀಘ್ರವಾಗಿ ನಡೆದು, ಆರೋಪಿಗಳ ಹೆಡೆಮುರಿ ಕಟ್ಟಲಾಗಿದೆ. ಆ ಮೂಲಕ ನೊಂದ ಕುಟುಂಬಗಳಿಗೆ ನ್ಯಾಯ ದೊರಕಿಸಿಕೊಡಲಾಗಿದೆ. ಆದ್ದರಿಂದ ಈ ಪ್ರಕರಣವನ್ನು ಸಹ ಗಂಭೀರವಾಗಿ ಪರಿಗಣಿಸಿ ಶಾಸಕ ಎಂ.ಪಿ. ರೇಣುಕಾಚಾರ್ಯರು ಮತ್ತು ಅವರ ಕುಟುಂಬದ ಅಭಿಪ್ರಾಯ ಪಡೆದು ಶೀಘ್ರವಾಗಿ ಚಂದ್ರಶೇಖರ್ ಸಾವಿಗೆ ನ್ಯಾಯ ದೊರಕಿಸಿಕೊಡಬೇಕು ಎಂದು ಆಮ್ ಆದ್ಮಿ ಪಕ್ಷದ ಮುಖಂಡರು ಒತ್ತಾಯಿಸಿದ್ದಾರೆ.

## ಚಂದ್ರಗ್ರಹಣ ಕಾಲದಲ್ಲಿ ದೇಗುಲ ಬಂದ್

2022ರಲ್ಲಿ ಸೂರ್ಯಗ್ರಹಣದ ಬೆನ್ನಲ್ಲೇ ಚಂದ್ರಗ್ರಹಣ ಬಂದಿದೆ. ನವೆಂಬರ್ 8ರಂದು ವರ್ಷದ ಎರಡನೇ ಮತ್ತು ಕೊನೆಯ ಚಂದ್ರಗ್ರಹಣಕ್ಕೆ ಭಾರತ ಸೇರಿದಂತೆ ವಿಶ್ವದ ಹಲವು ದೇಶಗಳು ಸಾಕ್ಷಿಯಾಗಲಿವೆ. ಖಗೋಳ ಕೌತುಕ ನೋಡಲು ಅನೇಕರು ಕಾತುರರಾಗಿದ್ದರೆ, ಭಕ್ತಾದಿಗಳು ತಮ್ಮ ರಾಶಿಯ ಮೇಲೆ ಏನು ಪ್ರಭಾವ ಬೀರಲಿದೆ ಯಾವ ರೀತಿ ಜಪ ತಪ ಆಚರಿಸಬೇಕು ಎಂಬುದರದಲ್ಲಿ ನಿರತರಾಗಿದ್ದಾರೆ. ಚಂದ್ರ ಗ್ರಹಣದ ಅಪ್ಡೇಟ್ಸ್ ಇಲ್ಲಿದೆ. ಸಂಪೂರ್ಣ ಚಂದ್ರಗ್ರಹಣವು ಸೂರ್ಯ ಮತ್ತು ಚಂದ್ರನ ನಡುವೆ ಭೂಮಿ ಬಂದಾಗ ಸಂಭವಿಸುತ್ತದೆ. ಈ ಬಾರಿ ಬ್ಲಡ್ ಮೂನ್ ಅಥವಾ ರಕ್ತ ಚಂದ್ರ ದರ್ಶನ ಭಾಗ್ಯ ಸಿಗಲಿದೆ.



ಇದಕ್ಕಾಗಿ ನಾಸಾ ಸೇರಿದಂತೆ ಹಲವು ಬಾಹ್ಯಾಕಾಶ ಸಂಸ್ಥೆಗಳು ವಿವಿಧ ಟೆಲಿಸ್ಕೋಪ್ ಬಳಸಿ ವೀಕ್ಷಣೆಗೆ ಸಜ್ಜಾಗಿವೆ. ಆದರೆ, ಸಂಪೂರ್ಣ ಚಂದ್ರಗ್ರಹಣವು ಪೂರ್ವ ಭಾಗಗಳಿಂದ ಮಾತ್ರ ಗೋಚರಿಸುತ್ತದೆ ಆದರೆ ಭಾಗಶಃ ಗ್ರಹಣವು ಭಾರತದ ಹೆಚ್ಚಿನ ಭಾಗಗಳಲ್ಲಿ ಗೋಚರಿಸುತ್ತದೆ.

ಭಾರತ ಮತ್ತು ನೆರೆಯ ಪಾಕಿಸ್ತಾನ, ಅಫ್ಘಾನಿಸ್ತಾನ ಮತ್ತು ರಷ್ಯಾದ ಕೆಲವು ಭಾಗಗಳಲ್ಲದೆ, ಏಷ್ಯಾ, ಉತ್ತರ ಮತ್ತು ದಕ್ಷಿಣ ಅಮೆರಿಕ, ಆಸ್ಟ್ರೇಲಿಯಾ, ಉತ್ತರ ಅಟ್ಲಾಂಟಿಕ್ ಮಹಾಸಾಗರ, ಪೆಸಿಫಿಕ್ ಸಾಗರದ ಇತರ ಭಾಗಗಳ ನಿವಾಸಿಗಳು ಖಗೋಳ ಘಟನೆಯನ್ನು ವೀಕ್ಷಿಸಬಹುದಾಗಿದೆ. ಚಂದ್ರಗ್ರಹಣ ಆರಂಭ – ಅಂತ್ಯ ಭಾಗಶಃ ಚಂದ್ರಗ್ರಹಣ ಆರಂಭ – ಮಧ್ಯಾಹ್ನ 2.39ಕ್ಕೆ ಪೂರ್ಣ ಚಂದ್ರಗ್ರಹಣ ಆರಂಭ – ಮಧ್ಯಾಹ್ನ 3.46 ಗರಿಷ್ಠ ಪೂರ್ಣ ಚಂದ್ರಗ್ರಹಣ – ಮಧ್ಯಾಹ್ನ 4:29 ಪೂರ್ಣ ಚಂದ್ರಗ್ರಹಣ ಕೊನೆಗೊಳ್ಳುವ ಸಮಯ – ಸಂಜೆ 5:11 ಕೋಲ್ಕತ್ತಾ: ಸಂಜೆ 4:54 ಕೊಹಿಮಾ: ಸಂಜೆ 4:29 ದೆಹಲಿ: ಸಂಜೆ 5:31 ಬೆಂಗಳೂರು: ಸಂಜೆ 5:57 ಮುಂಬೈ: ಸಂಜೆ 6:03 ನಾಗ್ಪುರ: ಸಂಜೆ 5:32 ಶ್ರೀನಗರ: ಸಂಜೆ 5:31 ಮುಂದಿನ ಸಂಪೂರ್ಣ ಚಂದ್ರಗ್ರಹಣವು ಮೂರು ವರ್ಷಗಳ ನಂತರ ಮಾರ್ಚ್ 14, 2025 ರಂದು ಸಂಭವಿಸುತ್ತದೆ.. ಚಂದ್ರಗ್ರಹಣ ಕುರಿತ ಇನ್ನಷ್ಟು ವಿವರ ಮುಂದಿದೆ. ಒಂದು ಟೇಕ್‌ನಲ್ಲಿ ಚಂದ್ರಗ್ರಹಣದ ಟೈಮ್‌ಲ್ಯಾಪ್ಸ್ ಚಿತ್ರ ಸೆರೆ ಹಿಡಿಯಲು ಯತ್ನಿಸಿದೆ ಆದರೆ, ಸಾಧ್ಯವಾಗಲಿಲ್ಲ ಆದರೆ ಇನ್ನೂ ಚೆನ್ನಾಗಿದೆ ಎಂದು ಟ್ವಿಟ್ಟರ್ ಬಳಕೆದಾರರು ಬರೆದಿದ್ದಾರೆ. 4:35 ಕಒ, 8 ಓಔಗಿ ಲೈವ್ ವೀಕ್ಷಣೆ ಸಂಪೂರ್ಣ ಚಂದ್ರಗ್ರಹಣ #ಃಟಠಠಜಒಠಠಟಿ ಮಂಗಳವಾರ, ನವೆಂಬರ್ 8 ರಂದು 5:17ಚಿಟ ಇಖಿ (1017 ಗಖಿಅ) ಕ್ಕೆ ಉತ್ತುಂಗ ತಲುಪಲಿದೆ. ಲೈವ್ ವೀಕ್ಷಣೆಗಾಗಿ ನಾಸಾ ವೆಬ್ ತಾಣ, ಯೂಟ್ಯೂಬ್ ವೀಕ್ಷಿಸಿ 4:21 ಕಒ, 8 ಓಔಗಿ ವೀಕ್ಷಕರ ಕಣ್ಣಲ್ಲಿ ಚಂದ್ರಗ್ರಹಣ ವೀಕ್ಷಕರ ಕಣ್ಣಲ್ಲಿ ಚಂದ್ರಗ್ರಹಣ ಕಂಡಿದ್ದು ಹೇಗೆ ಆಸಕ್ತರು ತಮ್ಮ ಲಭ್ಯ ಸಾಧನಗಳ ಮೂಲಕ ಗ್ರಹಣವನ್ನು ಸೆರೆ ಹಿಡಿದಿದ್ದಾರೆ.

## ನಾನು ಇನ್ನು ಸತ್ತಿಲ್ಲ.. ಈಗಲೇ ಸಾಯಲ್ಲ": ಹಾಸಿಗೆ ಹಿಡಿಸಿರುವ ಕಾಯಿಲೆ ಬಗ್ಗೆ ಮಾತನಾಡುತ್ತಾ ಸಮಂತಾ ಭಾವುಕ!

ಖ್ಯಾನ ನಟಿ ಸಮಂತಾ ಮಯೋಸೈಟಿಸ್ ಎನ್ನುವ ದೀರ್ಘಕಾಲದ ಸ್ನಾಯು ರೋಗದಿಂದ ಬಳಲುತ್ತಿದ್ದಾರೆ. ಇತ್ತೀಚೆಗೆ ಸಮಂತಾ ಈ ವಿಚಾರವನ್ನು ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದರು. ಇದನ್ನು ಕೇಳಿ ಚಿತ್ರರಂಗದ ಪ್ರಮುಖರು, ಅಭಿಮಾನಿಗಳು ಆಕೆಗೆ ಧೈರ್ಯ ತುಂಬುತ್ತಿದ್ದಾರೆ. ಇತ್ತೀಚೆಗೆ ಸಂದರ್ಶನದಲ್ಲಿ ಮಾತನಾಡುತ್ತಾ ತಾನು ಆ ಕಾಯಿಲೆ ವಿರುದ್ಧ ಹೋರಾಟುತ್ತಿದ್ದು, ಅದನ್ನು ಹಿಮ್ಮೆಟ್ಟಿಸುತ್ತೇನೆ ಎಂದು ಭರವಸೆ ವ್ಯಕ್ತಪಡಿಸಿದ್ದಾರೆ. 'ಯಶೋದ' ಸಿನಿಮಾ ಪ್ರಚಾರಕ್ಕಾಗಿ ನೀಡಿದ ತಮಿಳು, ತೆಲುಗು ಸಂದರ್ಶನಗಳಲ್ಲಿ ಸಮಂತಾ ತಮ್ಮ ಆರೋಗ್ಯದ ಬಗ್ಗೆ ಮಾತನಾಡಿದ್ದಾರೆ. ಪ್ರಪಂಚದಲ್ಲಿ ಮಯೋಸೈಟಿಸ್ ರೋಗವನ್ನು ಸಾಕಷ್ಟು ಜನ ಸಮರ್ಥವಾಗಿ ಎದುರಿಸುತ್ತಿದ್ದಾರೆ ಎಂದು ಸಮಂತಾ ಹೇಳಿದ್ದಾರೆ. ತಾನು ಕೂಡ ಇದನ್ನು ಎದುರಿಸಿದ್ದೇನೆ ಎಂದು ಆತ್ಮ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಈ ಬಗ್ಗೆ ಮಾತನಾಡುತ್ತಾ ಆಕೆ ತೀವ್ರ ಭಾವೋದ್ವೇಗಕ್ಕೆ ಒಳಗಾಗಿದ್ದರು. ಶೀಘ್ರದಲ್ಲೇ ನಾನು ಇದರಿಂದ ಹೊರ ಬರುತ್ತೇನೆ. ನಾನು ಶೀಘ್ರದಲ್ಲೇ ಸಾಯುವುದಿಲ್ಲ ಎಂದು ಸಮಂತಾ ಅಲವತ್ತುಕೊಂಡಿದ್ದಾರೆ. ಸೋಶಿಯಲ್ ಮೀಡಿಯಾ ಪೋಸ್ಟ್‌ನಲ್ಲಿ ಹೇಳಿದಂತೆ ಕೆಲವು ಒಳ್ಳೆ ದಿನಗಳು ಕೆಲವು ಕೆಟ್ಟ ದಿನಗಳು ಎಲ್ಲರ ಜೀವನದಲ್ಲೂ ಬರುತ್ತದೆ ಎಂದು ಸಮಂತಾ ವಿವರಿಸಿದ್ದಾರೆ.



ಇದೇ ಶುಕ್ರವಾರ ಸಮಂತಾ ನಟನೆಯ ಸಸ್ಪೆನ್ಸ್ ಥ್ರಿಲ್ಲರ್ 'ಯಶೋದ' ಸಿನಿಮಾ ತೆರೆಗೆ ಬರುತ್ತಿದೆ. ಪ್ಯಾನ್ ಇಂಡಿಯಾ ಲೆವೆಲ್‌ನಲ್ಲಿ ಕನ್ನಡ ಸೇರಿದಂತೆ 5 ಭಾಷೆಗಳಲ್ಲಿ ಸದ್ದು ಮಾಡಲಿದೆ. ಅನಾರೋಗ್ಯದಿಂದ ಚಿಕಿತ್ಸೆ ಪಡೆಯುತ್ತಿದ್ದ ಸಮಂತಾ ಸಿನಿಮಾ ರಿಲೀಸ್ ಹೊಸ್ತಿಲಲ್ಲಿ ಪ್ರಚಾರ ಕಾರ್ಯದಲ್ಲಿ ಬ್ಯುಸಿಯಾಗಿದ್ದಾರೆ. ಸಮಂತಾ ಭಾವುಕ "ಒಂದೊಂದು ದಿನ ನನಗೆ ಒಂದು ಹೆಜ್ಜೆ ಕೂಡ ಮುಂದೆ ಹಾಕಲು ಸಾಧ್ಯವಾಗುವುದಿಲ್ಲ ಹಾಕಿದರೆ ಎಲ್ಲಾ ಮುಗಿದೇ ಹೋಗುತ್ತದೆ ಅನ್ನಿಸುತ್ತದೆ. ಕೆಲ ದಿನಗಳ ನಂತರ ಹಿಂದೆ ತಿರುಗಿ ನೋಡಿದರೆ ನಾನು ಇದನ್ನೆಲ್ಲಾ ದಾಟಿ ಬಂದಿದ್ದೇನಾ ಎನಿಸುತ್ತದೆ" ಎಂದು ಸ್ಯಾಮ್ ಭಾವುಕರಾಗಿದ್ದಾರೆ. ಈಗ ನೀವು ವಿಚಾರವನ್ನು ಬಹಿರಂಗಪಡಿಸಿದಿದ್ದೀರಾ. ಬಹಿರಂಗ ಪಡಿಸುವ ಮುನ್ನ ಇದರ ವಿರುದ್ಧ ಹೋರಾಡುತ್ತಾ ಎಷ್ಟು ಕಷ್ಟಪಟ್ಟಿರುತ್ತಿರೋ ನನಗೆ ಗೊತ್ತು ಎಂದು ನಿರೂಪಕಿ ಸುಮಾ ಹೇಳಿದ್ದಕ್ಕೆ "ನಾನೊಬ್ಬಳೇ ಅಲ್ಲ, ಜೀವನದಲ್ಲಿ ಎಷ್ಟೋ ಸಮಸ್ಯೆಗಳ ವಿರುದ್ದ ಹೋರಾಡುವವರು ಸಾಕಷ್ಟು ಜನ ಇದ್ದಾರೆ" ಎಂದಿದ್ದಾರೆ.

ನಾನು ಈಗಲೇ ಸಾಯುವುದಿಲ್ಲ: ಸಮಂತಾ

"ಈಗ ಮೂರು ತಿಂಗಳಾಯಿತು. ಅಂದಿನಿಂದಲೂ ಚಿಕಿತ್ಸೆ ಪಡೆಯುತ್ತಿದ್ದೇನೆ. ನಾನು ಶೀಘ್ರದಲ್ಲೇ ಸಾಯುವುದಿಲ್ಲ ಎಂದು ಸ್ಪಷ್ಟಪಡಿಸಲು ಬಯಸುತ್ತೇನೆ. ನನಗೆ ಪ್ರಾಣಾಪಾಯವಿದೆ, ಬದುಕಲ್ಲ ಅಂತೆಲ್ಲಾ ಏನೇನೋ ಸುದ್ದಿ ಹರಿದಾಡಿತು. ಇಲ್ಲ ನಾನು ಸದ್ಯದಲ್ಲಿ ಸಾಯುವುದಿಲ್ಲ. ಇದು ಅಟೊ ಇಮ್ಯೂನ್ ಕಂಡೀಷನ್. ಇದು ಬರಿದಾಗುತ್ತಿದೆ ಮತ್ತು ದಣಿದಿದೆ. ನಾನು ಹೋರಾಟಗಾರ್ತಿ, ಹೋರಾಡುತ್ತಲೇ ಇರುತ್ತೀನಿ" ಎಂದು ಸಮಂತಾ ಮತ್ತೊಂದು ಸಂದರ್ಶನದಲ್ಲಿ ಹೇಳಿದ್ದಾರೆ. ನಿಜಕ್ಕೂ ಕರಾಳ ಸಮಯ ಚೇತರಿಸಿಕೊಳ್ಳುವ ದಿನಗಳು ಹೇಗಿತ್ತು ಎನ್ನುವ ಪ್ರಶ್ನೆಗೆ "ನಾನು ಸಮಯವನ್ನು ಉತ್ತಮ ರೀತಿಯಲ್ಲಿ ಬಳಸಿಕೊಂಡಿದ್ದೇನೆ. ಇದು ನಿಜಕ್ಕೂ ಕರಾಳ ಸಮಯ ಮತ್ತು ತುಂಬಾ ಕಷ್ಟಕರವಾಗಿತ್ತು. ಹೆಚ್ಚಿನ ಡೋಸ್ ಔಷಧಿಗಳು ಮತ್ತು ವೈದ್ಯರ ಜೊತೆಗೆ ಓಡಾಟದಿಂದಲೇ ದಿನಗಳು ಮುಗಿಯುತ್ತಿತ್ತು. ನೀವು ಪ್ರತಿದಿನವನ್ನು ಉತ್ತಮವಾಗಿ ಬಳಸಿಕೊಳ್ಳಲು ಸಾಧ್ಯವಾಗದಿದ್ದರೂ ಪರವಾಗಿಲ್ಲ. ಕೆಲವೊಮ್ಮೆ ವಿಫಲವಾದರೂ ಪರವಾಗಿಲ್ಲ. ಎಲ್ಲಾ ಸಮಯದಲ್ಲೂ ನಿಮ್ಮ ಅತ್ಯುತ್ತಮವಾಗದಿದ್ದರೂ ಪರವಾಗಿಲ್ಲ. ನೀವು ದುರ್ಬಲ ಮತ್ತು ಅನಾರೋಗ್ಯಕ್ಕೆ ಒಳಗಾಗಬಹುದು" ಎಂದಿದ್ದಾರೆ. 'ಖುಷಿ' ಸಿನಿಮಾ ಶೂಟಿಂಗ್ ಮುಂದಕ್ಕೆ ಸಮಂತಾ ನಟನೆಯ 'ಯಶೋದ' ಸಿನಿಮಾ ಈ ವಾರ ಪ್ರೇಕ್ಷಕರ ಮುಂದೆ ಬರ್ತಿದೆ. 'ಶಾಕುಂತಲಂ' ಎನ್ನುವ ಮತ್ತೊಂದು ಮಹಿಳಾ ಪ್ರಧಾನ ಚಿತ್ರದಲ್ಲೂ ಆಕೆ ನಟಿಸಿದ್ದು, ಅದು ಕೂಡ ಬಿಡುಗಡೆಗೆ ಸಿದ್ಧವಾಗಿದೆ. ವಿಜಯ್ ದೇವರಕೊಂಡ ಜೊತೆ 'ಖುಷಿ' ಎನ್ನುವ ಸಿನಿಮಾದಲ್ಲಿ ಬಣ್ಣ ಹಚ್ಚಿದ್ದಾರೆ. ಅನಾರೋಗ್ಯದ ಕಾರಣ ಆ ಸಿನಿಮಾ ಶೂಟಿಂಗ್ ಮುಂದೂಡಲಾಗಿದೆ.

# ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು

(ಕರ್ನಾಟಕ ಸರ್ಕಾರದ ಸ್ವಾಮ್ಯಕ್ಕೆ ಒಳಪಟ್ಟಿದೆ)

ಸೈರಾಬಾಗ್, ನಂ.19/4, 2ನೇ ಮಹಡಿ, ಕನ್ನಿಂಗ್‌ಹ್ಯಾಂ ರೋಡ್, ಬೆಂಗಳೂರು-52

ಕಛೇರಿ ದೂರವಾಣಿ : 080-22285561, 62, 63, 65



**ಶ್ರೀ ಬಸವರಾಜ ಎಸ್.ಬೊಮ್ಮಾಯಿ**
ಸನ್ಮಾನ್ಯ ಮುಖ್ಯಮಂತ್ರಿಗಳು,
ಕರ್ನಾಟಕ ಸರ್ಕಾರ



**ಶ್ರೀ ಕೋಟ ಶ್ರೀನಿವಾಸ ಪೂಜಾರಿ**
ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ
ವರ್ಗಗಳ ಕಲ್ಯಾಣ ಸಚಿವರು



**ಶ್ರೀ ಪಿ.ರಾಜೀವ್**
ಮಾನ್ಯ ಅಧ್ಯಕ್ಷರು,
ತಾಂಡಾ ಅಭಿವೃದ್ಧಿ ನಿಗಮ ನಿಯಮಿತ

- ಮೂಲ ಗ್ರಾಮಗಳಿಂದ ದೂರದಲ್ಲಿ ನಿರ್ಮಾಣಗೊಂಡಿರುವ ತಾಂಡಾಗಳಲ್ಲಿ ವಾಸವಾಗಿರುವ ಬಂಜಾರ/ಲಂಬಾಣಿ ಸಮುದಾಯಕ್ಕೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಿ, ಸರ್ವತೋಮುಖ ಅಭಿವೃದ್ಧಿಪಡಿಸಿ ಸಮಾಜದ ಮುಖ್ಯವಾಹಿನಿಗೆ ತರುವ ಉದ್ದೇಶದಿಂದ ಕರ್ನಾಟಕ ಸರ್ಕಾರದಿಂದ ಕಂಪನಿ ಕಾಯ್ದೆ 1956ರ ಅಡಿಯಲ್ಲಿ ದಿನಾಂಕ: 23.02.2009 ರಂದು ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮವನ್ನು ಸ್ಥಾಪಿಸಲಾಗಿದೆ. ನಿಗಮವು ಬಂಜಾರ ಸಮುದಾಯದ ಆರ್ಥಿಕ, ಸಾಮಾಜಿಕ, ಸಾಂಸ್ಕೃತಿಕ ಅಭಿವೃದ್ಧಿಗಾಗಿ ಕಾರ್ಯಯೋಜನೆಯನ್ನು ಅನುಷ್ಠಾನಗೊಳಿಸುತ್ತಿದೆ.
- ರಾಜ್ಯ ಸರ್ಕಾರವು ಪರಿಶಿಷ್ಟ ಜಾತಿ ಲಂಬಾಣಿ (ಬಂಜಾರ) ಜನಾಂಗದ ಅಭಿವೃದ್ಧಿಗಾಗಿ ಯೋಜನೆಗಳ ಅನುಷ್ಠಾನಕ್ಕಾಗಿ 2022-23ನೇ ಸಾಲಿನಲ್ಲಿ ನಿಗಮಕ್ಕೆ ಆಯವ್ಯಯದಲ್ಲಿ ಒಟ್ಟು ರೂ.123.50 ಕೋಟಿ ಅನುದಾನವನ್ನು ಹಂಚಿಕೆ ಮಾಡಿರುತ್ತದೆ. ಸದರಿ ಅನುದಾನಕ್ಕೆ ಸಂಬಂಧಿಸಿದಂತೆ, ಮೂಲಭೂತ ಸೌಕರ್ಯಗಳಾದ ಸಿ.ಸಿ. ರಸ್ತೆ, ಸಂಪರ್ಕ ರಸ್ತೆ, ಸೇವಾಲಾಲ್ ಸಮುದಾಯ ಭವನ, ಸೇವಾಲಾಲ್ ಸಾಂಸ್ಕೃತಿಕ ಕೇಂದ್ರ, ಸ್ವಯಂ ಉದ್ಯೋಗ, ನೇರಸಾಲ ಯೋಜನೆ, ಉದ್ಯಮಶೀಲತಾ ಅಭಿವೃದ್ಧಿ ಯೋಜನೆ, ಪ್ರೇರಣಾ (ಮೈಕ್ರೋ ಕ್ರೆಡಿಟ್) ಯೋಜನೆ, ಭೂ ಒಡೆತನ (ವೃದ್ಧಿ) ಯೋಜನೆ, ಗಂಗಾ ಕಲ್ಯಾಣ ಯೋಜನೆ ಹಾಗೂ ತಾಂಡಾದ ಜನರಿಗೆ ಅರಿವು ಮತ್ತು ಜಾಗೃತಿ ಮೂಡಿಸುವ ಕಾರ್ಯಕ್ರಮ. ಕಲಾಮಳಾವ್ ಬಂಜಾರ ಕಸೂತಿ ಕಲೆ ಸೇರಿ ಇತರೆ, ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.
- ಐಸಿಐಸಿಐ ಕೌಶಲ್ಯಾಭಿವೃದ್ಧಿ ಸೇವಾ ಸಂಸ್ಥೆ ಸಹಯೋಗದಲ್ಲಿ ವಿದ್ಯಾವಂತ ನಿರುದ್ಯೋಗಿ ಬಂಜಾರ ಯುವಕ ಯುವತಿಯರಿಗಾಗಿ ವೃತ್ತಿ ಕೌಶಲ್ಯ ತರಬೇತಿಯನ್ನು ಹಮ್ಮಿಕೊಳ್ಳಲಾಗಿದೆ.

## ವೈಯುಕ್ತಿಕ ಫಲಾನುಭವಿ ಯೋಜನೆಗಳು (ಪರಿಶಿಷ್ಟ ಜಾತಿಯ ಬಂಜಾರ ನಿರುದ್ಯೋಗಿಗಳಿಗಾಗಿ)

1. ನೇರಸಾಲ ಯೋಜನೆ :

* ಕಿರು ಆರ್ಥಿಕ ಚಟುವಟಿಕೆಗಳಿಗೆ ಘಟಕ ವೆಚ್ಚ ರೂ.1,00,000/-ಗಳ (ಗರಿಷ್ಠ ಸಹಾಯಧನ ರೂ.50,000/- ಸಾಲ ರೂ.50,000/-) ಸೌಲಭ್ಯವನ್ನು ನಿಗಮದಿಂದ ನೇರವಾಗಿ ಮಂಜೂರಾತಿ ಮಾಡಲಾಗುವುದು.

2. ಉದ್ಯಮಶೀಲತಾ ಅಭಿವೃದ್ಧಿ ಯೋಜನೆ:(ಐ.ಎಸ್.ಬಿ)

* ಇ.ವಿ. ಮತ್ತು ಇತರೆ ದ್ವಿಚಕ್ರ ವಾಹನ ಖರೀದಿ(ಇ-ಕಾಮರ್ಸ್‌ನಡಿಯಲ್ಲಿ ಕಂಪನಿಗಳಿಂದ ಗ್ರಾಹಕರಿಗೆ ಸರಕು ತಲುಪಿಸಲು): ಗರಿಷ್ಟ ರೂ.50,000/- ಸಹಾಯಧನ, ಉಳಿದ ಮೊತ್ತ ಬ್ಯಾಂಕ್ ಸಾಲ.
* ಐ.ಎಸ್.ಬಿ. ಚಟುವಟಿಕೆಗಳಿಗಾಗಿ ಸಹಾಯಧನ: ಗರಿಷ್ಠ ರೂ.2.00 ಲಕ್ಷ ಉಳಿದ ಮೊತ್ತ ಬ್ಯಾಂಕ್‌ನಿಂದ ಸಾಲ.
* ಸರಕು ಸಾಗಾಣಿಕೆ ವಾಹನ: ಗರಿಷ್ಠ ರೂ.3.50 ಲಕ್ಷ ಸಹಾಯಧನ, ಉಳಿದ ಮೊತ್ತ ಬ್ಯಾಂಕ್ ಸಾಲ.

3. ಪ್ರೇರಣಾ (ಮೈಕ್ರೋ ಕ್ರೆಡಿಟ್ ಫೈನಾನ್ಸ್) ಯೋಜನೆ:-


* ಮಹಿಳೆಯರಲ್ಲಿ ಗುಂಪು ಆರ್ಥಿಕ ಚಟುವಟಿಕೆಗಳಿಗೆ ಉತ್ತೇಜನ ನೀಡಲು ಆದಾಯಗಳಿಸಲು ಅನುವಾಗುವಂತೆ ಕನಿಷ್ಠ 10 ಸಂಖ್ಯೆಯ ಸದಸ್ಯರಿರುವ ಮಹಿಳಾ ಸ್ವಸಹಾಯ ಸಂಘಗಳಿಗೆ ರೂ. 2.50 ಲಕ್ಷಗಳನ್ನು ಮಂಜೂರು ಮಾಡಲಾಗುವುದು. ಇದರಲ್ಲಿ ರೂ.1.50 ಲಕ್ಷ ಸಹಾಯಧನ ಮತ್ತು ರೂ.1.00 ಲಕ್ಷ ಸಾಲ.

4. ಗಂಗಾ ಕಲ್ಯಾಣ ಯೋಜನೆ:

* ಬಂಜಾರ/ಲಂಬಾಣಿ ಜನಾಂಗದ ಸಣ್ಣ ಮತ್ತು ಅತಿಸಣ್ಣ ರೈತರು ಹೊಂದಿರುವ ಖುಷ್ಕಿ/ಒಣ ಜಮೀನಿನಲ್ಲಿ ಘಟಕ ವೆಚ್ಚ ರೂ.3.50/4.50 ಲಕ್ಷಗಳಲ್ಲಿ ಕೊಳವೆಬಾವಿ ಕೊರೆಯಿಸಿ ನೀರಾವರಿ ಸೌಲಭ್ಯ ಕಲ್ಪಿಸಲಾಗುವುದು.

5. ಭೂ-ಒಡೆತನ ಯೋಜನೆ

* ಭೂ ರಹಿತ ಮಹಿಳಾ ಕೃಷಿ ಕಾರ್ಮಿಕರಿಗೆ ರೂ.20.00/25.00 ಲಕ್ಷಗಳಲ್ಲಿ ಜಮೀನನ್ನು ಖರೀದಿಸಿ ಕೊಡಲಾಗುವುದು. ಘಟಕ ವೆಚ್ಚದಲ್ಲಿ ಶೇ.50% ಸಹಾಯಧನ ಶೇ. 50% ಸಾಲ.
* ಈ ಯೋಜನೆಗಳಿಗೆ ಆನ್‌ಲೈನ್ ಮೂಲಕ ಅರ್ಜಿಗಳನ್ನು ಫಲಾಪೇಕ್ಷಿಗಳಿಂದ ಗ್ರಾಮೊನ್, ಬೆಂಗಳೂರು ಒನ್, ಕರ್ನಾಟಕ ಒನ್ ಗಳಲ್ಲಿ ಸೇವಾಸಿಂಧು ತಂತ್ರಾಂಶದ ಮೂಲಕ ಆಹ್ವಾನಿಸಲಾಗುತ್ತಿದೆ. ಈ ಯೋಜನೆಗಳನ್ನು DBT ಮೂಲಕ ನೇರವಾಗಿ ಫಲಾನುಭವಿಗಳಿಗೆ ಸಹಾಯಧನ ಬಿಡುಗಡೆ ಮಾಡಲಾಗುತ್ತಿದೆ.




ವ್ಯವಸ್ಥಾಪಕ ನಿರ್ದೇಶಕರು

Printed by : SANTHOSH KUMAR K., Published by : SANTHOSH KUMAR K., Owned by : SANTHOSH KUMAR K , Printed at : SLN Printers & Publishers, 233/32, 10 Cross, Neel restorant, Geddalahalli, RMV Extension, 2nd Stage Bangalore - 560 094. Published at : 233/32, 10 Cross, Neel restorant, Geddalahalli, RMV Extension 2nd Stage, Bangalore - 560 094. Editor: SANTHOSH KUMAR K. email prathibhatanesanthoshkumar@gmail.com, Mob : 9845222299, 9448200759